ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 272
26–4–2025 ಶನಿವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 272

## ದಾವಣಗೆರೆಯಲ್ಲಿ ಪಾಕ್ ಪ್ರಜೆ

**ದಾವಣಗೆರೆ:** ನಗರದಲ್ಲಿ ಒಬ್ಬ ಪಾಕಿಸ್ತಾನಿ ಪ್ರಜೆ ಇದ್ದಾರೆ ಎಂದು ಎಸ್ಪಿ ಉಮಾ ಪ್ರಶಾಂತ್ ಹೇಳಿದ್ದಾರೆ.

ಪಾಕ್ ಪ್ರಜೆ ಜೆಜೆಎಂ ಮೆಡಿಕಲ್ ಕಾಲೇಜಿನಲ್ಲಿ ಓದುತ್ತಿದ್ದಾರೆ. ಈ ವಿದ್ಯಾರ್ಥಿಯ ವೀಸಾ ಅವಧಿ ಮುಗಿದಿಲ್ಲ. ಕೇಂದ್ರದಿಂದ ಯಾವುದೇ ಸೂಚನೆ ಬಂದಿಲ್ಲ ಎಂದು ಸಷ್ಟನೆ ನೀಡಿದ್ದಾರೆ.

## ಪೆಹಲ್ಗಾಮ್ ದಾಳಿ: ನಿರ್ದಾಕ್ಷಿಣ್ಯ ಕ್ರಮಕ್ಕೆ ಪ್ರಭಾ ಆಗ್ರಹ

**ದಾವಣಗೆರೆ:** ನಿನ್ನೆ ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಂನಲ್ಲಿ



ಭಯೋತ್ಪಾದಕರು ನಿರ್ದೋಷಿ ಪ್ರವಾಸಿಗರ ಮೇಲೆ ನಡೆಸಿದ ಹೀನಕೃತ್ಯ ದೇಶದ ಜನಮನವನ್ನು ಬೆಚ್ಚಿ ಬೀಳಿಸಿದ್ದು, ಕೃತ್ಯವನ್ನು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ತೀವ್ರವಾಗಿ ಖಂಡಿಸಿದ್ದಾರೆ.

ಇದು ರಾಷ್ಟ್ರದ ಏಕತೆ ಮತ್ತು ಅಖಂಡತೆಯ ಮೇಲೆ ನೇರದಾಳಿಯಾಗಿದ್ದು, ಅತ್ಯಂತ ಶೋಕಾಜನಕ ಹಾಗೂ

ಧಿಕ್ಕಾರಾರ್ಹ ಘಟನೆ ಆಗಿದೆ ಎಂದು ಅಭಿಪ್ರಾಯಪಟ್ಟಿರುವ ಈ ದಾಳಿಯು 2000ರ ಚಿಟ್ಟಿಸಿಂಘಪುರ ನರಮೇಧದ ನಂತರದ ಅತ್ಯಂತ ಘೋರ ಘಟನೆಗಳಲ್ಲಿ ಒಂದಾಗಿದೆ. ನಿರಾಯುಧ ನಾಗರಿಕರನ್ನು ಗುರಿಯಾಗಿಸುವ ಈ ಕೃತ್ಯವನ್ನು ಎತ್ತಿ ಹಿಡಿಯುವುದು ಮಾನವೀಯತೆಯ ವಿರುದ್ಧದ ನಡೆ ಎಂದು ತಿಳಿಸಿದ್ದಾರೆ.

ಈ ಘಟನೆಯಲ್ಲಿ ರಾಜಕೀಯಕ್ಕೆ ಜಾಗವಿಲ್ಲ. ನಾವು ಒಟ್ಟಾಗಿ ನಿಂತು, ಶೋಕಸಂತಪ್ತ ಕುಟುಂಬಗಳಿಗೆ ನ್ಯಾಯ ದೊರಕಿಸಲು ಶ್ರಮಿಸಬೇಕಿದೆ. ಕರ್ನಾಟಕದ ಮೂವರು ಅಮೂಲ್ಯ ಜೀವಗಳನ್ನು ಕಳೆದುಕೊಂಡಿದ್ದು, ಅತ್ಯಂತ ನೋವಿನ ಸಂಗತಿ ಎಂದು ತಿಳಿಸಿರುವ ಅವರು, ಮೃತಪಟ್ಟವರಿಗೆ ನಾನು ವೈಯಕ್ತಿಕವಾಗಿ ಸಂತಾಪ ಸೂಚಿಸುತ್ತೇನೆ ಎಂದು ತಿಳಿಸಿದ್ದಾರೆ.

ಈಗಾಗಲೇ ರಾಜ್ಯಸರ್ಕಾರದಿಂದ ಸಚಿವ ಸಂತೋಷ್ ಲಾಡ್ ಅವರು ಜಮ್ಮು ಮತ್ತು ಕಾಶ್ಮೀರಕ್ಕೆ ತೆರಳಿದ್ದು, ಪ್ರವಾಸಿಗರ ಭೇಟಿ ಮಾಡಿ ಸಂತ್ರಸ್ತರ ಪರವಾಗಿ ಅವರ ವಾಪಸ್ಸಿಗೆ ವ್ಯವಸ್ಥೆ ಮಾಡಲಾಗುತ್ತಿದೆ. ಪ್ರವಾಸಿಗರಿಗೆ ಎಲ್ಲಾ ರೀತಿಯ ನೆರವು ದೊರೆಯುವಂತೆ ನೋಡಿಕೊಳ್ಳಬೇಕೆಂದು ವಿನಂತಿಸಿದ್ದೇನೆ ಎಂದರು.

ಪ್ರವಾಸೋದ್ಯಮವೇ ಕಾಶ್ಮೀರದ ಆರ್ಥಿಕ ಶಕ್ತಿ. ಈಗ ಈ ಘಟನೆಯಿಂದ ಆರ್ಥಿಕತೆಯ ಮೇಲೆ ಭಾರೀ ಪರಿಣಾಮ ಬಿದ್ದಿದೆ. ಈ ಸಂದರ್ಭದಲ್ಲಿ ಕೇಂದ್ರ ಸರ್ಕಾರವು ತಕ್ಷಣ ಕ್ರಮ ಕೈಗೊಂಡು, ಕಾಶ್ಮೀರದ ಜನರಿಗೆ ನೆರವು ನೀಡಬೇಕು. ಇದು ಭಾರತ ದೇಶದ ಮೇಲೆ ನೇರದಾಳಿ. ಪಾಕಿಸ್ತಾನದ ಭಯೋತ್ಪಾದಕ ಸಂಘಟನೆ ಇದಕ್ಕೆ ಹೊಣೆ ಹೊತ್ತಿರುವುದಾಗಿ ಘೋಷಿಸಿದೆ. ಸರ್ಕಾರವು ಕೇವಲ ಮಾತುಗಳಲ್ಲ, ಕೃತಿಗಳಲ್ಲೂ ಸ್ಪಷ್ಟತೆಯನ್ನು ತೋರಿಸಬೇಕು ಎಂದು ಆಗ್ರಹಿಸಿದ್ದಾರೆ. ಅಮರನಾಥ ಯಾತ್ರೆ ಆರಂಭವಾಗುತ್ತಿರುವ ಹಿನ್ನಲೆಯಲ್ಲಿ, ಯಾತ್ರಿಕರಿಗೆ ಸಮರ್ಪಕ ಭದ್ರತೆ ಒದಗಿಸಬೇಕು. ಕೇಂದ್ರ ಸರ್ಕಾರವು ಎಲ್ಲಾ ರಾಜಕೀಯ ಪಕ್ಷಗಳೊಂದಿಗೆ ಚರ್ಚೆ ನಡೆಸಿ ಭಯೋತ್ಪಾದನೆಯ ವಿರುದ್ಧ ಸಂಯುಕ್ತ ರಣತಂತ್ರ ರೂಪಿಸಬೇಕು. ಕಾಂಗ್ರೆಸ್ ಪಕ್ಷವು ಯಾವಾಗಲೂ ಭಯೋತ್ಪಾದನೆ ಮತ್ತು ವಿಭಜನೆಯ ವಿರುದ್ಧ ಹೋರಾಡುತ್ತಾ ಬಂದಿದೆ. ಈ ಹೋರಾಟದಲ್ಲಿ ನಮ್ಮ ನಾಯಕರು ಪ್ರಾಣ–ತ್ಯಾಗ ಮಾಡಿದ ಇತಿಹಾಸವೂ ಇದೆ ಎಂದು ತಿಳಿಸಿದ್ದಾರೆ.

## ಬಸ್‌ನಲ್ಲಿ ಮಹಿಳೆಗೆ ಲೈಂಗಿಕ ಕಿರುಕುಳ: ಕಂಡಕ್ಟರ್ ವಜಾಗೆ ಸಚಿವರ ಆದೇಶ

**ಬೆಂಗಳೂರು, ಏ. 25:** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ



ನಿಗಮವು ಕೆಎಸ್‌ಆರ್‌ಟಿಸಿ ತನ್ನ ಕಾರ್ಯಾಚರಣೆಯಿಂದಲೇ ಸಾಕಷ್ಟು ಹೆಸರು ಮಾಡಿದೆ. ಪ್ರಯಾಣಿಕರ ಅಚ್ಚುಮೆಚ್ಚಿನ ಸಾರಿಗೆಯಾಗಿದೆ. ಪ್ರಯಾಣಿಕರಿಗೆ ಆರಾಮದಾಯಕ ಪ್ರಯಾಣ ಅನುಭವ ನೀಡಲು ಹೊಸ ಹೊಸ ಬಸ್ ಖರೀದಿಸುತ್ತಿದೆ. ಹೀಗೆ ಉತ್ತಮ ಹೆಸರಿರುವ ನಿಗಮದ ಸಿಬ್ಬಂದಿಯೊಬ್ಬ ತಾನು ಮಾಡಿದ ಅಸಹ್ಯಕರ ನಡವಳಿಕೆಯಿಂದ ಕೆಲಸದಿಂದ ಹೊರ ನಡೆದಿದ್ದಾನೆ. ಆತನ ನಡವಳಿಕೆ ವಿರುದ್ಧ ತಕ್ಕ ಕ್ರಮವಹಿಸಿರುವ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರು ನಿರ್ವಾಹಕನನ್ನು ವಜಾಗೊಳಿಸುವಂತೆ ಸೂಚನೆ ನೀಡಿದ್ದಾರೆ.

ರಾಜ್ಯದ ಕರಾವಳಿ ಭಾಗದ ಮಂಗಳೂರು ವಿಭಾಗದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ನಿರ್ವಾಹಕನೊಬ್ಬ ಮಹಿಳಾ ಪ್ರಯಾಣಿಕರೊಡನೆ ಅತ್ಯಂತ ಕೆಟ್ಟದಾಗಿ ನಡೆದುಕೊಂಡಿದ್ದ. ಈತನ ಕೃತ್ಯದ ವಿಡಿಯೋ ಅದೇ ಬಸ್‌ನಲ್ಲಿದ್ದ ಸಹ ಪ್ರಯಾಣಿಕರೊಬ್ಬರು ಸೆರೆ ಹಿಡಿದು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿದ್ದರಿಂದ ಪ್ರಕರಣ ಬೆಳಕಿಗೆ ಬಂದಿದೆ.

ವಿಡಿಯೋ ವೈರಲ್ ಆಗುತ್ತಿದ್ದಂತೆ ಅದನ್ನು ಗಂಭೀರವಾಗಿ ಪರಿಗಣಿಸಿರುವ ರಾಜ್ಯ ಸಾರಿಗೆ ಇಲಾಖೆ ಹಾಗೂ ಸಾರಿಗೆ ಸಚಿವ ರಾಮಮಲಿಂಗಾ ರೆಡ್ಡಿ ಅವರು ಆ ನಿರ್ವಾಹಕನ ವಜಾಗೆ ಸೂಚಿಸಿದರು. ಮೇಲ್ನೋಟಕ್ಕೆ ಆರೋಪ ಸಾಬೀತಾಗಿರುವ ಹಿನ್ನೆಲೆಯಲ್ಲಿ ಈಗಾಗಲೇ ನಿರ್ವಾಹಕನನ್ನು ಅಮಾನತು ಮಾಡಿರುವುದು ಸರಿಯಷ್ಟೇ. ಬಸ್ಸಿನಲ್ಲಿ ಪ್ರಯಾಣಿಸುವ ಪ್ರತಿಯೊಬ್ಬ ಹೆಣ್ಣು ಮಕ್ಕಳೊಡನೆ ಗೌರವದೊಂದಿಗೆ ನಡೆದುಕೊಳ್ಳುವುದು ನಮ್ಮ ಸಿಬ್ಬಂದಿಗಳ ಆದ್ಯ ಕರ್ತವ್ಯವಾಗಿರಬೇಕು. ಈ ರೀತಿಯ ಅಸಹ್ಯಕರ ನಡವಳಿಕೆ ಅಕ್ಷಮ್ಯ ಅಪರಾಧ ಎಂದು ಹೇಳಿದ್ದಾರೆ. ಏಖಖಿಖಿಅ ಬಸ್ಸುಗಳು ಹಾಗೂ ಚಾಲಕ ನಿರ್ವಾಹಕರ ಬಗ್ಗೆ ಸಾರ್ವಜನಿಕ ಪ್ರಯಾಣಿಕರು ಅತೀವ ನಂಬಿಕೆ ಮತ್ತು ಪ್ರೀತಿ ಹೊಂದಿದ್ದಾರೆ. ಕೆಲವೊಬ್ಬರು ಮಾಡುವ ಈ ರೀತಿಯ ಕೆಲಸಗಳು ಸಂಸ್ಥೆ ಹಾಗೂ ಸಿಬ್ಬಂದಿಗಳ ಗೌರವಕ್ಕೆ ಧಕ್ಕೆ ತರುವಂತಹದು.

ಚಾಮರಾಜನಗರಕ್ಕೆ ಬರುವುದರಿಂದ ನನಗೆ ಅಧಿಕಾರ ಮತ್ತಷ್ಟು ಗಟ್ಟಿಯಾಗ್ತಿದೆ

## ವಿನಯ್ ಕುಲಕರ್ಣಿ ಮನೆ ಮೇಲೆ ಇಡಿ ದಾಳಿ ದ್ವೇಷದ ರಾಜಕಾರಣ : ಸಿಎಂ ಸಿದ್ದರಾಮಯ್ಯ



**ಚಾಮರಾಜನಗರ:** ಮೌಢ್ಯವನ್ನು ತೊರೆದು ಚಾಮರಾಜನಗರ ಜಿಲ್ಲೆಗೆ ಭೇಟಿ ನೀಡಿದ್ದು ಮಾತ್ರವಲ್ಲದೆ ನಿನ್ನೆ ಗುರುವಾರ ಜಿಲ್ಲೆಯ ಹನೂರು ತಾಲ್ಲೂಕಿನಲ್ಲಿರುವ ಮಲೆ ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆಸಿದ ಬಳಿಕ ಇಂದು ಶುಕ್ರವಾರ ಬೆಳಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸಂಪುಟದ ಕೆಲ ಸಹೋದ್ಯೋಗಿಗಳ ಜೊತೆ ಮಾದಪ್ಪನ ದೇವಸ್ಥಾನಕ್ಕೆ ತೆರಳಿ ದರ್ಶನ ಪಡೆದು ಪೂಜೆ ಸಲ್ಲಿಸಿದರು.

ಗುಡಿಯ ಅರ್ಚಕರು ಸಿದ್ದರಾಮಯ್ಯ ಹೆಸರಲ್ಲಿ ಅರ್ಚನೆ ಮಾಡಿದರು. ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ ವೆಂಕಟೇಶ್ ಮತ್ತು ಸಿಎಂ ಆಪ್ತ ಹಾಗೂ ಸಮಾಜ ಕಲ್ಯಾಣ ಖಾತೆ ಸಚಿವ ಡಾ ಹೆಚ್ ಸಿ ಮಹದೇವಪ್ಪ ಜೊತೆಗಿದ್ದರು.

ಈ ಸಂದರ್ಭದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಸಿಎಂ, ಮೈಸೂರು ವಿಭಾಗದಲ್ಲಿ ಸಚಿವ ಸಂಪುಟ ಸಭೆ ನಡೆಸಬೇಕಾಗಿತ್ತು. ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರಾದ ವೆಂಕಟೇಶ್ ಅವರು ಇಲ್ಲಿಯೇ ಮಾಡೋಣ ಎಂದು ಸಲಹೆ ನೀಡಿದರು, ಅದರ ಪ್ರಕಾರ ಮಾಡಿದ್ದೇವೆ, ಚಾಮರಾಜನಗರ ಜಿಲ್ಲೆ ಬಹಳ ಹಿಂದುಳಿದ ಜಿಲ್ಲೆ, ಅದಕ್ಕೆ ವಿಶೇಷ ಗಮನ ನೀಡಬೇಕೆಂಬುದು ನಮ್ಮ ಆದ್ಯತೆಯಾಗಿದೆ ಎಂದರು.

ಚಾಮರಾಜನಗರ ಜಿಲ್ಲೆಗೆ ಕಾಲಿಟ್ಟರೆ ಮುಖ್ಯಮಂತ್ರಿಗಳು ಅಧಿಕಾರ ಕಳೆದುಕೊಳ್ಳುತ್ತಾರೆ ಎಂಬ ನಂಬಿಕೆ ಸರ್ಕಾರವನ್ನು ಆಳುವವರದಲ್ಲಿ ಹಿಂದಿನಿಂದಲೂ ಇದೆಯಲ್ಲವೇ ಎಂದು ಕೇಳಿದಾಗ, ಅವೆಲ್ಲಾ ಮೂಢನಂಬಿಕೆಗಳು, ಅವುಗಳಲ್ಲಿ ಸತ್ಯ ಇಲ್ಲ, ಮೌಢ್ಯಗಳಿಂದ ಸಮಾಜದಲ್ಲಿ ಬಹಳಷ್ಟು ಕೆಟ್ಟದು ನಡೆಯುತ್ತಿವೆ ಎಂದರು.

ಚಾಮರಾಜನಗರ ಜಿಲ್ಲೆಗೆ ಬರುವುದರಿಂದ ನನಗೆ ಅಧಿಕಾರ ಮತ್ತಷ್ಟು ಗಟ್ಟಿಯಾಗ್ತಿದೆ. ನಾನು ಸಿಎಂ ಆದ ಮೇಲೆ 20ಕ್ಕೂ ಹೆಚ್ಚು ಸಲ ಚಾಮರಾಜನಗರಕ್ಕೆ ಬಂದಿದ್ದೇನೆ. ಇದರಿಂದ ನಮಗೆ ಅಧಿಕಾರ ಗಟ್ಟಿಯಾಗುತ್ತಿದೆ ಎಂದರು.

ನಿನ್ನೆ ಪ್ರಾಧಿಕಾರದ ಸಭೆಯಲ್ಲಿ ವಿಶೇಷ ಸೂಚನೆ ನೀಡಿದ್ದೇನೆ. ಚಾಮುಂಡಿ ಬೆಟ್ಟ, ಮಲೈ ಮಹದೇಶ್ವರ ಬೆಟ್ಟದ ಮೇಲೆ ಮದ್ಯ ನಿಷೇಧವಾಗಬೇಕು, ಸ್ವಚ್ಛತೆ ಕಾಪಾಡಬೇಕು, ಲಡ್ಡು ಪ್ರಸಾದವನ್ನು ತಿರುಪತಿ ರೀತಿಯಲ್ಲಿ ಮಾಡಿ ಕಡಿಮೆ ಬೆಲೆಗೆ ಮಾರಾಟ ಮಾಡಬೇಕು, ಮೂಲಭೂತ ಸೌಕರ್ಯ ಅಭಿವೃದ್ಧಿಗೆ ಒತ್ತು ನೀಡಬೇಕು ಎಂದು ಹೇಳಿದ್ದೇನೆ ಎಂದರು.

ಇಡಿ ದಾಳಿ : ಶಾಸಕ ವಿನಯ್ ಕುಲಕರ್ಣಿ ನಿವಾಸದ ಮೇಲೆ ಇಡಿ ದಾಳಿಗೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿ, ಇಡಿಯವರು ಕೇಂದ್ರ ಸರ್ಕಾರದ ಆದೇಶದಂತೆ ನಡೆದುಕೊಂಡು ಯಾವಾಗಲೂ ದ್ವೇಷದ ರಾಜಕೀಯ ಮಾಡುತ್ತಾರೆ. ವಿನಯ್ ಕುಲಕರ್ಣಿಯವರ ಮನೆ ಮೇಲೆ ಇದ್ದಕ್ಕಿದ್ದಂತೆ ದಾಳಿ ಮಾಡುವುದೆಂದರೆ ಇದರ ಹಿಂದೆ ಯಾರದ್ದಾದರೂ ಕೈವಾಡ ಇರಬೇಕಲ್ಲವೇ, ಇದು ದ್ವೇಷದ ರಾಜಕಾರಣವಲ್ಲದೆ ಮತ್ತಿನ್ನೇನು, ಬಿಜೆಪಿ ನಾಯಕರ ಮನೆ ಮೇಲೆ ಏಕೆ ದಾಳಿಯಾಗುತ್ತಿಲ್ಲ, ಅವರೇನು ಶುದ್ಧಹಸ್ತರೇ ಎಂದು ಕೇಳಿದರು.

ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಮಾಹಿತಿ

## 22 ಸ್ಥಳಗಳಿಗೆ ಭೇಟಿ :13 ಸ್ವಯಂ ಪ್ರೇರಿತ ದೂರು ದಾಖಲು



**ದಾವಣಗೆರೆ:** ಕರ್ನಾಟಕ ಲೋಕಾಯುಕ್ತದಿಂದ ಏ.22 ರಿಂದ 25ನೇ ತಾರಿಖಿನವರೆಗೆ ದಾವಣಗೆರೆ ಜಿಲ್ಲೆಯ 22 ಸರ್ಕಾರಿ ಕಚೇರಿ ಹಾಗೂ ಸ್ಥಳಗಳಿಗೆ ಭೇಟಿ ನೀಡಿದ್ದು, ಒಟ್ಟು 13 ಸ್ವಯಂ ಪ್ರೇರಿತ ದೂರುಗಳನ್ನು ದಾಖಲಿಸಿಕೊಳ್ಳಲಾಗಿದೆ ಎಂದು ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿಯ ಎಸ್.ಎಸ್. ಮಲ್ಲಿಕಾರ್ಜುನ ಸಭಾಂಗಣದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ಕೃಷಿ ಉತ್ಪನ್ನ ಮಾರುಕಟ್ಟೆ, ಸಮಾಜ ಕಲ್ಯಾಣ, ಜಿಲ್ಲಾಸ್ಪತ್ರೆ, ಔಷಧ ಉಗ್ರಾಣ, ಮಹಾನಗರ ಪಾಲಿಕೆ, ತಾಲ್ಲೂಕು ಕಚೇರಿ, ಕಾರ್ಮಿಕ ಇಲಾಖೆ, ಗಣಿ ಮತ್ತು ಭೂವಿಜ್ಞಾನ, ಪ್ರಾದೇಶಿಕ ಸಾರಿಗೆ ಕಚೇರಿ, ಹಿರೆತೊಗಲೂರು ಕಲ್ಲು ಕ್ವಾರಿ, ಶಿವಗಂಗಾ ಸ್ಟೋನ್ ಕ್ರಷರ್ ಹಾಗೂ ಶಾಂತಿಸಾಗರ(ಸೂಳೆಕೆರೆ) ನಿರ್ವಹಣೆ ಕುರಿತು ಸ್ವಯಂ ಪ್ರೇರಿತ ದೂರುಗಳನ್ನು ದಾಖಲಿಸಿದ್ದು, ಲೋಕಾಯುಕ್ತ ಪೊಲೀಸರಿಂದ ವರದಿ ಪಡೆದು ವಿಚಾರಣೆ ಆರಂಭಿಸಲಾಗುವುದು. ಒಟ್ಟು 510 ದೂರುಗಳು ಸಾರ್ವಜನಿಕರಿಂದ ಸ್ವೀಕೃತವಾಗಿವೆ. ಇವುಗಳಲ್ಲಿ ಹೊಸ ದೂರುಗಳ ಪೈಕಿ 77 ಹಾಗೂ ಹಳೆ ಪ್ರಕರಣಗಳ ಪೈಕಿ 25 ಸೇರಿ 102 ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗಿದೆ. ಲೋಕಾಯುಕ್ತ ಸ್ವಾಯತ್ತ ಸಂಸ್ಥೆಯಾಗಿದ್ದು, ಸಂಸ್ಥೆಯನ್ನು ಇನ್ನಷ್ಟು ಬಲಪಡಿಸಲು ಕ್ರಮವಹಿಸಲಾಗಿದೆ. ಸರ್ಕಾರಿ ಅಧಿಕಾರಿಗಳ ಭ್ರಷ್ಟಾಚಾರವನ್ನು ಎಂದಿಗೂ ಲೋಕಾಯುಕ್ತ ಸಹಿಸುವುದಿಲ್ಲ. ಸದ್ಯ ಬಾಕಿ ಇರುವ ಪ್ರಕರಣಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಆದ್ಯತೆ ವಹಿಸಲಾಗಿದೆ ಎಂದು ನ್ಯಾ.ಬಿ.ವೀರಪ್ಪ ಹೇಳಿದರು.

ಲೋಕಾಯುಕ್ತ ಸಂಸ್ಥೆಯ ಕಾರ್ಯಕ್ಷಮತೆ ಬಗ್ಗೆ ಜನರಲ್ಲಿ ವಿಶ್ವಾಸ ಮೂಡಿದ್ದು, ರಾಜ್ಯದಲ್ಲಿ ಒಟ್ಟು ಸುಮಾರು 23 ಸಾವಿರ ಪ್ರಕರಣಗಳು ದಾಖಲಾಗಿವೆ. ಇವುಗಳಲ್ಲಿ ಶೇ.30 ರಷ್ಟು ಪ್ರಕರಣಗಳಲ್ಲಿ ಅಧಿಕಾರಿಗಳ ಮೇಲೆ ಸುಳ್ಳು ಆರೋಪ ಮಾಡಿರುವ ಸಂಭವಿದೆ. ಜಿಲ್ಲೆಗೆ ಸಂಬಂಧಿಸಿದಂತೆ 114 ದೂರುಗಳು ವಿಚಾರಣ ಬಾಕಿ ಇದ್ದವು. ಇವುಗಳ ವಿಚಾರಣೆಯನ್ನು ಶುಕ್ರವಾರ ಜಿಲ್ಲಾಡಳಿತ ಭವನದ ತುಂಗಭದ್ರ ಸಭಾಂಗಣದಲ್ಲಿ ನಡೆಸಲಾಗಿದೆ. ಈ ಪೈಕಿ 25 ಪ್ರಕರಣಗಳು ಇತ್ಯರ್ಥಗೊಂಡಿವೆ.

## ದಾವಣಗೆರೆ ಬಸವ ಜಯಂತಿಯ ಗಂಗೋತ್ರಿ: ಡಾ. ಬಸವಪ್ರಭು ಸ್ವಾಮೀಜಿ

**ದಾವಣಗೆರೆ:** ದಾವಣಗೆರೆ ಶಿಕ್ಷಣ ನಗರಿ, ಬೆಣ್ಣೆ ನಗರಿಯಷ್ಟೇ ಅಲ್ಲ ಬಸವ ಜಯಂತಿಯ ಗಂಗೋತ್ರಿ ಎಂದು ವಿರಕ್ತಮಠದ ಡಾ. ಬಸವಪ್ರಭು ಸ್ವಾಮೀಜಿ ಹೇಳಿದರು.

ನಗರದ ಹೊಂಡದ ರಸ್ತೆಯಲ್ಲಿರುವ ಶ್ರೀ ಬೀರಲಿಂಗೇಶ್ವರ ದೇವಸ್ಥಾನದ ಆವರಣದಲ್ಲಿ ಗುರುವಾರ ಬೆಳಿಗ್ಗೆ ಬಸವ ಕೇಂದ್ರ, ವಿರಕ್ತಮಠ, ಶಿವಯೋಗಾಶ್ರಮ ಟ್ರಸ್ಟ್, ಲಿಂಗಾಯತ(ವೀರಶೈವ) ತರುಣ ಸಂಘದ ಸಹಯೋಗದಲ್ಲಿ 113ನೇ ವರ್ಷದ ಬಸವ ಜಯಂತ್ಯೋತ್ಸವದ ಅಂಗವಾಗಿ ನಡೆದ 109ನೇ ವರ್ಷದ ಬಸವ ಪ್ರಭಾತ್ ಪೇರಿಯ ಎರಡನೇ ದಿನದ ಜನಜಾಗೃತಿ



ಪಾದಯಾತ್ರೆಯ ವೇದಿಕೆ ಕಾರ್ಯಕ್ರಮದ ಸಾನಿಧ್ಯವಹಿಸಿ ಅವರು ಮಾತನಾಡಿದರು.

ಕರ್ನಾಟಕ ಗಾಂಧಿ ಎಂದು ಹೆಸರಾದ ಹರ್ಡೇಕರ್ ಮಂಜಪ್ಪನವರು ಮೃತ್ಯುಂಜಯ ಅಪ್ಪಗಳ ಜೊತೆ ಸೇರಿ 1917 ನೇ ಇಸವಿಯಲ್ಲಿ ದಾವಣಗೆರೆಯಲ್ಲಿ ಬಸವ ಪ್ರಭಾತ್ ಪೇರಿಯನ್ನು ಆರಂಭಿಸಿದರು. ಅಂದಿನಿಂದ ಇಂದಿಗು ಈ ದಾವಣಗೆರೆ ಬಸವ ಜಯಂತಿಯ ಗಂಗೋತ್ರಿಯಾಗಿದೆ. ಕರ್ನಾಟಕ ಸರ್ಕಾರವು ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿರುವುದು ಸಂತೋಷದ ವಿಷಯ ಎಂದರು.

ಪ್ರತಿಯೊಬ್ಬರೂ ಕೂಡಾ ನಿತ್ಯ ಬಸವ ಬಸವ ಎಂದು ಸ್ಮರಣೆ ಮಾಡಿದರೆ ಜೀವನ ಪಾವನವಾಗುತ್ತದೆ. ಬಸವ, ಬಸವಣ್ಣ ಎಂಬುದು ಕೇವಲ ಹೆಸರಲ್ಲ ಅದು ಒಂದು ಶಕ್ತಿಯಾಗಿದೆ. ಕಷ್ಟ, ಸಮಸ್ಯೆಗಳು ಎನ್ನುವುದು ಎಲ್ಲರಿಗೂ ಬರುತ್ತದೆ. ಏನೇ ಕಷ್ಟ ಬಂದರೂ ಆ ಕಷ್ಟಗಳನ್ನು ಎದುರಿಸಬೇಕು. ಭಯಪಡಬಾರದು, ಬಸವ ಬಸವ ಎಂದು ಸ್ಮರಣೆ ಮಾಡಬೇಕು ಎಂದು ತಿಳಿಸಿದರು.

ಜಾಗತಿಕ ಲಿಂಗಾಯತ ಮಹಾಸಭಾದ ಅಧ್ಯಕ್ಷ ಆವರಗೆರೆ ರುದ್ರಮುನಿ ಮಾತನಾಡಿ, ಹರ್ಡೆಕರ್ ಮಂಜಪ್ಪನವರು ವಿಶ್ವಗುರು ಬಸವಣ್ಣನವರ ತತ್ವಗಳನ್ನು ಮನೆ ಮನಗಳಿಗೆ ತಲುಪಿಸುವ ಹಿನ್ನಲೆಯಲ್ಲಿ 1917 ರಲ್ಲಿ ಆರಂಭಿಸಿದ ಬಸವ ಜಯಂತಿ ಪ್ರಭಾತ್ ಪೇರಿಯಿಂದ ಈ ದಾವಣಗೆರೆಯ ವಿರಕ್ತಮಠ ಇಡೀ ಜಗತ್ತಿಗೇ ಬೆಳಕಾಗಿದೆ ಎಂದರು.

ಈ ಸಂದರ್ಭದಲ್ಲಿ ದೂಡಾ ಸದಸ್ಯೆ ವಾಣಿ ಬಕ್ಕೇಶ, ಅಭಿ ಕಾಟನ್ ಮಾಲೀಕ ಬಕ್ಕೇಶ್, ಬೀರಲಿಂಗೇಶ್ವರ ದೇವಸ್ಥಾನ ಸಮಿತಿ, ಕಟ್ಟೆ ದುರ್ಗಮ್ಮ ದೇವಸ್ಥಾನ ಕಮಿಟಿಯ ಶಿವಾನಂದ ಕಾಡಪ್ಪನವರ, ಹೊನ್ನಪ್ಪ, ಸುರೇಶ, ಬಾಳೆಹೊಲದ ಸಿದ್ದಪ್ಪ, ಹಾಸಬಾವಿ ಕರಿಬಸಪ್ಪ, ಲಂಬಿ ಮುರುಗೇಶ, ಕೆ.ಸಿ.ಉಮೇಶ, ಚನ್ನಬಸವ ಶೀಲವಂತ್, ಮಹಾಲಿಂಗೇಶ್ವರ, ಸಂಕಲ್ ಫೌಂಡೇಷನ್ ಅಧ್ಯಕ್ಷ ಜಿ.ಮಹಾಂತೇಶ, ಬಾದಾಮಿ ಜಯಣ್ಣ, ಶರಣಬಸವ, ಕೀರ್ತಿ, ಕುಮಾರಸ್ವಾಮಿ, ಕೊಟ್ರೇಶ್, ಮಹಾದೇವಮ್ಮ, ಸುಜಾತ, ವೀಣಾ ಮಂಜುನಾಥ ಇತರರು ಇದ್ದರು. ಬಸವ ಕಲಾಲೋಕದ ಅರುಣ ಮತ್ತು ತಂಡದವರು ವಚನ ಭಜನೆ ನಡೆಸಿಕೊಟ್ಟರು.

## ಶಿರಾಳಕೊಪ್ಪ: ನೇರಲಗಿ ದೊಡ್ಡಕೆರೆಯಲ್ಲಿ ಅಪಾರ ಪ್ರಮಾಣದ ಮೀನುಗಳು ಸಾವು

**ಶಿರಾಳಕೊಪ್ಪ:** ಪಟ್ಟಣ ಸಮೀಪದ ನೇರಲಗಿ ದೊಡ್ಡಕೆರೆಯಲ್ಲಿ ಅಪಾರ ಪ್ರಮಾಣದ ಮೀನುಗಳು ಸತ್ತಿದ್ದು, ಕೆರೆಯಂಚಿನಲ್ಲಿ ತೇಲುತ್ತಿರುವುದು ಕಂಡು ಬಂದಿದೆ.

ಕಳೆದ ನಾಲ್ಕು ದಿನಗಳಿಂದ ಮೀನು ಸಾಯುತ್ತಿದ್ದು, ಈವರೆಗೆ ಅಂದಾಜು 4 ಕ್ವಿಂಟಾಲ್‌ನಷ್ಟು ಸತ್ತಿರುವುದಾಗಿ ಮೀನು ಸಾಕಣೆದಾರ ಹನೀಫ್‌ಸಾಬ್ ಮಾಹಿತಿ ನೀಡಿದರು.

ಕೆರೆ ಮೇಲ್ಭಾಗದಲ್ಲಿ ಒಣಶುಂಠಿ ಒಣಗಿಸುವ ಮೂರು ಕಣಗಳಿವೆ. ಅವುಗಳಿಗೆ ಬಳಸುವ ರಾಸಾಯನಿಕವು ಮಳೆ ನೀರಿನೊಂದಿಗೆ ಕೆರೆ ಸೇರಿರುವ ಸಾಧ್ಯತೆಯಿದೆ. ಕಿಡಿಗೇಡಿಗಳು ವಿಷ ಹಾಕಿರಬಹುದು ಅಥವಾ ಬಿಸಿಲ ಬೇಗೆಯಿಂದಲೂ ಹೀಗಾಗಿರಬಹುದು ಎನ್ನಲಾಗಿದೆ.

‘ಮೀನು ಸಾವಿಗೆ ನಿಖರ ಕಾರಣ ಗೊತ್ತಿಲ್ಲ. ಆದರೆ ಎರಡು ವರ್ಷದಿಂದ ಮೀನು ಹಿಡಿಯದೆ ಹಾಗೆ ಬಿಟ್ಟಿದ್ದೆ. ಮೀನುಗಳು ದೊಡ್ಡ ಗಾತ್ರವಾಗಿದ್ದು ಉತ್ತಮ ಲಾಭದ ನಿರೀಕ್ಷೆಯಲ್ಲಿದ್ದಾಗಲೇ ಹೀಗಾಗಿದೆ. ಅಪಾರ ನಷ್ಟ ಆಗಿದ್ದು, ಸರ್ಕಾರ ಪರಿಹಾರ ನೀಡಬೇಕು’ ಎಂದು ಹನೀಫ್ ಸಾಬ್ ಆಗ್ರಹಿಸಿದ್ದಾರೆ.



## ರಾಗಿಕೊಪ್ಪ ತುಂಬುಹೊಂಡ ಕೆರೆಯಲ್ಲೂ ಮೀನುಗಳ ಸಾವು



**ಶಿರಾಳಕೊಪ್ಪ:** ಸಮೀಪದ ರಾಗಿಕೊಪ್ಪ ಗ್ರಾಮದ ತುಂಬುಹೊಂಡ ಕೆರೆಯಲ್ಲೂ ಈಚೆಗೆ ಮೀನುಗಳು ಸತ್ತು ಕೆರೆಯಂಚಿನಲ್ಲಿ ತೇಲುತ್ತಿರುವುದು ಕಂಡು ಬಂದಿದೆ. ಕಳೆದ ನಾಲ್ಕು ದಿನಗಳಿಂದ ಮೀನುಗಳು ಸಾಯುತ್ತಿದ್ದು ಈವರೆಗೆ ಅಂದಾಜು 1 ಕ್ವಿಂಟಲ್ ನಷ್ಟು ಮೃತಪಟ್ಟಿವೆ ಎಂದು ಮೀನು ಸಾಕಾಣಿಕೆಗೆ ಕೆರೆಯನ್ನು ಗುತ್ತಿಗೆ ಪಡೆದಿರುವ ಎಂ.ಕುಮಾರ್ ಹೇಳಿದರು. ತೆರೆಯಲ್ಲಿ ಮೀನು ಸತ್ತಿರುವ ಕಾರಣಕ್ಕೆ ಕೆರೆ ಸುತ್ತಲೂ ಕೆಟ್ಟ ವಾಸನೆ ಬರುತ್ತಿದ್ದು ಜನರು ಮೂಗುಮುಚ್ಚಿ ಓಡಾಡುವಂತಾಗಿದೆ. ಜಾನುವಾರುಗಳು ನೀರು ಕುಡಿಯಲು ಹಿಂದೇಟು ಹಾಕುತ್ತಿವೆ. ಯಾವ ಕಾರಣಕ್ಕೆ ಮೀನು ಸತ್ತಿವೆ ಎನ್ನುವುದು ಪತ್ತೆಹಚ್ಚಬೇಕಿದೆ ಎಂದು ಅವರು ತಿಳಿಸಿದರು. ‘ದೇವಸ್ಥಾನ ಸಮಿತಿ ವತಿಯಿಂದ ಹರಾಜು ಹಿಡಿದು ಮೀನು ಬೆಳೆಸುವುದಕ್ಕಾಗಿ ಸಾಕಷ್ಟು ಹಣ ವ್ಯಯಿಸಿದ್ದೇನೆ ಇದೀಗ ಮೀನು ಹಿಡಿದು ಮಾರುವ ಹಂತದಲ್ಲಿ ಅವು ಸಾಯುತ್ತಿವೆ. ಸ್ಥಳೀಯರು ಸುತ್ತಲಿನ ಗ್ರಾಮದವರು ಆತಂಕದಿಂದ ಈ ಕೆರೆಮೀನುಗಳನ್ನು ಖರೀದಿಸಲು ಮುಂದೆ ಬರುತ್ತಿಲ್ಲ

## 2025–26ನೇ ಸಾಲಿನ ಪ್ರವೇಶ ಶುಲ್ಕ, ಕೋಟಾ ವಿವರ ಘೋಷಿಸಿ: ಖಾಸಗಿ ಶಾಲೆಗಳಿಗೆ ಶಿಕ್ಷಣ ಇಲಾಖೆ ಸೂಚನೆ



**ಬೆಂಗಳೂರು:** 2025–26ನೇ ಶೈಕ್ಷಣಿಕ ವರ್ಷಕ್ಕೆ ರಾಜ್ಯದ ಎಲ್ಲಾ ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಕ್ಕಾಗಿ ಅನುಸರಿಸಬೇಕಾದ ಕಾರ್ಯವಿಧಾನಗಳನ್ನು ವಿವರಿಸುವ ಸುತ್ತೋಲೆಯನ್ನು ಶಾಲಾ ಶಿಕ್ಷಣ ಇಲಾಖೆ ಹೊರಡಿಸಿದೆ.

ಶಾಲೆಗಳು ಸ್ಪಷ್ಟ ಪ್ರವೇಶ ಅಧಿಸೂಚನೆಗಳನ್ನು ಹೊರಡಿಸಬೇಕು, ಮೀಸಲಾತಿ ನೀತಿಗಳನ್ನು ಅನುಸರಿಸಬೇಕು ಮತ್ತು ಶುಲ್ಕ ರಚನೆಗಳನ್ನು ಪಾರದರ್ಶಕವಾಗಿ ಪ್ರದರ್ಶಿಸಬೇಕು ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ. ಈ ಸಂಬಂಧ ಪೋಷಕರಿಗೆ ಮಾಹಿತಿ ನೀಡಬೇಕು ಹಾಗೂ ಜಿಲ್ಲೆಗಳಾದ್ಯಂತ ದೂರು ಪರಿಹಾರ ವ್ಯವಸ್ಥೆಗಳು ಜಾರಿಯಲ್ಲಿರಬೇಕು. ಎಲ್ಲಾ ಹಂತಗಳಲ್ಲಿನ ಅಧಿಕಾರಿಗಳು ಪ್ರವೇಶಗಳನ್ನು ಮೇಲ್ವಿಚಾರಣೆ ಮಾಡಲು ಕ್ರಮ ಕೈಗೊಳ್ಳಲು ನಿರ್ದೇಶಿಸಲಾಗಿದೆ.

ಎಲ್ಲಾ ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳು ಪ್ರವೇಶ ಪ್ರಕ್ರಿಯೆಯ ಕುರಿತು ಅಧಿಸೂಚನೆಯನ್ನು ಹೊರಡಿಸಬೇಕಾಗುತ್ತದೆ. ಇದರಲ್ಲಿ ವರ್ಗವಾರು ಸೀಟು ಲಭ್ಯತೆ, ಮೀಸಲಾತಿ ವಿವರಗಳು, ಪಠ್ಯಕ್ರಮ, ಬೋಧನಾ ಮಾಧ್ಯಮ ಮತ್ತು ಶುಲ್ಕ ರಚನೆಯನ್ನು ಒಳಗೊಂಡಿರಬೇಕು. ಸಂಸ್ಥೆಗಳ ಮುಖ್ಯಸ್ಥರು ಪ್ರವೇಶ ವೇಳಾಪಟ್ಟಿ ಮತ್ತು ಇತರ ಸಂಬಂಧಿತ ವಿವರಗಳನ್ನು ಶಾಲಾ ಸೂಚನಾ ಫಲಕದಲ್ಲಿ ಪ್ರಮುಖವಾಗಿ ಪ್ರದರ್ಶಿಸಬೇಕು.

ಶಾಲೆಗಳು ಅಧಿಕೃತವಾಗಿ ಅನುಮೋದಿಸಲಾದ ಶುಲ್ಕದ ಮೊತ್ತವನ್ನು ತಮ್ಮ ಸೂಚನಾ ಫಲಕಗಳು, ವೆಬ್‌ಸೈಟ್‌ಗಳು, ಖಂಖಿಖ ಪೋರ್ಟಲ್ ಮತ್ತು ಮುದ್ರಿತ ಪ್ರಾಸ್ಪೆಕ್ಟಸ್‌ಗಳಲ್ಲಿ ಸ್ಪಷ್ಟವಾಗಿ ಪ್ರಕಟಿಸಬೇಕು. ಈ ಘೋಷಿತ ಮೊತ್ತವನ್ನು ಮೀರಿದ ಯಾವುದೇ ಶುಲ್ಕವನ್ನು ಸಂಗ್ರಹಿಸುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಕ್ಷೇತ್ರ ಶಿಕ್ಷಣ ಅಧಿಕಾರಿಗಳು ಪೋಷಕರು ಮತ್ತು ಸಾರ್ವಜನಿಕರಿಂದ ಬರುವ ದೂರುಗಳನ್ನು ತ್ವರಿತವಾಗಿ ಪರಿಶೀಲಿಸಿ ಪರಿಹರಿಸಬೇಕು ಎಂದು ಸುತ್ತೋಲೆಯಲ್ಲಿ ಹೈಲೈಟ್ ಮಾಡಲಾಗಿದೆ.

## ಜಗಳೂರಿನಲ್ಲಿ ನ್ಯಾಯಕ್ಕಾಗಿ ಕಾನನಕಟ್ಟೆ ಪ್ರಭು ಏಕಾಂಗಿ ಪ್ರತಿಭಟನೆ

ಜಗಳೂರು: ತಾಲ್ಲೂಕು ನಾಯಕ ಸಮಾಜದ ನಾಯಕತ್ವದ ಹೋಚಿ ಬೋರಯ್ಯ ಸ್ಮಾರಕ ಎಸ್ ಸಿ ಎಸ್ ಟಿ ಪ್ರಥಮ ದರ್ಜೆ ಕಾಲೇಜಿನ ಅಭಿವೃದ್ಧಿ ಕುಂಠಿತವಾಗಿದೆ. ಕಾಲೇಜು ಆಡಳಿತ ಮಂಡಳಿ ಸ್ವಾರ್ಥ ಕೊನೆಯಾಗಬೇಕು ಎಂದು ವಿಎಸ್ ಎಸ್ ಎನ್ ನಿರ್ದೇಶಕ ಕಾನನಕಟ್ಟೆ ಪ್ರಭು ಆಗ್ರಹಿಸಿದರು.

ಪಟ್ಟಣದ ಹೋಚಿ ಬೋರಯ್ಯ ಸ್ಮಾರಕ ಪ್ರಥಮ ದರ್ಜೆ ಕಾಲೇಜಿನ ಮುಂಬಾಗದ ಅಂಬೇಡ್ಕರ್ ಭಾವಚಿತ್ರವಿಟ್ಟು ನಾಯಕ ಸಮಾಜದ ಪರವಾಗಿ ಏಕಾಂಗಿ ಹೋರಾಟ ನಡೆಸಿ ನಂತರ ಮಾತನಾಡಿದರು.

ಕಾಲೇಜಿನ ವ್ಯಾಪ್ತಿ 7 ಎಕರೆ 31ಗುಂಟೆ ನಮ್ಮ ಸ್ವಂತ ಜಾಗವಾಗಿದ್ದರೂ ಸಮಾಜಕ್ಕಾಗಿ ಮುಡಿಪಾಗಿಟ್ಟು ಯಾವುದೇ ರೀತಿ ಪ್ರಶ್ನಿಸದೆ ಕೇದಾರ ಸ್ವಾಮೀಜಿಗಳ ಸಹಕಾರದಿಂದ ಕಾಲೇಜಿಗೆ ರಸ್ತೆ,ಮಹಾದ್ವಾರಬಾಗಿಲು, ಆಡಿಟೋರಿಯಂ, ನಿರ್ಮಿಸಿ ಕೊಟ್ಟಿದ್ದಾರೆ. ಎಲ್‌ಕೆಜಿ ಯಿಂದಪಿಜಿ ವರೆಗೂ ಉನ್ನತೀಕರಿಸುವ ಎಲ್ಲಾ ಅವಕಾಶಗಳಿದ್ದರೂ ಸಮಾಜದ ಸಂಘಗಳ ಮಧ್ಯೆ ಇರುವ ಸಂಘರ್ಷದಿಂದ ಹಿನ್ನೆಡೆಯಾಗಿದೆ.ನಾಯಕ ಸಮಾಜದ ಸಂಸ್ಥೆಗಳಲ್ಲಿ ಕುವೆಂಪು ವಿಶ್ವವಿದ್ಯಾನಿಲಯದಲ್ಲಿಯೇ ಇದೊಂದು ಪ್ರತಿಷ್ಠಿತ ಸಂಸ್ಥೆಯಾಗಿದೆ. ಪೂರ್ವಜರು ಸಂಸ್ಥೆಯ ಸಂಸ್ಥಾಪಕರಾದ ತಿಪ್ಪನಾಯಕ, ಕಸ್ತೂರಿ ಪಾಲಯ್ಯ, ಶ್ರಮದ ಫಲವಾಗಿ ನಾಯಕ ಸಮಾಜದ ಶಿಕ್ಷಣ ಸಂಸ್ಥೆ ಸ್ಥಾಪಿತವಾಗಿದೆ. ಆದರೆ ಕನಿಷ್ಠ ಅವರ ಭಾವಚಿತ್ರವೂ ಇಲ್ಲದಂತಾಗಿದೆ. ನಾಯಕ ಸಮಾಜದ ಮುಖಂಡರುಗಳು ಆಗಮಿಸಿ ಸಮಸ್ಯೆ ಇತ್ಯರ್ಥಪಡಿಸಬೇಕಿದೆ ಎಂದರು.



# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಮೇಲೆ ಬಹಳಷ್ಟು ಅವಲಂಬಿಸಿರುತ್ತದೆ ಮತ್ತು ನಿರ್ಣಯಗಳನ್ನು ತೆಗೆದುಕೊಳ್ಳಲು ಮಾನಸಿಕ ಸ್ಪಷ್ಟತೆ ಅಗತ್ಯವಾಗಿರುತ್ತದೆ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಕುಟುಂಬದ ಸದಸ್ಯರೊಂದಿಗೆ ಒಂದು ಶಾಂತಿಯುತ ಮತ್ತು ಶಾಂತ ದಿನವನ್ನು ಆನಂದಿಸಿ ಜನರು ಸಮಸ್ಯೆಗಳೊಡನೆ ನಿಮ್ಮನ್ನು ಸಮೀಪಿಸಿದರೆ – ಅವರನ್ನು ನಿರ್ಲಕ್ಷಿಸಿ ಮತ್ತು ನಿಮ್ಮ ಮನಸ್ಸಿನಲ್ಲಿ ಈ ಚಿಂತೆ ಬೇರೂರಲು ಅವಕಾಶ ನೀಡಬೇಡಿ

### ವೃಷಭ ರಾಶಿ

ದೇಹದ ನೋವಿನಿಂದ ಬಳಲುವ ಸಾಧ್ಯತೆ ಹೆಚ್ಚಿದೆ. ನಿಮ್ಮ ದೇಹದ ಮೇಲೆ ಹೆಚ್ಚು ಒತ್ತಡ ಹಾಕುವ ಯಾವುದೇ ದೈಹಿಕ ಪರಿಶ್ರಮವನ್ನು ತಪ್ಪಿಸಲು ಪ್ರಯತ್ನಿಸಿ. ಸಾಕಷ್ಟು ವಿಶ್ರಾಂತಿ ತೆಗೆದುಕೆಣಟಿಜಜಜಿಟಿಜಜಳ್ಳಿ. ಹಣವನ್ನು ಯೋಚಿಸದೆ ಮತ್ತು ಪರಿಗಣಿಸದೆ ಖರ್ಚುಮಾಡುವುದು, ನಿಮಗೆ ಎಷ್ಟು ನಷ್ಟ ಮಾಡಬಹದು ಎಂಬುದು ಇಂದು ನಿಮಗೆ ಅರ್ಥವಾಗಬಹುದು.

### ಮಿಥುನ ರಾಶಿ

ಇಂದು ನೀವು ಆರಾಮವಾಗಿರುವ ಭಾವನೆ ಹೊಂದಿರುತ್ತೀರಿ ಮತ್ತು ಆನಂದಿಸಲು ಸೂಕ್ತ ಮನೋಭಾವದಲ್ಲಿರುತ್ತೀರಿ. ಪ್ರಮುಖ ಜನರು ವಿಶೇಷ ವರ್ಗದೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ.
ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ಹರ್ಷಚಿತ್ತದಿಂದಿರಿ ಹಾಗೂ ಪ್ರೀತಿಯಲ್ಲಿನ ಏಳುಬೀಳುಗಳನ್ನು ಎದುರಿಸುವ ಧೈರ್ಯ ಹೊಂದಿರಿ. ನಿಮ್ಮ ಸಹೋದ್ಯೋಗಿಗಳು ಎಂದಿಗಿಂತಲೂ ಉತ್ತಮವಾಗಿ ನಿಮ್ಮನ್ನು ಅರ್ಥ ಮಾಡಿಕೊಳ್ಳುತ್ತಾರೆ. ಹಣಕಾಸು,
ಪ್ರೀತಿ, ಕುಟುಂಬದಿಂದ ದೂರ ಹೋಗಿ ಇಂದು ನೀವು ಆನಂದವನ್ನು ಹುಡುಕುತ್ತ ಯಾವುದೇ ಆಧ್ಯಾತ್ಮಿಕ ಗುರುವನ್ನು ಭೇಟಿ ಮಾಡಲು ಹೋಗಬಹುದು

### ಸಿಂಹ ರಾಶಿ

ನೀವು ಮನಸ್ಸಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ, ಜಾಣತನ ಮತ್ತು ಸಭ್ಯತೆಯನ್ನು ಬಳಸಬೇಕಾಗುತ್ತದೆ. ದೀರ್ಘಕಾಲದವರೆಗೆ ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿದ್ದವರು, ಅವರು ಇಂದು ಎಲ್ಲಿಂದಲಾದರೂ ಹಣವನ್ನು ಪಡೆಯಬಹುದು, ಇದು ಜೀವನದ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ. ದಿನದ ಉತ್ತರಾರ್ಧದಲ್ಲಿ ಅತ್ಯಾಕರ್ಷಕ ಮತ್ತು ಮನರಂಜನೆಯ ಏನನ್ನಾದರೂ ಹೊಂದಿಸಿ. ಇಂದು ನೀವು ಒಂದು ಹೃದಯ ಒಡೆಯುವುದನ್ನು ತಪ್ಪಿಸುತ್ತೀರಿ.

### ಕನ್ಯಾ ರಾಶಿ

ಬಹಳಷ್ಟು ವಿಷಯಗಳು ನೀವು ಬಯಸಿದಂತಿರುವ ಹಾಸ್ಯದಿಂದ ತುಂಬಿದ ಒಂದು ದಿನ. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು ಇಲ್ಲದಿದ್ದರೆ ಮುಂಬರುವ ಸಮಯ ತೊಂದರೆಗಳಿಂದ ತುಂಬಿರಬಹುದು ಏನನ್ನಾದರೂ ಅಂತಿಮಗೊಳಿಸುವ ಮೊದಲು ನಿಮ್ಮ ಕುಟುಂಬದ ಸದಸ್ಯರ ಅಭಿಪ್ರಾಯ ತೆಗೆದುಕೊಳ್ಳಿ. ನಿಮ್ಮ ಏಕಪಕ್ಷೀಯ ನಿರ್ಧಾರ ಕೆಲವು ಸಮಸ್ಯೆಗಳನ್ನು ಉಂಟುಮಾಡಬಹುದು.

### ತುಲಾ ರಾಶಿ

ಮಕ್ಕಳೊಂದಿಗೆ ಆಟವಾಡುವುದು ನಿಮಗೆ ಯಾವತ್ತೂ ಅದ್ಭುತ ಚಿಕಿತ್ಸೆಯ ಅನುಭವ ನೀಡುತ್ತದೆ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ನಿಮ್ಮ ಸಂಗಾತಿಯೊಡನೆ ಒಂದು ಉತ್ತಮ ತಿಳುವಳಿಕೆ ಮನೆಯಲ್ಲಿ ಸಂತೋಷ–ಶಾಂತಿ ಮತ್ತು ಸಮೃದ್ಧಿಯನ್ನು ತರುತ್ತದೆ.

### ವೃಶ್ಚಿಕ ರಾಶಿ

ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ಬಹಳ ಪ್ರಯೋಜನಕಾರಿ ದಿನವಲ್ಲ– ಆದ್ದರಿಂದ ನಿಮ್ಮ ಹಣದ ಪರಿಸ್ಥಿತಿಯನ್ನು ಪರಿಶೀಲಿಸಿ ಮತ್ತು ನಿಮ್ಮ ವೆಚ್ಚಗಳ ಮೇಲೆ ಮಿತಿ ಹೇರಿ. ಎಲ್ಲರನ್ನೂ ನಿಮ್ಮ ದೊಡ್ಡ ಪಾರ್ಟಿಗೆ ಕರೆಯಿರಿ ನೀವು ಇಂದು ಆ ಹೆಚ್ಚುವರಿ ಚೈತನ್ಯವನ್ನು ಹೊಂದಿರುತ್ತೀರಿ ಹಾಗೂ ಇದು ನಿಮ್ಮನ್ನು ನಿಮ್ಮ ಗುಂಪಿಗಾಗಿ ಸಮಾರಂಭವನ್ನು ಸಂಯೋಜಿಸುವಂತೆ ಮಾಡುತ್ತದೆ.

### ಧನು ರಾಶಿ

ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ನೀವು ವಿವಾಹಿತರಾಗಿದ್ದರೆ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ ಏಕೆಂದರೆ ನೀವು ಅದನ್ನು ಮಾಡದಿದ್ದರೆ ಅವರ ಆರೋಗ್ಯವು ಹದಗೆಡಬಹುದು ಮತ್ತು ಅವರ ಆರೋಗ್ಯದ ಮೇಲೆ
ಬಹಳಷ್ಟು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಇಂದು ನಿಮಗೆ ಗೊತ್ತಿರುವವರ ಮೇಲೆ ನೀವು ಯಾವುದೇ ನಿರ್ಧಾರ ಹೇರಲು ಪ್ರಯತ್ನಿಸಿದಲ್ಲಿ ನೀವು ನಿಮ್ಮದೇ ಹಿತಾಸಕ್ತಿಗೆ ಧಕ್ಕೆ ತರುತ್ತೀರಿ ಅನುಕೂಲಕರ ಫಲಿತಾಂಶಗಳನ್ನು ಪಡೆಯಲು ಪರಿಸ್ಥಿತಿಯನ್ನು ತಾಳ್ಮೆಯಿಂದ ನಿರ್ವಹಿಸುವುದೊಂದೇ ದಾರಿ.

### ಮಕರ ರಾಶಿ

ಪತ್ನಿಯ ವ್ಯವಹಾರಗಳಲ್ಲಿ ಮೂಗು ತೂರಿಸುವುದು ಅವಳಿಗೆ ಕೋಪ ತರಬಹುದಾದ್ದರಿಂದ ಹಾಗೆ ಮಾಡಬೇಡಿ. ನಿಮ್ಮ ಕೆಲಸ ನೋಡಿಕೊಳ್ಳುವುದು ಉತ್ತಮ. ಆದಷ್ಟು ಕಡಿಮೆ ಹಸ್ತಕ್ಷೇಪ ಮಾಡಿ, ಇಲ್ಲದಿದ್ದರೆ ಅದು ಅವಲಂಬನೆಯನ್ನು ಉಂಟುಮಾಡಬಹುದು. ನೀವು ಇತರರ ಮಾತುಗಳನ್ನು ನಂಬಿ ಇಂದು ಹೂಡಿಕೆ ಮಾಡಿದಲ್ಲಿ ಇಂದು ಆರ್ಥಿಕ ನಷ್ಟದ ಸಾಧ್ಯತೆಯಿದೆ.

### ಕುಂಭ ರಾಶಿ

ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ನೀವು ನಿಮ್ಮ ಸ್ನೇಹಿತರೊಂದಿಗೆ ಎಲ್ಲಿಗಾದರೂ ಸುತ್ತಾಡಲು ಹೋಗುತ್ತಿದ್ದರೆ, ಹಣವನ್ನು ಚೆನ್ನಾಗಿ ಯೋಚಿಸಿ ಖರ್ಚು ಮಾಡಿ.
ಹಣದ ನಷ್ಟವಾಗಬಹುದು. ಇಂದು ನೀವು ನಿಮ್ಮ ಕುಟುಂಬದ ಸದಸ್ಯರು ಹಾಗೂ ಸ್ನೇಹಿತರಿಂದ ಬೆಂಬಲ ಪಡೆದು ಹೊಸ ಉತ್ಸಾಹ ಮತ್ತು ಆತ್ಮವಿಶ್ವಾಸದಿಂದ ಮುಂದುವರಿಯುತ್ತೀರಿ. ಪ್ರಣಯ ನಿಮ್ಮ ಹೃದಯ ಮತ್ತು ಮನಸ್ಸನ್ನು ಆಳುತ್ತದೆ. ನಿಮ್ಮ ಬಾಸ್ ಇಂದು ನಿಮ್ಮ ಕೆಲಸವನ್ನು ಪ್ರಶಂಸಿಸಬಹುದು

### ಮೀನ ರಾಶಿ

ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ–ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ.
ಶ್ರಮಪಡಿ, ಇದು ನಿಮ್ಮ ದಿನವಾದ್ದರಿಂದ ನೀವು ಖಂಡಿತವಾಗಿಯೂ ಅದೃಷ್ಟಶಾಲಿಯಾಗಿರುತ್ತೀರಿ. ನಿಮ್ಮ ಪತಿ ಸಂಗಾತಿಯ ಸಾಮಾಜಿಕ ಮಾಧ್ಯಮದ ಕಳೆದ ಕೆಲವು ಸ್ಟೇಟಸ್ಗಳನ್ನು ಪರಿಶಿಲಿಸಿ, ನೀವು ಒಂದು ಸುಂದರ ಅಚ್ಚರಿಯನ್ನು ಪಡೆಯುತ್ತೀರಿ

# ‘ಭಕ್ತಿಗೀತೆಗಳು ಹಿಂದೂ ಸಂಸ್ಕೃತಿಯ ಕವಚಗಳು’



ನಗರದ ಬಸವನಹಳ್ಳಿ ಕುಂಬಾರ ಬೀದಿಯಲ್ಲಿರುವ ಶ್ರೀ ವೀರಭದ್ರ ಸ್ವಾಮಿದೇವಸ್ಥಾನದಲ್ಲಿ ಆಯೋಜಿಸಿದ್ದ ಕಲ್ಕಟ್ಟೆ ಗಾನ ದೀವಿಗೆ ಸರಣಿಯ 28ನೇ ಗೀತೆ ‘ಕುಂಬಾರ ಬೀದಿಯ ಶ್ರೀ ವೀರಭದ್ರ ಸ್ವಾಮಿ’ ಗೀತೆಯನ್ನು ಲೇಖಕ ಕೆಂಪನಹಳ್ಳಿ ಚಂದ್ರಶೇಖರ್ ಲೋಕಾರ್ಪಣೆಗೊಳಿಸಿದರು.

ಚಿಕ್ಕಮಗಳೂರು: ನಮ್ಮ ಹಿಂದೂ ಸಂಸ್ಕೃತಿಯಲ್ಲಿ ಪ್ರಾರ್ಥನೆಗಳು, ಭಜನೆಗಳು, ಗೀತೆಗಳೆಲ್ಲವೂ ಪ್ರಧಾನ ಪಾತ್ರವಹಿಸುತ್ತವೆ. ಭಕ್ತಿಗೀತೆಗಳಂತೂ ಸನಾತನಧರ್ಮದರಕಾ ಕವಚಗಳಂತಿವೆ ಎಂದು ಲೇಖಕ, ಚಿಂತಕ ಕೆಂಪನಹಳ್ಳಿ ಚಂದ್ರಶೇಖರ್ ತಿಳಿಸಿದರು.

ಇತ್ತೀಚೆಗೆಅವರು ನಗರದ ಬಸವನಹಳ್ಳಿ ಕುಂಬಾರ ಬೀದಿಯಲ್ಲಿರುವ ಶ್ರೀ ವೀರಭದ್ರ ಸ್ವಾಮಿದೇವಸ್ಥಾನದಲ್ಲಿಕಲ್ಕಟ್ಟೆ ಪುಸ್ತಕದ ಮನೆ, ಅಖಿಲ ಭಾರತ ಸಾಹಿತ್ಯ ಪರಿಷತ್, ಶ್ರೀ ಗುರುಕೃಪಾ ಸಂಗೀತ ಸೇವಾಟ್ರಸ್ಟ್ ಆಯೋಜಿಸಿದ್ದ ಕಲ್ಕಟ್ಟೆ ಗಾನ ದೀವಿಗೆ ಸರಣಿಯ 28ನೇ ಗೀತೆ‘ಕುಂಬಾರ ಬೀದಿಯ ಶ್ರೀ ವೀರಭದ್ರ ಸ್ವಾಮಿ’ ಹಾಡು ಲೋಕಾರ್ಪಣೆಗೊಳಿಸಿ ಅವರುಮಾತನಾಡಿದರು.

ಹೆಚ್.ಎನ್.ಮಲ್ಲೇಶರಾವ್ಅವರ ಸ್ಮರಣೆಯಲ್ಲಿ ನಿಜಕ್ಕೂಕಲ್ಕಟ್ಟೆ ಬಳಗ ಉತ್ತಮಧಾರ್ಮಿಕ ಸೇವೆ ನಡೆಸುತ್ತಿದೆ. ಭಾರತದ ನೆಲದಲ್ಲಿನ ಮೂಲ ಧರ್ಮದ ಉಳಿವಲ್ಲಿ ಸಂಗೀತದ ಪಾತ್ರ ಬಹುಮುಖ್ಯಎಂದರು.

ಸಾಹಿತಿರಮೇಶ್ ಬೊಂಗಾಳೆ ಈ ಕಾಲದಲ್ಲಿ ಸಂಜೆ ಪಾರ್ಟಿಗೆ ಬನ್ನಿ, ಕ್ಲಬ್‌ಗೆ ಬನ್ನಿ, ಬಾರ್‌ಗೆ ಬನ್ನಿ ಎಂದು ಸಂಜೆ ಹೊತ್ತಲ್ಲಿಕರೆಯುವವರು ಜಾಸ್ತಿಯಾಗುತ್ತಿದ್ದಾರೆ. ಆದರೆ, ನಾಗರಾಜರಾವ್‌ಕಲ್ಕಟ್ಟೆಯವರು ನಮ್ಮನ್ನೆಲ್ಲದೇವಸ್ಥಾನಕ್ಕೆ ಬನ್ನಿ ಎಂದುಕರೆಯುತ್ತಿರುವುದು ನಿಜಕ್ಕೂಗೌರವದ ವಿಷಯ. ಕೆ.ಎನ್.ನಾಗಭೂಷಣ್ ಈ ಸೇವೆಯಲ್ಲಿ ಪ್ರಮುಖ ಪಾತ್ರವಹಿಸುತ್ತಿರುವುದರಿಂದಅವರೂ ಸ್ತುತ್ಯಾರ್ಹರುಎಂದರು.

ನಿವೃತ್ತ ಪ್ರಾಚಾರ್ಯೆ ಚಾಂದಿನಿ ಚಮಕ್‌ಅವರುಮಾತನಾಡಿ, ಕಲ್ಕಟ್ಟೆ ನಾಗರಾಜರಾವ್‌ಅವರ ಭಕ್ತಿಗೀತೆಗಳನ್ನು ಕನ್ನಡ ನಾಡಿನಎಲ್ಲ ಭಜನಾ ತಂಡಗಳೂ ಹಾಡಬೇಕು. ಈ ಸರಣಿಯ ನಿರ್ಮಾಪಕಿಯಾಗಿರುವರೇಖಾನಾಗರಾಜರಾವ್ ಈ ದಿಸೆಯಲ್ಲಿ ಮುಂದೆತರಬೇತಿ ಶಿಬಿರ ನಡೆಸಬೇಕುಎಂದರು.

ಹಂಸಧ್ವನಿ ರಾಗದ ‘ವೀರಭದ್ರ’ ಗೀತೆಯನ್ನು ವೈಷ್ಣವಿ ಎನ್.ರಾವ್ ಸಂಗೀತ ಸಹಕಾರದಲ್ಲಿ ಮೂಡಿ ಬಂದುಜನಮೆಚ್ಚುಗೆಪಡೆಯಿತು.

ಚುಟುಕು ಕವಿ ಅರವಿಂದ ದೀಕ್ಷಿತ್, ಒಕ್ಕಲಿಗ ಮಹಿಳಾ ಮಂಡಳಿಯ ಕನಕ ಶಂಕರ್, ನಾಗಭೂಷಣ್‌ಕೆ.ಎನ್., ಗಾಯತ್ರಿ ನಾಗಭೂಷಣ್, ಅರ್ಚಕರಾದರೇಣುಕಾ ಮೂರ್ತಿ,

ಪಾಕತಜ್ಞ ಬಾಟಾ ನಾಗೇಂದ್ರ, ಪಾಕ ಚತುರೆ ಮೀರಾನಾಗೇಂದ್ರ, ಲೋಕೇಗೌಡ, ಶಿಕ್ಷಕಿ ವೇದಾಅಶೋಕ್, ಕೆಂಪನಹಳ್ಳಿ ನವೀನ್, ಶ್ರೀ ವೀರಭದ್ರಸ್ವಾಮಿದೇವಾಲಯ ಆಡಳಿತ ಮಂಡಳಿಯ ಅಧ್ಯಕ್ಷರು, ಪದಾಧಿಕಾರಿಗಳು, ವೀರಶೈವಗುಂಡಾಭಕ್ತ ಮಂಡಳಿಯವರು ಉಪಸ್ಥಿತರಿದ್ದರು.ನಾಗರಾಜರಾವ್‌ಕಲ್ಕಟ್ಟೆಯವರು ನಿರೂಪಿಸಿ ವಂದಿಸಿದರು.

# ವಚನ ಗಾಯನ ಸ್ಪರ್ಧೆ – 2025

**ದಾವಣಗೆರೆ** : ಬಸವ ಜಯಂತ್ಯೋತ್ಸವ ಸಮಿತಿ ಮತ್ತು ವಿಶ್ವ ವಿನೂತನ ಮಹಿಳಾ ಸಾಂಸ್ಕತಿಕ ಸಂಸ್ಥೆ, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಮಹಿಳೆಯರಿಗೆ ಏರ್ಪಡಿಸಿರುವ ವಚನ ಗಾಯನ ಸ್ಪರ್ಧೆ – 2025

ಕರ್ನಾಟಕ ಸಾಂಸ್ಕೃತಿಕ
ನಾಯಕ, ಮಾನವತಾವಾದಿ,
ಜಗಜ್ಯೋತಿ, ಲಿಂಗಾಯತ ಧರ್ಮ ಸಂಸ್ಥಾಪಕ, ವಿಶ್ವಗುರು ಬಸವಣ್ಣನವರ 892 ನೆಯ ಜನ್ಮ ದಿನದ ಅಂಗವಾಗಿ, ಬಸವ ಜಯಂತ್ಯೋತ್ಸವ ಸಮಿತಿ ಮತ್ತು ವಿಶ್ವ ವಿನೂತನ ಮಹಿಳಾ
ಸಾಂಸ್ಕತಿಕ ಸಂಸ್ಥೆ,
ದಾವಣಗೆರೆ –– 2025
ಇವರ ಸಹಯೋಗದಲ್ಲಿ
“ವಚನ ಗಾಯನ ಸ್ಪರ್ಧೆ”

ದಿನಾಂಕ : 28. 04. 2025 ನೆಯ ಸೋಮವಾರ ಸಂಜೆ 4–00 ಗಂಟೆಯಿಂದ ದಾವಣಗೆರೆ ನಗರದ ಜಯದೇವ ವೃತ್ತದ ಬಳಿಯಿರುವ “ಶಿವಯೋಗ ಮಂದಿರ”ದ ಒಳ ಆವರಣದಲ್ಲಿ ಮಹಿಳೆಯರಿಗಾಗಿ ಬಸವಾದಿ ಶರಣರ ವಚನ ಗಾಯನ ಸ್ಪರ್ಧೆಯನ್ನು ಏರ್ಪಡಿಸಿಲಾಗಿದೆ. ದಾವಣಗೆರೆ ಜಿಲ್ಲೆಯ ಆಸಕ್ತ ಮಹಿಳೆಯರು ವಚನ ಗಾಯನ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಈ ಸ್ಪರ್ಧೆಯಲ್ಲಿ ಭಾಗವಹಿಸುವ ಸ್ಪರ್ಧಿಗಳಿಗೆ ಉಚಿತ ಪ್ರವೇಶವಿರುತ್ತದೆ. ಸ್ಪರ್ಧೆಯಲ್ಲಿ ಭಾಗವಹಿಸುವ ಸ್ಪರ್ಧಿಗಳು ದಿನಾಂಕ : 27. 04. 2025 ರ ಸಂಜೆ 5–00 ಗಂಟೆಯೊಳಗೆ ಹೆಸರು ನೋಂದಾಯಿಸಿಕೊಳ್ಳ ತಕ್ಕದ್ದು. ವಚನ ಗಾಯನ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ಸ್ಪರ್ಧಿಗಳಿಗೆ ದಿನಾಂಕ : 01. 05. 2025 ನೆಯ ಗುರುವಾರ ಸಂಜೆ 6–00 ಗಂಟೆಗೆ ಶಿವಯೋಗ ಮಂದಿರದ ಆವರಣದಲ್ಲಿ ನಡೆಯಲಿರುವ “ಬಸವ ಜಯಂತಿ ಸಮಾರಂಭ” ದಲ್ಲಿ ಬಹುಮಾನಗಳನ್ನು ಹಾಗೂ ಪ್ರಶಸ್ತಿ ಪತ್ರಗಳನ್ನು ವಿತರಿಸಲಾಗುವುದೆಂದು ಸಮಿತಿಯ ಅಧ್ಯಕ್ಷರು ಮತ್ತು ಎಲ್ಲ ಪದಾಧಿಕಾರಿಗಳು ನಮ್ಮ ಪತ್ರಿಕೆಗೆ ತಿಳಿಸಿರುತ್ತಾರೆ. ಸರ್ವರಿಗೂ ಸ್ವಾಗತ.

ಬಹುಮಾನಗಳು ಈ ಕೆಳಕಂಡಂತಿವೆ.

1. ಪ್ರಥಮ ಬಹುಮಾನ
2. ದ್ವಿತೀಯ ಬಹುಮಾನ
3. ತೃತೀಯ ಬಹುಮಾನ
4. ಸಮಾಧಾನಕರ ಬಹುಮಾನ.

ಹೆಚ್ಚಿನ ಮಾಹಿತಿಗಾಗಿ ಈ ಕೆಳಗಿನ ಮೊಬೈಲ್ ಸಂಖ್ಯೆಗಳಿಗೆ ಸಂಪರ್ಕಿಸಲು ಈ ಮೂಲಕ ತಿಳಿಸಲಾಗಿದೆ.
ಶರಣೆ ವನಜಾ ಮಹಾಲಿಂಗಯ್ಯ : 9743940220
ಶರಣೆ ವೀಣಾ ಮಂಜುನಾಥ್ : 9972084938

# ಜೀವನ ಸಾರ್ಥಕತೆಗೆ ಅಕ್ಕನ ವಚನಗಳು ದಾರಿದೀಪ: ಬಸವಪ್ರಭು ಸ್ವಾಮೀಜಿ

**ದಾವಣಗೆರೆ:** ಮಾನವನ ಜೀವನ ಸಾರ್ಥಕತೆ ಹೊಂದಲು ಅಕ್ಕನ ವಚನಗಳ ಅಗತ್ಯವಿದ್ದು, ತನ್ನ ವಚನಗಳ ಅರಿವಿನ ಬೆಳಕಿನಿಂದ ಅಕ್ಕಮಹಾದೇವಿ ಇಂದಿಗೂ ಜೀವಂತವಾಗಿದ್ದಾಳೆ ಎಂದು ವಿರಕ್ತಮಠದ ಶ್ರೀ ಬಸವಪ್ರಭು ಸ್ವಾಮೀಜಿ ನುಡಿದರು.

ನಗರದ ಶ್ರೀಮತಿ ಮೋತಿ ಚನ್ನಬಸಮ್ಮ ವೀರಪ್ಪ ಕಲ್ಯಾಣ ಮಂಟಪದಲ್ಲಿ ಅಕ್ಕಮಹಾದೇವಿ ಸಮಾಜದಿಂದ ಶನಿವಾರ ಏರ್ಪಡಿಸಿದ್ದ ಶ್ರೀ ಅಕ್ಕಮಹಾದೇವಿ ಜಯಂತ್ಯುತ್ಸವ ಹಾಗೂ ವಚನೋತ್ಸವದ ಸಾನ್ನಿಧ್ಯ ವಹಿಸಿ, ಅಕ್ಕ ಪ್ರಶಸ್ತಿ ಪ್ರದಾನ ಮಾಡಿ ಆಶೀರ್ವಚನ ನೀಡಿದರು.ಅಕ್ಕಮಹಾದೇವಿಯ ವ್ಯಕ್ತಿತ್ವ ಮಹಿಳಾ ಕುಲದ ಸ್ವಾಭಿಮಾನದ ಪ್ರತಿರೂಪವಾಗಿದೆ.‘ಅಕ್ಕ’ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಶಾಂತ ಯಾವಗಲ್, “ ಅಕ್ಕ ಪ್ರಶಸ್ತಿ ನನಗೆ ಬಯಸದೆ ಬಂದ ಭಾಗ್ಯವಾಗಿದೆ. ಪ್ರಶಸ್ತಿಯಿಂದ ನನ್ನ ಸಾಮಾಜಿಕ ಜವಾಬ್ದಾರಿ ಹೆಚ್ಚಾಗಿದೆ ಎಂದರು.ಅಕ್ಕಮಹಾದೇವಿ ಸಮಾಜದ ಅಧ್ಯಕ್ಷ ಕಂಚಿಕೇರಿ ಸುಶೀಲಮ್ಮ ಅಧ್ಯಕ್ಷತೆ ವಹಿಸಿದ್ದರು. ಸಹ ಪ್ರಾಧ್ಯಾಪಕಿ ಡಾ. ಬಿ.ಜಿ. ಸಿದ್ದಲಿಂಗಮ್ಮ ಉಪನ್ಯಾಸ ನೀಡಿದರು. ಸೌಭಾಗ್ಯ ಹಿರೇಮಠ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# 2.61 ಲಕ್ಷ ಕುಟುಂಬದ ಯಜಮಾನಿಯರಿಗೆ ಗೃಹಲಕ್ಷ್ಮೀ ಸೌಲಭ್ಯ



**ಚಿಕ್ಕಮಗಳೂರು:** ಗೃಹಲಕ್ಷ್ಮೀ ಯೋಜನೆಯಲ್ಲಿ ಜಿಲ್ಲೆಯ 2,61,415 ಮಂದಿ ಯಜಮಾನಿಯರಿಗೆ 52.28 ಕೋಟಿ ರೂ. ನೇರವಾಗಿ ಸಂದಾಯವಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಸಾರಿಗೆ ಸಂಸ್ಥೆಗೆ ಸರ್ಕಾರ ಶಕ್ತಿ ಯೋಜನೆಯಡಿ

ಭರಪೂರ ಅನುದಾನ ಸರ್ಕಾರ ಬಿಡುಗಡೆ ಮಾಡಿರುವುದರಿಂದ ವಿಶೇಷವಾಗಿ ಮಾರ್ಚ್ ತಿಂಗಳಲ್ಲಿ ರಸ್ತೆ ಸಾರಿಗೆ ನಿಗಮದ 47 ಹೊಸ ಬಸ್‌ಗಳು ಜಿಲ್ಲೆಗೆ ಬಂದಿದ್ದು.ಅವುಗಳನ್ನು ಅಗತ್ಯವಿರುವ ಹೆಚ್ಚು ಜನದಟ್ಟಣೆ ಇರುವ ಮಾರ್ಗಗಳಲ್ಲಿ ಸಂಚರಿಸಲು ಒದಗಿಸಲಾಗುವುದು ಎಂದು ಅವರು ಹರ್ಷ ವ್ಯಕ್ತಪಡಿಸಿದರು.

ಆದಾಯ ತೆರಿಗೆ ಪಾವತಿದಾರರು ಹಾಗೂ ಜಿ.ಎಸ್.ಟಿ. ಪಾವತಿದಾರ ಕುಟುಂಬದ ಮಹಿಳೆಯರಿಗೆ ಗೃಹಲಕ್ಷ್ಮೀ ಯೋಜನೆಯ ಲಾಭವಾಗದಿರುವ ಬಗ್ಗೆ ಚರ್ಚಿಸಲಾಗಿದ್ದು, ಇದನ್ನು ಈ ಕುಟುಂಬಗಳಿಗೂ ವಿಸ್ತರಿಸುವಂತೆ ರಾಜ್ಯ ಸರ್ಕಾರಕ್ಕೆ ಮನವಿ ಮಾಡಲು ನಿರ್ಣಯಿಸಲಾಯಿತು.

ಅನ್ನಭಾಗ್ಯ ಯೋಜನೆಯಡಿ ಡಿ.24ರವರೆಗೆ ಫಲಾನುಭವಿಗಳ ಖಾತೆಗೆ ನೇರವಾಗಿ ನಗದು ಜಮಾ ಮಾಡಲಾಗುತ್ತಿದ್ದು, ಮಾರ್ಚ್ ತಿಂಗಳಿನಿಂದ ಫಲಾನುಭವಿಗಳಿಗೆ ಹಣದ ಬದಲಾಗಿ ತಲಾ 5 ಕೆ.ಜಿ. ಅಕ್ಕಿಯನ್ನು ಉಚಿತವಾಗಿ ಜಿಲ್ಲೆಯ 531 ಪಡಿತರ ವಿತರಣಾ ಕೇಂದ್ರಗಳ ಮೂಲಕ ಜಿಲ್ಲೆಯ 8,01,536 ನೀಡಲಾಗಿದೆ ಎಂದು ಆಹಾರ ಇಲಾಖೆಯ ಅಧಿಕಾರಿ ಸವಿತಾ ಸಭೆಗೆ ತಿಳಿಸಿದರು.

ಜಿಲ್ಲೆಯ 3,54,165 ಬಳಕೆದಾರರ (ಮೀಟರ್‌ಗಳು) ಪೈಕಿ 3,11,409 ಬಳಕೆದಾರರ (ಮೀಟರ್‌ಗಳು) ಸುಮಾರು 10 ಲಕ್ಷ ಜನರು ಉಚಿತವಾಗಿ ವಿದ್ಯುತ್ ಸೌಲಭ್ಯ ಪಡೆಯುತ್ತಿದ್ದು, ಇದಕ್ಕಾಗಿ ರಾಜ್ಯ ಸರ್ಕಾರ ಮಾಹೆಯಾನ 11.79 ಕೋಟಿ ರೂ.ಗಳನ್ನು ಮೆಸ್ಕಾಂಗೆ ಭರಿಸುತ್ತಿದೆ ಎಂದು ಮೆಸ್ಕಾಂ ಸೂಪರಿಂಟೆಂಡಿಂಗ್ ಇಂಜಿನಿಯರ್ ಮಂಜುನಾಥ್ ಸಭೆಗೆ ತಿಳಿಸಿದರು. ಜನಸಂಪರ್ಕ ಸಭೆಯೂ ಸೇರಿದಂತೆ ಇಲಾಖೆಯ ಹಲವು ವಿಷಯಗಳ ಬಗ್ಗೆ ಸದಸ್ಯರು ಈ ಸಂದರ್ಭದಲ್ಲಿ ಚರ್ಚಿಸಿದರು.

ಉದ್ಯೋಗ ವಿನಿಮಯ ಕೇಂದ್ರದಲ್ಲಿ ಇದುವರೆಗೂ 18111 ಪದವೀಧರರೂ, 96 ಡಿಪ್ಲೊಮಾ

ಪದವೀಧರರು ಯುವನಿಧಿಗೆ ಅರ್ಜಿ ಸಲ್ಲಿಸಿದ್ದು, ಅದಕ್ಕಾಗಿ ಇದುವರೆಗೆ ಸುಮಾರು 6 ಕೋಟಿ ರೂ. ಭರಿಸಲಾಗಿದೆ ಎಂದು ಉದ್ಯೋಗ ವಿನಿಮಯ ಕೇಂದ್ರದ ಅಧಿಕಾರಿ ನದಾಫ್ ತಿಳಿಸಿದರು.

ಶಕ್ತಿ ಯೋಜನೆಯಡಿ ಜಿಲ್ಲೆಯ ಬಸ್‌ಗಳಲ್ಲಿ ಜೂನ್ 2023 ರಿಂದ ಈವರೆಗೆ ಅಂದರೆ ಮಾರ್ಚ್ 2025ರವರೆಗೆ 3.84 ಕೋಟಿ ಮಹಿಳೆಯರು ಉಚಿತವಾಗಿ ಸಂಚರಿಸಿದ್ದು, 147 ಕೋಟಿ ರೂ. ಗಳನ್ನು ಸರ್ಕಾರ ರಾಜ್ಯ ರಸ್ತೆ ಸಾರಿಗೆ ನಿಗಮಕ್ಕೆ ನೀಡಿದೆ ಎಂದು ನಿಗಮದ ಸಂಚಾರಿ ವಿಭಾಗದ ಅಧಿಕಾರಿ ಚನ್ನಬಸಪ್ಪ ತಿಳಿಸಿದರು.

ನ್ಯಾಯಬೆಲೆ ಅಂಗಡಿಗಳ ಮುಂಭಾಗದಲ್ಲಿ ಗ್ಯಾರಂಟಿ ಯೋಜನೆಗಳ ನಾಮಫಲಕವನ್ನು ತೂಗು ಹಾಕಬೇಕೆಂದು ಸದಸ್ಯರು ಸಭೆಯ ಗಮನಕ್ಕೆ ತಂದಾಗ ಈ ಬಗ್ಗೆ ಕ್ರಮ ಕೈಗೊಳ್ಳುವುದಾಗಿ ಜಿ.ಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನ ತಿಳಿಸಿದರು.

ಪ್ರತೀ ತಿಂಗಳು ಮಾಸಿಕ ಪ್ರಗತಿ ಪರಿಶೀಲನಾ ಸಭೆಗಳು ನಡೆಯುತ್ತಿದ್ದು, ತಾಲ್ಲೂಕು ಸಮಿತಿಗಳು ತಾಲ್ಲೂಕು ಮಟ್ಟದಲ್ಲಿ ಸಭೆ, ಸಂವಾದ, ಫಲಾನುಭವಿಗಳ ಸಮಾವೇಶಗಳನ್ನು ಅಲ್ಲಲ್ಲಿ ನಡೆಸುತ್ತಿರುವ ಬಗ್ಗೆ ಪ್ರಸ್ತಾಪಿಸಿ ಪ್ರಶಂಸಿಸಿದ

ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಸಂಜೀವಿನಿ ಗುಂಪುಗಳನ್ನು ರಚಿಸುವಲ್ಲಿ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಸದಸ್ಯರು ಪ್ರಮುಖ ಪಾತ್ರ ವಹಿಸಬೇಕೆಂದು ಸಲಹೆ ನೀಡಿದರು.

ಜಿ.ಪಂ. ಉಪಕಾರ್ಯದರ್ಶಿ ಶಂಕರ್ ಕೊರವರ ಅವರು ಮಾತನಾಡಿ, ಪಂಚ ಗ್ಯಾರಂಟಿ ಅನುಷ್ಠಾನದ ವಿಚಾರದಲ್ಲಿ ಈಗಲೂ ಜಿಲ್ಲೆ ಪ್ರಥಮ ಸ್ಥಾನದಲ್ಲಿ ಉಳಿದಿದ್ದು, ಅಧಿಕಾರಿಗಳು ಅದನ್ನು ಉಳಿಸಿಕೊಳ್ಳುವಲ್ಲಿ ಶ್ರಮ ವಹಿಸಬೇಕು ಎಂದರು.

ಸಭೆಯಲ್ಲಿ ಪ್ರಾಧಿಕಾರದ ಜಿಲ್ಲಾ ಉಪಾಧ್ಯಕ್ಷರುಗಳಾದ ಡೈರಿ ಮಂಜಣ್ಣ, ಶಫೀವುಲ್ಲ, ಹೆಚ್.ಎಸ್.ಕೃಷ್ಣೇಗೌಡ, ಡಿ.ಜಿ.ಚಂದ್ರಮೌಳಿ, ಹೇಮಾವತಿ ಸೇರಿದಂತೆ ಪ್ರಾಧಿಕಾರದ ತಾಲ್ಲೂಕು ಅಧ್ಯಕ್ಷರುಗಳು, ತಾ.ಪಂ. ಕಾರ್ಯ ನಿರ್ವಹಣಾಧಿಕಾರಿಗಳು, ಕೌಶಲ್ಯ ಅಭಿವೃದ್ಧಿ ಇಲಾಖೆ ಅಧಿಕಾರಿ ಹೆಚ್.ಜಿ.ಪ್ರಶಾಂತ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಹಾಂತೇಶ ಭಜಂತ್ರಿ ಭಾಗವಹಿಸಿದ್ದರು.

# ಕಡ್ಡಾಯವಾಗಿ ಆಂತರಿಕಾ ದೂರು ನಿವಾರಣ ಸಮಿತಿ ರಚಿಸಲು ಜಿಲ್ಲಾಧಿಕಾರಿ ಸೂಚನೆ




**ಹಾಸನ:** ಸರ್ಕಾರಿ, ಅರೆ ಸರ್ಕಾರಿ, ಖಾಸಗಿ ವಲಯ, ಸಂಘಟಿತ ಅಸಂಘಟಿತ ವಲಯದಲ್ಲಿ ಹತ್ತಕ್ಕಿಂತ ಹೆಚ್ಚು ಮಹಿಳೆಯರು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳದಲ್ಲಿ ಕಡ್ಡಾಯವಾಗಿ ಆಂತರಿಕಾ ದೂರು ನಿವಾರಣ ಸಮಿತಿ ರಚಿಸಲು ಜಿಲ್ಲಾಧಿಕಾರಿ ಸತ್ಯಭಾಮ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.
ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನೆನ್ನೆ ನಡೆದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಮಹಿಳೆಯರು ಕೆಲಸ ಮಾಡುವ ಸ್ಥಳದಲ್ಲಿ ಯಾವುದೇ ರೀತಿಯ ಲೈಂಗಿಕ ದೌರ್ಜನ್ಯಕ್ಕೆ ಒಳಗಾದವರು ದೂರು ನೀಡಲು ಈ ಸಮಿತಿ ನೆರವಾಗಲಿದೆ ಎಂದು ತಿಳಿಸಿದರು.
ಜಿಲ್ಲಾ ಮಟ್ಟದ ಸಮಿತಿಯ ನಾಮ ನಿರ್ದೇಶಿತ ಸದಸ್ಯರಾದ ರೂಪ ಹಾಸನ್ ಅವರು ಮಾತನಾಡಿ ಮಹಿಳೆಯರು ಕರ್ತವ್ಯ ನಿರ್ವಹಿಸುವ ಸ್ಥಳಗಳಲ್ಲಿ ನೆಮ್ಮದಿಯಾಗಿ ಯಾವುದೇ ಮುಜುಗರವಿಲ್ಲದೆ ಕೆಲಸ ನಿರ್ವಹಿಸಲು ಹಾಗೂ ಮಹಿಳೆಯರ ಸುರಕ್ಷತೆಗಾಗಿ 2013 ರಲ್ಲಿ ಲೈಂಗಿಕ ದೌರ್ಜನ್ಯ ತಡೆ, ನಿರ್ಬಂಧ ಮತ್ತು ಪರಿಹಾರ ಕಾಯ್ದೆ ಜಾರಿಗೆ ಬಂದಿದೆ ಎಂದರಲ್ಲದೆ ಆಂತರಿಕ ದೂರು ನಿವಾರಣ ಸಮಿತಿ ಕರ್ತವ್ಯ ನಿರ್ವಹಿಸುವ ಬಗ್ಗೆ ಹಾಗೂ ಕಾಯ್ದೆಯ ಬಗ್ಗೆ ಸವಿವರವಾಗಿ ವಿವರಿಸಿದರು.
ಅಪರ ಜಿಲ್ಲಾಧಿಕಾರಿ ಕೆ.ಟಿ.ಶಾಂತಲ, ಜಿಲ್ಲಾಧಿಕಾರಿಯವರ ಕಚೇರಿಯ ಅಧಿಕಾರಿಗಳು ಸಿಬ್ಬಂದಿಗಳು ಭಾಗವಹಿಸಿದ್ದರು.

# ಬಿಳೇಕಲ್ಲು ರಂಗನಾಥ ಸ್ವಾಮಿ ರಥೋತ್ಸವ

**ಚಿಕ್ಕಮಗಳೂರು:** ತಾಲ್ಲೂಕಿನ ಬಿಳೇಕಲ್ಲು ಶ್ರೀ ರಂಗನಾಥ ಸ್ವಾಮಿ ಮಹಾ ರಥೋತ್ಸವವು ಏ.25 (ನಾಳೆ) ರಿಂದ 29ರವರೆಗೆ ನಡೆಯಲಿದ್ದು, ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ. ಇ.25 ರಂದು ಬೆಳಿಗ್ಗೆ 7 ಗಂಟೆಗೆ ವಿವಿಧ ಪಂಚಾಮೃತ ಅಭಿಷೇಕ, ದೇವತಾ ಪ್ರಾರ್ಥನೆ ಮತ್ತಿತರ ಕಾರ್ಯಕ್ರಮಗಳು, 26 ರಂದು ಬೆಳಿಗ್ಗೆ 9ಕ್ಕೆ ಸಹಸ್ರನಾಮ ಪೂಜೆ, ಅಷ್ಟಲಕ್ಷ್ಮೀ ಆರಾಧನೆ, 10 ಗಂಟೆಗೆ ರಥಕಳಸ ಸ್ಥಾಪನೆ, 27 ರಂದು ಯಾತ್ರಾ ದಾನೋತ್ಸವ, ಶ್ರೀ ಕೃಷ್ಣ ಗಂಧೋತ್ಸವ ಮತ್ತಿತರ ಕಾರ್ಯಕ್ರಮಗಳು, ಮಧ್ಯಾಹ್ನ 3 ಗಂಟೆಗೆ ಮಹಾ ರಥೋತ್ಸವ, 28 ಹಾಗೂ 29 ರಂದು ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ತಹಸೀಲ್ದಾರರು ಹಾಗೂ ಗ್ರಾಮಸ್ಥರು ಕೋರಿದ್ದಾರೆ.

## ಮಹಿಳೆಯರಿಗೆ ವಚನ ಗಾಯನ ಸ್ಪರ್ಧೆ

**ದಾವಣಗೆರೆ:** ಬಸವ ಜಯಂತ್ಯೋತ್ಸವ ಸಮಿತಿ ಮತ್ತು ವಿಶ್ವ ವಿನೂತನ ಮಹಿಳಾ ಸಾಂಸ್ಕತಿಕ ಸಂಸ್ಥೆ, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಮಹಿಳೆಯರಿಗೆ “ವಚನ ಗಾಯನ ಸ್ಪರ್ಧೆ” ಯನ್ನುಏ. 28 ಸೋಮವಾರ ಸಂಜೆ 4 ಗಂಟೆಯಿಂದ ನಗರದ ಶಿವಯೋಗ ಮಂದಿರದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.ದಾವಣಗೆರೆ ಜಿಲ್ಲೆಯ ಆಸಕ್ತ ಮಹಿಳೆಯರು ವಚನ ಗಾಯನ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಈ ಸ್ಪರ್ಧೆಯಲ್ಲಿ ಭಾಗವಹಿಸುವ ಸ್ಪರ್ಧಿಗಳಿಗೆ ಉಚಿತ ಪ್ರವೇಶವಿರುತ್ತದೆ. ಸ್ಪರ್ಧೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಏ. 27 ರೊಳಗೆ ಸಂಜೆ 5 ಗಂಟೆಯೊಳಗೆ ಹೆಸರು ನೋಂದಾಯಿಸಿಕೊಳ್ಳುವುದು. ವಚನ ಗಾಯನ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ಸ್ಪರ್ಧಿಗಳಿಗೆ ಮೇ. 1 ಗುರುವಾರ ಸಂಜೆ 6 ಗಂಟೆಗೆ ಶಿವಯೋಗ ಮಂದಿರದ ಹೊರ ಆವರಣದಲ್ಲಿ ನಡೆಯಲಿರುವ “ಬಸವ ಜಯಂತಿ” ಸಮಾರಂಭದಲ್ಲಿ ಬಹುಮಾನಗಳನ್ನು ಹಾಗೂ ಪ್ರಶಸ್ತಿ ಪತ್ರಗಳನ್ನು ವಿತರಿಸಲಾಗುವುದು.

ಹೆಚ್ಚಿನ ಮಾಹಿತಿಗೆ ವನಜಾ ಮಹಾಲಿಂಗಯ್ಯ
–9743940220, ವೀಣಾ ಮಂಜುನಾಥ್
–9972084938 ಸಂಪರ್ಕಿಸಲು ತಿಳಿಸಿದ್ದಾರೆ.

# ಕ್ರೀಡಾಸಂಕೀರ್ಣದಲ್ಲಿ 3 ನೇ ಹಂತದಲ್ಲಿ ಈಜು, ಸ್ಕೇಟಿಂಗ್, ಲಾನ್ ಟೆನ್ನಿಸ್ ಬೇಸಿಗೆ ಶಿಬಿರ

**ಶಿವಮೊಗ್ಗ** : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ನಗರದ ಸ್ವಾಮಿ ವಿವೇಕಾನಂದ ಬಡಾವಣೆಯ ಕ್ರೀಡಾ ಸಂಕೀರ್ಣದಲ್ಲಿ ಮಕ್ಕಳಿಗಾಗಿ 3ನೇ ಹಂತದಲ್ಲಿ ಬೇಸಿಗೆ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ.

ಈ ಬೇಸಿಗೆ ಶಿಬಿರವು ಮೇ 02 ರಿಂದ 25 ರವರೆಗೆ 21 ದಿನಗಳು ನಡೆಯಲಿದ್ದು, ವಿಶೇಷವಾಗಿ ಈಜು, ಸ್ಕೇಟಿಂಗ್ ಮತ್ತು ಲಾನ್ ಟೆನ್ನಿಸ್ ಕ್ರೀಡೆಗಳಲ್ಲಿ ನುರಿತ ಕ್ರೀಡಾ ತರಬೇತುದಾರರಿಂದ ಬೆಳಿಗ್ಗೆ ಮತ್ತು ಸಂಜೆಯ ಅವಧಿಯಲ್ಲಿ ತರಬೇತಿ ನೀಡಲಾಗುವುದು. ವಿಶೇಷವಾಗಿ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಮತ್ತು ಹಿರಿಯ ನಾಗರೀಕರಿಗೆ ಶುಲ್ಕದಲ್ಲಿ ಶೇ.50ರಷ್ಟು ರಿಯಾಯಿತಿ ನೀಡಲಾಗುವುದು. ವಾರದ ಕೊನೆಯ ಶನಿವಾರ ಮತ್ತು ಭಾನುವಾರಗಳಂದು ಈಜು ತರಬೇತಿಯನ್ನು ಪಡೆಯುವ ಅವಕಾಶವಿದ್ದು, ಪ್ರತೀ ಭಾನುವಾರ ಸಹ ಈಜು ತರಬೇತಿಯನ್ನು ಪಡೆಯಬಹುದಾಗಿದೆ. ವಸತಿಶಾಲೆ/ ಪ್ರೌಢಶಾಲಾ/ಕಾಲೇಜು ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಾಲಿನಲ್ಲಿ ಅಂದರೆ ಜೂನ್ ತಿಂಗಳ ಪ್ರಾರಂಭದಲ್ಲಿ ವಾರಕ್ಕೆ ಒಂದು ದಿನ ಅಥವಾ ಎರಡು ದಿನದ ತರಬೇತಿಯನ್ನು ಪಡೆಯುವ ಅವಕಾಶವನ್ನು ನೀಡಲಾಗುತ್ತಿದ್ದು, ಆಸಕ್ತ ಶಾಲಾ/ಕಾಲೇಜುಗಳು ಹೆಚ್ಚಿನ ಮಾಹಿತಿಯನ್ನು ಪಡೆದು ಇದರ ಸದುಪಯೋಗವನ್ನು ಪಡೆದುಕೊಳ್ಳುವುದು.

ಬೇಸಿಗೆ ಶಿಬಿರದಲ್ಲಿ ಪಾಲ್ಗೊಳ್ಳಲಿಚ್ಚಿಸುವ ಕ್ರೀಡಾಸಕ್ತರು ಮಾಹಿತಿಗಾಗಿ ಮೊ.9743820293, 6362200751 (ಈಜು), 7760921936 (ಸ್ಕೇಟಿಂಗ್), 8374335635 (ಟೆನ್ನಿಸ್) ಇವರನ್ನು ಸಂಪರ್ಕಿಸುವಂತೆ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ಅರಳುಗುಪ್ಪೆ ಮೀಸಲು ಅರಣ್ಯ: ರೈತರು ಅತಂತ್ರ

**ಚಿಕ್ಕಮಗಳೂರು:** ತಾಲ್ಲೂಕಿನ ಅರಳಗುಪ್ಪೆ ಗ್ರಾಮ ವ್ಯಾಪ್ತಿಯ 95 ಎಕರೆ ಜಾಗವನ್ನು ಮೀಸಲು ಅರಣ್ಯ ವ್ಯಾಪ್ತಿಗೆ ಪಡೆಯಲು ಅರಣ್ಯ ಇಲಾಖೆ ಮುಂದಾಗಿದ್ದು, ಇದೇ ಜಾಗಕ್ಕೆ ಸಾಗುವಳಿ ಚೀಟಿ ಪಡೆದಿರುವ ರೈತರು ಮತ್ತು ಮನೆ ನಿರ್ಮಿಸಿಕೊಂಡಿರುವ ಈಗ ಅತಂತ್ರರಾಗಿದ್ದಾರೆ.

ಕೈಮರದಿಂದ ಮುಳ್ಳಯ್ಯನಗಿರಿ ರಸ್ತೆಯಲ್ಲಿರುವ ಅರಳುಗುಪ್ಪೆ ಗ್ರಾಮದ ಸರ್ವೆ ನಂಬರ್ 292ರಲ್ಲಿ 95 ಎಕರೆ ಜಾಗವನ್ನು ಕಂದಾಯ ಇಲಾಖೆ 50 60 ವರ್ಷಗಳ ಹಿಂದೆಯೇ ತಲಾ 2-3 ಎಕರೆಯಂತೆ ರೈತರಿಗೆ ಮಂಜೂರು ಮಾಡಿದೆ. ಈ ಜಾಗದಲ್ಲಿ ಕಾಫಿ ತೋಟಗಳು ನಿರ್ಮಾಣವಾಗಿದ್ದು, ಕೆಲವರು ಮನೆಗಳನ್ನೂ ಕಟ್ಟಿಕೊಂಡಿದ್ದಾರೆ. ಇಂದಿರಾನಗರ ಮತ್ತು ಎನ್‌ಎಂಡಿಸಿ ಎಂಬ ಹಳ್ಳಿಗಳೂ ಇದಕ್ಕೆ ಹೊಂದಿಕೊಂಡಿವೆ.

ಈ ಜಾಗವನ್ನು 1987ರಲ್ಲೇ ಅರಳಗುಪ್ಪೆ ಮೀಸಲು ಅರಣ್ಯ ಎಂದು ಸೆಕ್ಷನ್ 4 ಜಾರಿಗೊಳಿಸಲಾಗಿದೆ. ಆದರೂ ಈ ಜಾಗವನ್ನು ಕಂದಾಯ ಇಲಾಖೆ ಮಂಜೂರು ಮಾಡಿದೆ. ಆದ್ದರಿಂದ ವಿಚಾರಣೆಗೆ ಹಾಜರಾಗಿ ದಾಖಲೆಗಳನ್ನು ಸಲ್ಲಿಸಬೇಕು ಎಂದು ಎಲ್ಲ ರೈತರಿಗೆ ಅರಣ್ಯ ವ್ಯವಸ್ಥಾಪನಾಧಿಕಾರಿ ನೋಟಿಸ್ ನೀಡಿದ್ದಾರೆ.

ದಟ್ಟವಾದ ಮರಗಳಿಲ್ಲದ ಜಾಗದಲ್ಲಿ ನಮ್ಮ ಪೂರ್ವಿಕರು ಹಲವು ವರ್ಷಗಳಿಂದ ಸಾಗುವಳಿ ಮಾಡಿದ್ದಾರೆ. ಕಂದಾಯ ಇಲಾಖೆ ಸಾಗುವಳಿ ಚೀಟಿಯನ್ನೂ ನೀಡಿದೆ. ಸ್ಥಳ ಪರಿಶೀಲನೆ ನಡೆಸದೆ, ಕಂದಾಯ ಇಲಾಖೆ ಅಭಿಪ್ರಾಯವನ್ನೂ ಪಡೆಯದೆ ಅವೈಜ್ಞಾನಿಕವಾಗಿ ನಕ್ಷೆ ತಯಾರಿಸಿ ಮೀಸಲು ಅರಣ್ಯ ಎಂದು ಘೋಷಿಸಲು ಅರಣ್ಯ ಇಲಾಖೆ ಅಧಿಕಾರಿಗಳು



ಸಂಗ್ರಹ ಚಿತ್ರ.

ಪ್ರಯತ್ನಿಸುತ್ತಿದ್ದಾರೆ’ ಎಂಬುದು ಗ್ರಾಮಸ್ಥರ ಅಸಮಾಧಾನ.

ಹಿಡುವಳಿದಾರರನ್ನು ವಿಚಾರಣೆಗೆ ಕರೆಯುವ ಮುನ್ನ ಸಾರ್ವಜನಿಕ ಘೋಷಣೆ ಹೊರಡಿಸಬೇಕು ಎಂದು ಅರಣ್ಯ ಕಾಯ್ದೆಯೇ ಹೇಳುತ್ತದೆ. ಆದರೆ, ಅರಣ್ಯ ಇಲಾಖೆ ಅಧಿಕಾರಿಗಳು ಕಚೇರಿಯಲ್ಲೇ ಕುಳಿತು ರೈತರನ್ನು ಒಕ್ಕಲೆಬ್ಬಿಸುವ ಪ್ರಯತ್ನ ನಡೆಸುತ್ತಿದ್ದಾರೆ ಎಂದು ದೂರಿದರು.

1988-89ರಲ್ಲಿ ಗೋಮಾಳ ಜಮೀನನ್ನು ‘ಗೋಮಾಳ ಅರಣ್ಯ’ ಎಂದು ಎಂ.ಆರ್. ದಾಖಲಿಸಲಾಗಿದೆ. 1991ರಲ್ಲಿ ಈ ಜಾಗವನ್ನು ಮತ್ತೆ ಕಂದಾಯ ಇಲಾಖೆಗೆ ವಾಪಸ್ ಪಡೆಯಲಾಗಿದೆ. ಇದು ಕೂಡ ಕಂದಾಯ ಇಲಾಖೆಯ ಎಂ.ಆರ್.ನಲ್ಲಿ ದಾಖಲಾಗಿದೆ. ಪರಿಶಿಷ್ಟ ಜಾತಿ, ಹಿಂದುಳಿದ ವರ್ಗದವರು ಸೇರಿ ಎಲ್ಲಾ ಸಮುದಾಯದವರು ಇದೇ ಜಮೀನು ನಂಬಿ ಜೀವನ ನಡೆಸುತ್ತಿದ್ದೇವೆ. ಇಂದಿರಾ ನಗರ ಮತ್ತು ಎನ್‌ಎಂಡಿಸಿ ಗ್ರಾಮದಲ್ಲಿ ಸುಮಾರು 200 ಮನೆಗಳನ್ನು ನಿರ್ಮಾಣವಾಗಿದೆ. ಈ ಜಾಗವನ್ನು ಅರಣ್ಯ ವ್ಯಾಪ್ತಿಗೆ ಪಡೆಯುವ ಪ್ರಯತ್ನ ಸರಿಯಲ್ಲ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದರು.

“ದಟ್ಟವಾದ ಮರಗಳಿಲ್ಲದ ಜಾಗದಲ್ಲಿ ನಮ್ಮ ಪೂರ್ವಿಕರು ಹಲವು ವರ್ಷಗಳಿಂದ ಸಾಗುವಳಿ ಮಾಡಿದ್ದಾರೆ. ಕಂದಾಯ ಇಲಾಖೆ ಸಾಗುವಳಿ ಚೀಟಿಯನ್ನೂ ನೀಡಿದೆ. ಸ್ಥಳ ಪರಿಶೀಲನೆ ನಡೆಸದೆ,

ಕಂದಾಯ ಇಲಾಖೆ ಅಭಿಪ್ರಾಯವನ್ನೂ ಪಡೆಯದೆ ಅವೈಜ್ಞಾನಿಕವಾಗಿ ನಕ್ಷೆ ತಯಾರಿಸಿ ಮೀಸಲು ಅರಣ್ಯ ಎಂದು ಘೋಷಿಸಲು ಅರಣ್ಯ ಇಲಾಖೆ ಅಧಿಕಾರಿಗಳು ಪ್ರಯತ್ನಿಸುತ್ತಿದ್ದಾರೆ’ ಎಂಬುದು ಗ್ರಾಮಸ್ಥರ ಅಸಮಾಧಾನ.

ಹಿಡುವಳಿದಾರರನ್ನು ವಿಚಾರಣೆಗೆ ಕರೆಯುವ ಮುನ್ನ ಸಾರ್ವಜನಿಕ ಘೋಷಣೆ ಹೊರಡಿಸಬೇಕು ಎಂದು ಅರಣ್ಯ ಕಾಯ್ದೆಯೇ ಹೇಳುತ್ತದೆ, ಆದರೆ, ಅರಣ್ಯ ಇಲಾಖೆ ಅಧಿಕಾರಿಗಳು ಕಚೇರಿಯಲ್ಲೇ ಕುಳಿತು ರೈತರನ್ನು ಒಕ್ಕಲೆಬ್ಬಿಸುವ ಪ್ರಯತ್ನ ನಡೆಸುತ್ತಿದ್ದಾರೆ ಎಂದು ದೂರಿದರು.

1988 89ರಲ್ಲಿ ಗೋಮಾಳ ಜಮೀನನ್ನು ‘ಗೋಮಾಳ ಅರಣ್ಯ’ ಎಂದು ಎಂ.ಆರ್. ದಾಖಲಿಸಲಾಗಿದೆ. 1991ರಲ್ಲಿ ಈ ಜಾಗವನ್ನು ಮತ್ತೆ ಕಂದಾಯ ಇಲಾಖೆಗೆ ವಾಪಸ್ ಪಡೆಯಲಾಗಿದೆ. ಇದು ಕೂಡ ಕಂದಾಯ ಇಲಾಖೆಯ ಎಂ.ಆರ್‌ನಲ್ಲಿ ದಾಖಲಾಗಿದೆ. ಪರಿಶಿಷ್ಟ ಜಾತಿ, ಹಿಂದುಳಿದ ವರ್ಗದವರು ಸೇರಿ ಎಲ್ಲಾ ಸಮುದಾಯದವರು ಇದೇ ಜಮೀನು ನಂಬಿ ಜೀವನ ನಡೆಸುತ್ತಿದ್ದೇವೆ. ಇಂದಿರಾ ನಗರ ಮತ್ತು ಎನ್‌ಎಂಡಿಸಿ ಗ್ರಾಮದಲ್ಲಿ ಸುಮಾರು 200 ಮನೆಗಳನ್ನು ನಿರ್ಮಾಣವಾಗಿವೆ. ಈ ಜಾಗವನ್ನು ಅರಣ್ಯ ವ್ಯಾಪ್ತಿಗೆ ಪಡೆಯುವ ಪ್ರಯತ್ನ ಸರಿಯಲ್ಲ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದರು.

ಚಿಕ್ಕಮಗಳೂರಿನಿಂದ ಮುಳ್ಳಯ್ಯನಗಿರಿ, ಬಾಬಾಬುಡನ್‌ಗಿರಿ ಸೇರಿ ಹಲವು ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಹೆದ್ದಾರಿಯೂ ಇದೇ ಸರ್ವೆ ನಂಬರ್‌ನಲ್ಲಿ ಹಾದು ಹೋಗಿದೆ. ರಸ್ತೆ ಅಭಿವೃದ್ಧಿಗೂ ಮುಂದಿನ ದಿನಗಳಲ್ಲಿ ಅರಣ್ಯ ಇಲಾಖೆ ಅಡ್ಡಿಯುಂಟು ಮಾಡುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದರು.

# ಸೌಹಾರ್ದಕ್ಕೆ ಧಕ್ಕೆಯಾದರೆ ಜನರೋಷ: ಗಣನಾಥ ಎಕ್ಕಾರು



**ಮಂಗಳೂರು:** ಭಾರತದ ಸೌಹಾರ್ದ ಪರಂಪರೆ ದೊಡ್ಡದು. ಅದಕ್ಕೆ ಧಕ್ಕೆಯಾದಾಗಲೆಲ್ಲ ಜನರು ಕುಪಿತರಾಗಿದ್ದಾರೆ. ಅದಕ್ಕೆ ಸರಿಯಾದ ಉದಾಹರಣೆ ಕಳೆದ ವರ್ಷದ ಲೋಕಸಭಾ ಚುನಾವಣೆ ಎಂದು ಜಾನಪದ ಸಂಶೋಧಕ ಗಣನಾಥ ಎಕ್ಕಾರು ಅಭಿಪ್ರಾಯಪಟ್ಟರು.

ಅಹರ್ನಿಶಿ ಪ್ರಕಾಶನ ಹೊರತಂದಿರುವ, ನವೀನ್ ಸೂರಿಂಜೆ ಅವರ ‘ಸತ್ಯೋಲು’ ಕೃತಿ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಲೋಕಸಭೆ ಚುನಾವಣೆಯಲ್ಲಿ 40ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲುವುದಾಗಿ ಹೇಳಿದ ಪತ್ತವೊಂದು 240 ಸೀಟುಗಳಿಗೆ ಸಮಾಧಾನಪಟ್ಟುಕೊಳ್ಳಬೇಕಾಯಿತು. ಸೌಹಾರ್ದ ಕದಡಲು ನಡೆಸಿದ ಪ್ರಯತ್ನಕ್ಕೆ ಜನರು ಕೊಟ್ಟ ಉತ್ತರ ಅದು ಎಂದರು.

ಲೇಖಕರ ತಂದೆ ಸುಂದರ ಶೆಟ್ಟಿ ಮತ್ತು ತಾಯಿ ರತ್ನಾ ಶೆಟ್ಟಿ ಅವರಿಗೆ ಪ್ರತಿಗಳನ್ನು ನೀಡಿ ಚಿಂತಕಿ ಅತ್ರಾಡಿ ಅಮೃತ ಶೆಟ್ಟಿ

ಅವರು ಪುಸ್ತಕ ಬಿಡುಗಡೆ ಮಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪತ್ರಕರ್ತ ಇರ್ಷಾದ್ ಉಪ್ಪಿನಂಗಡಿ, ‘ಸೌಹಾರ್ದ ಸಾರುವ ದೈವಗಳನ್ನು ಮುಂದಿಟ್ಟುಕೊಂಡು ಸಮುದಾಯವೊಂದರ ಅವಹೇಳನ ಮಾಡಲಾಗುತ್ತಿದೆ. ಮಹಿಳೆಯರನ್ನು ಕೆಟ್ಟದಾಗಿ ಬಿಂಬಿಸಲಾಗುತ್ತಿದೆ’ ಎಂದರು.

‘ಕರಾವಳಿಯಲ್ಲಿ ದೈವ ಮತ್ತು ಮುಸ್ಲಿಂ ಸಮುದಾಯಕ್ಕೆ ಹತ್ತಿರದ ನಂಟು ಇದೆ. ಇಲ್ಲಿನ ಬಬ್ಬರ್ಯ ಮುಸ್ಲಿಂ ಆಗಿದ್ದು ಎಲ್ಲ ಧರ್ಮದಲ್ಲೂ ಆತನನ್ನು ಆರಾಧಿಸುವ ಜನರು ಧಾರಾಳ ಇದ್ದಾರೆ. ಅಲಿ ಭೂತ, ಬ್ಯಾರ್ದಿ ಭೂತ ಕೂಡ ಮುಸ್ಲಿಂ ಸಮುದಾಯದ್ದು. ದೈವದ ಭಂಡಾರ ಹೋಗುವ ದಾರಿಯಲ್ಲಿ ಮಸೀದಿಗಳು ಇದ್ದರೆ ಅಲ್ಲಿ ಎಳನೀರು ಕುಡಿದೇ ದೈವ ಮುಂದೆ ಹೋಗುತ್ತದೆ. ದರ್ಗಾಗಳು ಕೂಡ ಸೌಹಾರ್ದದ ತಾಣಗಳಾಗಿವೆ. ಆದರೆ ಈಗ ಇಂಥ ಸಂಸ್ಕೃತಿಯನ್ನು ನಾಶ ಮಾಡುವ ಹುನ್ನಾರ ನಡೆಯುತ್ತಿದೆ’ ಎಂದರು.

ಡಿಎಸ್‌ಎಸ್ ಪ್ರೊ ಕೃಷ್ಣಪ್ಪ ಬಣದ ಸಂಚಾಲಕ ಕೃಷ್ಣಾನಂದ ಡಿ ಅಧ್ಯಕ್ಷತೆ ವಹಿಸಿದ್ದರು. ಅಹರ್ನಿಶಿ ಪ್ರಕಾಶನದ ಅಕ್ಷತಾ ಹುಂಚದಕಟ್ಟೆ ಇದ್ದರು.

# ಅಮಾಯಕ ಹಿಂದೂಗಳ ಹತ್ಯೆ ಖಂಡಿಸಿ ಮೌನ ಪ್ರತಿಭಟನೆ

**ಚಿಕ್ಕಮಗಳೂರು:** ಕಾಶ್ಮೀರದಲ್ಲಿ ನಡೆದ ಅಮಾಯಕ ಹಿಂದೂಗಳ ಹತ್ಯೆಯನ್ನು ಖಂಡಿಸಿ ಬಿಜೆಪಿ ಕಡವಂತಿ ಶಕ್ತಿ ಕೇಂದ್ರದ ಬೊಗಸೆ ಬೂತ್‌ನ ದೇವರಗದ್ದೆ ಬಸ್ ನಿಲ್ದಾಣದ ವೃತ್ತದಲ್ಲಿ ದೀಪ ಬೆಳಗಿಸುವ ಮೂಲಕ ಮೌನ ಪ್ರತಿಭಟನೆ ನಡೆಸಿದರು.

ಈ ಕುರಿತು ಮಾತನಾಡಿದ ಕಡವಂತಿ ಗ್ರಾ.ಪಂ.ಸದಸ್ಯ ವಿನೋದ್ ಬೊಗಸೆ ಪಕ್ಷಾತೀತವಾಗಿ, ಜಾತಿ ರಹಿತವಾಗಿ ನಾವೆಲ್ಲರೂ ಒಂದು-ನಾವೆಲ್ಲರೂ ಹಿಂದೂ, ನಮಗೆಲ್ಲರಿಗೂ ಇರುವುದು ಒಂದೇ ದೇಶ, ಅದು ಭಾರತ ದೇಶ ಎಂಬ ಭಾವನೆಯಿಂದ ಒಟ್ಟಾಗಿ ಬದುಕಬೇಕು ಎಂದರು.

ಹೀನಾಕೃತ್ಯ ಎಸಗಿ, ದೇಶಕ್ಕೆ ಗೌರವ ತೋರಿದವರು, ನಮ್ಮಲ್ಲಿದ್ದು ನಮ್ಮಗಳ ಮೇಲೆ ಸಂಚು ರೂಪಿಸುವ ಪ್ರತಿಯೊಬ್ಬರನ್ನು ಗುಂಡಿಕ್ಕಬೇಕು. ಹಿಂದುಗಳ ಹತ್ಯೆಯನ್ನು ಖಂಡಿಸಿ ದೇಶದಾದ್ಯಂತ ಪ್ರತಿ ಬೂತಿನಲ್ಲೂ ಪ್ರತಿಭಟನೆ ಮಾಡಿ ಪ್ರತಿಯೊಬ್ಬ ಹಿಂದೂಗಳಿಗೂ ಮನವರಿಕೆ ಮಾಡಿಕೊಡಬೇಕು ಎಂದರು.

ಹಿಂದುಗಳ ಹತ್ಯೆಯನ್ನು ಕೇಂದ್ರ ಸರ್ಕಾರ ಗಂಭೀರವಾಗಿ ಪರಿಗಣಿಸಿ ಪಾಕಿಸ್ತಾನಕ್ಕೆ ಭಾರತ ಪ್ರತೀಕಾರದ ದಾಳಿಗೆ ತಿರುಗೇಟು ನೀಡಿದೆ, ಆರ್ಥಿಕತೆ ಮೇಲೆ ಐದಂಶದ ರಾಜಾತಾಂತ್ರಿಕ ಸರ್ಜಿಕಲ್ ಸ್ಟ್ರೈಕ್ ಮಾಡಿದೆ, ಸಿಂಧು ನದಿ ಜಲ ಒಪ್ಪಂದಕ್ಕೆ ತಕ್ಷಣ ಬ್ರೇಕ್, ಅಟ್ಟಾರಿ ಗಡಿ ಬಂದ್, ವೀಸಾರದ್ದು, ರಾಯಬಾರಿ ಕಚೇರಿ ಸಿಬ್ಬಂದಿ ಕಡಿತ, ಭಾರತೀಯ ರಾಯಭಾರಿ ಕಚೇರಿ ಸಿಬ್ಬಂದಿ ಇಳಿಸಿ ತಕ್ಕಪಾಠ ಕಲಿಸಿದೆ ಎಂದು ಹೇಳಿದರು.

# ಪಹಲ್ಗಾಮ್‌ನಲ್ಲಿ ಹಿಂದೂಗಳ ಮಾರಣ ಹೋಮ ಖಂಡಿಸಿ ಸಂಘ ಪರಿವಾರ ಪ್ರತಿಭಟನೆ

**ಬೇಲೂರು:** ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಹಿಂದೂಗಳ ಮಾರಣ ಹೋಮ ಖಂಡಿಸಿ ಬಂಜರಂಗದಳ ಶ್ರೀರಾಮಸೇನೆ ಹಾಗೂ ವಿಶ್ವ ಹಿಂದೂ ಪರಿಷತ್ ವತಿಯಿಂದ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಟೈರ್‌ಗೆ ಬೆಂಕಿ ಹಚ್ಚಿ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಪಾಕಿಸ್ತಾನ ಹಾಗು ಕಾಶ್ಮೀರದ ಭಯೋತ್ಪಾದಕರನ್ನು ಬೆಂಬಲಿಸುತ್ತಿರುವ ವಿರುದ್ಧ ಧಿಕ್ಕಾರ ಕೂಗಿ ಮಾತನಾಡಿದ ಬಿಜೆಪಿ ಮುಖಂಡ ಹಾಗೂ ಸಮಾಜಸೇವಕ ಸಂತೋಷ್ ಪ್ರವಾಸಿಗರನ್ನು ಗುರಿಯಾಗಿಟ್ಟುಕೊಂಡು ಅದರಲ್ಲೂ ಹಿಂದೂಗಳ ಹತ್ಯೆ ಮಾಡುವ ಉದ್ದೇಶದಿಂದಲೆ ನಮ್ಮ ರಾಜ್ಯದ ಮೂವರನ್ನು ಭಯೋತ್ಪಾದಕರು ಗುಂಡಿಟ್ಟು ಅವರನ್ನು ಹತ್ಯೆಗೈದಿದ್ದಾರೆ.

ನರ ಹೇಡಿಗಳಾದ ಕಾಶ್ಮೀರದಲ್ಲಿ ನೆಲೆಸಿರುವ ಮುಸ್ಲಿಂ ಭಯೋತ್ಪಾದಕರನ್ನು ಕಂಡಲ್ಲಿ ಗುಂಡಿಟ್ಟು ಅವರನ್ನು ಹತ್ಯೆ ಮಾಡಬೇಕು. ಹಿಂದೂಗಳೆಂದರೇ ಇತ್ತೀಚಿನ ದಿನಗಳಲ್ಲಿ ಒಂದು ಸಮಾಜಕ್ಕೆ ಕೆಂಗಣ್ಣಿಗೆ ಬೀಳುವ ಕೆಲಸ ಆಗಿದ್ದು, ಅವರ ಹೆಸರು ಕೇಳಿದರೆ ಆ ಸಮಾಜಕ್ಕೆ ತಡೆಯಲಾಗುತ್ತಿಲ್ಲ. ಇವರನ್ನು ಬೆಂಬಲಿಸುವ ನಾಯಕರಿಗೆ ನಾಚಿಕೆಯಾಗಬೇಕು ನಮ್ಮ ದೇಶದಲ್ಲಿ ಯಾವೊಬ್ಬ ಹಿಂದೂಗಳ ಮೇಲೆ ಈ ರೀತಿ ದೌರ್ಜನ್ಯ ದಬ್ಬಾಳಿಕೆ ಹತ್ಯೆಗಳು ನಡೆದರ ಅವರ ದಬ್ಬಾಳಿಕೆ ವಿರುದ್ಧ ಪ್ರತಿಯೊಬ್ಬ ಹಿಂದೂ ಒಗ್ಗಟ್ಟಾಗಬೇಕು.



ನಮ್ಮ ದೇಶದ ಅನ್ನ, ನೀರು, ನೀಡುತ್ತಿರುವ ಭಾರತಾಂಬೆಯ ನಿಜವಾದ ಮಕ್ಕಳಾದರೆ ನಾವು ಪ್ರತಿಯೊಬ್ಬರು ಯಾವುದೇ ಜಾತಿ, ಧರ್ಮ, ಮತ, ಎನ್ನದೆ ಎಲ್ಲರೂ ಒಗ್ಗಟ್ಟಾಗಿ ನಾವು ಹೋರಾಟ ಮಾಡಬೇಕು. ಕೇವಲ ಒಂದು ಪಕ್ಷ ಒಂದು ಜಾತಿ ಒಳ್ಳೆಕೆಗಾಗಿ ಸಂಘಟನೆ ಮಾಡಿಕೊಳ್ಳುವುದಲ್ಲ, ಇಂತಹ ದುಷ್ಕೃತ್ಯ ಎಸೆಗಿರುವ ಪಾಕಿಸ್ತಾನ ನರಹಂತಕರನ್ನು ಇಡೀ ದೇಶದಿಂದ ಹೊರಗಟ್ಟುವ ಕೆಲಸ ಮಾಡಬೇಕು ಎಂದ ಅವರು ಇದು ಕೇವಲ ಸಾಂಕೇತಿಕವಾಗಿ ಬೆಂಕಿ ಹಚ್ಚಿದ್ದೇವೆ. ಮುಂದಿನ ದಿನಗಳಲ್ಲಿ ಇದರ ಬೆಂಕಿ ಕೆನ್ನಾಲಿಗೆ ಎಲ್ಲಿಗೆ ವ್ಯಾಪಿಸುತ್ತಿದೆ ಎಂದು ಕಾದು ನೋಡಿ ಎಂದು ಎಚ್ಚರಿಸಿದರು.

ಭಜರಂಗದಳದ ತಾಲೂಕು ಸಂಚಾಲಕ ನಾಗೇಶ್ ಮಾತನಾಡಿ, ಹಿಂದೂಗಳನ್ನು ಹಾಗು ಒಂದು ಧರ್ಮವನ್ನು ಮಾತ್ರ ಗುರಿಯಾಗಿ ಇಟ್ಟುಕೊಂಡು ದಾಳಿ ಮಾಡುತ್ತಿದ್ದು, ಈ ದಾಳಿಯಲ್ಲಿ ನಮ್ಮ ರಾಜ್ಯದ ಮೂವರು ಹುತಾತ್ಮರಾಗಿದ್ದು, ಒಟ್ಟು 26 ಜನರು ಸಾವಿಗೀಡಾಗಿದ್ದು, ದುರಾದೃಷ್ಟಕರ. ಇಡಿ ರಾಜ್ಯದಲ್ಲಿ ಆ ಭಾಗದ ಹೆಸರೇಳಿಕೊಂಡು ಬದುಕುತ್ತಿರುವ ನಾಯಿಗಳನ್ನು ಕೂಡಲೆ ಹೊಡೆದಟ್ಟಬೇಕು. ಪಾಕಿಸ್ತಾನ ಪರವಾಗಿ ಇಂತಹ ದುಷ್ಕೃತ್ಯಕ್ಕೆ ಸಹಾಯ ಮಾಡುವವರನ್ನು ಗುಂಡಿಕ್ಕಿ ಹತ್ಯೆ ಮಾಡಬೇಕೆಂದು ಆಗ್ರಹಿಸಿದರು.

ರಾಷ್ಟೀಯ ಬಿಜೆಪಿ ಪ್ರಕೋಷ್ಟ ಸದಸ್ಯರಾದ ಜೆ.ಕೆ. ಕುಮಾರ್ ಮಾತನಾಡಿ, ಈ ನರಮೇಧವನ್ನು ಇಡೀ ಮಾನವ ಕುಲ ವಿರೋಧಿಸಬೇಕು. ನಮ್ಮ ಒಳಗಡೆ ಸೇರಿಕೊಂಡು ನಮ್ಮ ಹಿಂದೂಗಳನ್ನೆ ಗುರಿಯಾಗಿ-ಟ್ಟು ಅವರಿಗೆ ಸಹಾಯ ಮಾಡುವ ಕೆಲ ರಾಜಕಾರಣಿಗಳನ್ನು ಮೊದಲು ಅವರನ್ನು ಸುಡಬೇಕು. ಈಗಾಗಲೇ ನಮ್ಮ ಹಿಂದೂಗಳನ್ನೆ ಒಡೆಯುವಂತಹ ಕೆಲಸ ಮಾಡುತ್ತಿದ್ದು, ಅಲ್ಪಸಂಖ್ಯಾತರನ್ನು ಒಲೈಕೆ ಮಾಡಲು ನಮ್ಮನ್ನು ಕಣ್ಣೊರೆಸುವ ಕೆಲಸ ಮಾಡುವ ಮೂಲಕ ಜಾತಿ ಜಾತಿಗಳ ನಡುವೆ ವೈರತ್ವವನ್ನು ಈ ರಾಜ್ಯ ಸರ್ಕಾರ ಮಾಡುತ್ತಿದೆ. ಮುಂದೆ ನಾವೆಲ್ಲರೂ ಒಗ್ಗಟ್ಟಾಗಿ ಈ ರಾಷ್ಟ್ರವನ್ನು ನಿರ್ಮಾಣ ಮಾಡಲು ಪ್ರತಿಯೊಬ್ಬರು ಕಂಕಣ ಬದ್ಧರಾಗಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಆರ್‌ಎಸ್ ಎಸ್ ಪ್ರಮುಖ್ ಪ್ರಸನ್ನ, ಡಾ.ನಾರಾಯಣಸ್ವಾಮಿ ಮೋಹನ, ಸುಮಂತ್, ಮಂಜು, ಭರತ್, ತೀರ್ಥಂಕರ್, ದೀಪು, ಸಂಜು, ವೇದಬ್ರಹ್ಮಮಂಜುನಾಥ್, ವಿನಯ್, ಧನಪಾಲ್, ಮಹೇಶ್, ಸಂತೋಷ್, ಗಜೇಂದ್ರ ಸೇರಿದಂತೆ ಇತರರು ಹಾಜರಿದ್ದರು.

# ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷಾ ಕಾರ್ಯ ಯಶಸ್ವಿಯಾಗಿ ನಿರ್ವಹಿಸಿ : ಕೀರ್ತನಾ

**ಚಿಕ್ಕಮಗಳೂರು:** ಪರಿಶಿಷ್ಟ ಜಾತಿ ಒಳ ಮೀಸಲಾತಿಗಾಗಿ ಸಮೀಕ್ಷೆ ನಡೆಸುವ ಬಗ್ಗೆ ಗೌರವಾನ್ವಿತ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನದಾಸ್ ಏಕ ಸದಸ್ಯ ವಿಚಾರಣಾ ಆಯೋಗದಿಂದ ಪರಿಶಿಷ್ಟ ಜಾತಿಗಳ ವಿವಿಧ ಅಂಶಗಳ ಬಗ್ಗೆ ಸಮೀಕ್ಷೆ ನಡೆಸಲು ಈಗಾಗಲೇ ರಚಿಸಿರುವ ಜಿಲ್ಲಾ ಮಟ್ಟದ ಸಮನ್ವಯ ಸಮಿತಿಯು ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷಾ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸುವಂತೆ ಅಧಿಕಾರಿಗಳಿಗೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಹೆಚ್. ಎಸ್.ಕೀರ್ತನಾ ನಿರ್ದೇಶನ ನೀಡಿದರು.

ಏಪ್ರಿಲ್ 22 ರಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪರಿಶಿಷ್ಟ ಜಾತಿ ಒಳಮೀಸಲಾತಿ ಕುರಿತಂತೆ ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನದಾಸ್ ಏಕಸದಸ್ಯ ವಿಚಾರಣಾ



ಆಯೋಗದಿಂದ ಪರಿಶಿಷ್ಟ ಜಾತಿಗಳ ವಿವಿಧ ಅಂಶಗಳ ಬಗ್ಗೆ ಸಮೀಕ್ಷೆ ನಡೆಸುವ ಸಂಬಂಧ ನಡೆದ ಜಿಲ್ಲಾಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲ್ಲೂಕು ಮಟ್ಟದಲ್ಲಿ ಉಪವಿಭಾಗಾಧಿಕಾರಿಗಳ ನೇತೃತ್ವದಲ್ಲಿ ತಾಲ್ಲೂಕು ಮಟ್ಟದ ಸಮನ್ವಯ ಸಮಿತಿಯನ್ನು ರಚಿಸಲಾಗಿದ್ದು, ತಾಲ್ಲೂಕಿನ ತಹಸೀಲ್ದಾರ್, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ತಾಲ್ಲೂಕು ಮಟ್ಟದ ಇತರ ಅಧಿಕಾರಿಗಳು. ಸದಸ್ಯರಾಗಿರುತ್ತಾರೆ. ಸಮೀಕ್ಷೆಯ ಮೇಲ್ವಿಚಾರಣೆಗಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಮುಖ್ಯ ಶಿಕ್ಷಕರನ್ನು ನಿಯೋಜಿಸಲು ಉಪನಿರ್ದೇಶಕರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರು ಕ್ರಮವಹಿಸಲು ತಿಳಿಸಲಾಯಿತು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ತಾಲ್ಲೂಕು ನೋಡಲ್ ಅಧಿಕಾರಿಗಳು ಸಮೀಕ್ಷೆಯ ಸಂಪೂರ್ಣ ಮೇಲುಸ್ತುವಾರಿ ವಹಿಸಲು ತಿಳಿಸಿ, ಕುಟುಂಬ ದತ್ತಾಂಶದ ಪ್ರಕಾರ ಗ್ರಾಮ ಹಾಗೂ ನಗರಗಳಲ್ಲಿನ ಕುಟುಂಬವಾರು ಸಂಖ್ಯೆಗಳನ್ನು Breakup ಮಾಡಿ, ತಾಲ್ಲೂಕುಗಳಿಗೆ ಗ್ರಾಮ ಪಂಚಾಯಿತಿವಾರು/ಗ್ರಾಮವಾರು/ವಾರ್ಡ್‌ವಾರು Password/Login ಮೂಲಕ ಮಾಹಿತಿ ಒದಗಿಸಲಾಗುವುದು. ಅದರಂತೆ HRMS ನಿಂದ ಶಿಕ್ಷಕರನ್ನು Mappin ಮಾಡಿಕೊಂಡು ಸಮೀಕ್ಷಾ ಕಾರ್ಯಕೈಗೊಳ್ಳಲು ತಿಳಿಸಲಾಯಿತು.

ಚಿಕ್ಕಮಗಳೂರು ಜಿಲ್ಲೆಯಲ್ಲಿ 2.53.651 ಪರಿಶಿಷ್ಟ ಜಾತಿಯ ಜನಸಂಖ್ಯೆ ಇದ್ದು, ಇವರ ಸಮೀಕ್ಷೆ ನಡೆಸಲು ಸುಮಾರು 600 ರಿಂದ 700 ಶಿಕ್ಷಕರ ಅವಶ್ಯಕತೆ ಇದ್ದು, ಸದರಿ ಶಿಕ್ಷಕರಿಗೆ ಸಹಾಯಕರಾಗಿ ಅಲ್ಲಿನ ಅಂಗನವಾಡಿ ಕಾರ್ಯಕರ್ತೆಯರನ್ನು ನಿಯೋಜಿಸುವ ಕುರಿತು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆರವರಿಗೆ ತಿಳಿಸಿ, ಸರ್ಕಾರದಿಂದ ಕಾಲಕಾಲಕ್ಕೆ ನೀಡುವ ನಿರ್ದೇಶನ ಹಾಗೂ ಮಾರ್ಗಸೂಚಿಗಳನ್ವಯ ಎಲ್ಲಾ ಇಲಾಖೆಗಳು ಸಮನ್ವಯದಿಂದ ಕರ್ತವ್ಯ ನಿರ್ವಹಿಸಿ ಸಮೀಕ್ಷೆ ಕಾರ್ಯ ಯಶಸ್ವಿ ಆಗುವಂತೆ ಕ್ರಮವಹಿಸಲು ತಿಳಿಸಲಾಯಿತು.

# ಉಸ್ತುವಾರಿ ಕಾರ್ಯದರ್ಶಿಗಳ ಪ್ರವಾಸ

**ಚಿಕ್ಕಮಗಳೂರು ಏ.25:** ಮಾನ್ಯ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಶ್ರೀ ರಾಜೇಂದರ್ ಕುಮಾರ್ ಕಟಾರಿಯಾ ಅವರು ಏ.28 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ಏ.28 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಪ್ರವಾಸಿ ಮಂದಿರಕ್ಕೆ ಆಗಮಿಸುವರು. ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲೆಯ ಸಮಗ್ರ ಅಭಿವೃದ್ಧಿ ಪರಿಶೀಲನಾ ಸಭೆ ನಡೆಸುವರು. ನಂತರ ಮಧ್ಯಾಹ್ನ 2.30 ಗಂಟೆಗೆ ಕ್ಷೇತ್ರೀಯ ಪರಿಶೀಲನೆ ನಡೆಸಿ ಸಂಜೆ 6 ಗಂಟೆಗೆ ಚಿಕ್ಕಮಗಳೂರಿನಿಂದ ಬೆಂಗಳೂರಿಗೆ ತೆರಳುವರು ಎಂದು ಮಾನ್ಯ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳಾದ ಶ್ರೀಶ ವಿ.ತಂತ್ರಿ ಪ್ರಕಟಣೆಯಲ್ಲಿ ತಿಳಿಸಿದ್ಧಾರೆ.

# ವಾಯುಸೇನೆ ಅಗ್ನಿವೀರ್ ಹುದ್ದೆಗಳ ನೇಮಕಾತಿ ಪರೀಕ್ಷೆ

**ಚಿಕ್ಕಮಗಳೂರು, ಏ.25:** ಭಾರತೀಯ ವಾಯುಸೇನೆಯಲ್ಲಿ ಅಗ್ನಿವೀರ್ ವಾಯು (ಮ್ಯೂಸೀಸಿಯನ್) ಹುದ್ದೆಗಳ ನೇಮಕಾತಿಗಾಗಿ ಪರೀಕ್ಷೆಯನ್ನು ನಡೆಸುತ್ತಿದ್ದು, ಅವಿವಾಹಿತ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಪರೀಕ್ಷೆಯ ನಿಖರ ದಿನಾಂಕವನ್ನು ನಂತರ ವೆಬ್‌ಸೈಟ್ ಮೂಲಕ ತಿಳಿಸಲಾಗುವುದು. ಆಸಕ್ತ ಅರ್ಹ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಮೇ 11ರ ಬೆಳಿಗ್ಗೆ 11 ಗಂಟೆಯೊಳಗೆ ಅರ್ಜಿ ಸಲ್ಲಿಸಬಹುದು. ದಿನಾಂಕ 01.01.2005 ರಿಂದ 01.07.2008ರೊಳಗೆ ಜನಿಸಿರುವ ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಸಂಗೀತ ಅನುಭವ ಪ್ರಮಾಣ ಪತ್ರ ಹೊಂದಿರಬೇಕು. ಹೆಚ್ಚಿನ ಅರ್ಹತೆ ವಿವರವನ್ನು ತಿಳಿಯಲು ವೆಬ್‌ಸೈಟ್ (ತಿತಿತಿ.ಚಿರ-ಟಿಡಿಚಿಣುತಚಿಥಿಣ.ಛಿಜಚಿಛಿ.ಟಿ) ಅನ್ನು ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 08262-295513 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

# ಅಜ್ಜಂಪುರ ರಸ್ತೆಗೆ ಅಲಂಕಾರಿಕ ವಿದ್ಯುತ್ ದೀಪ ಅಳವಡಿಕೆಗೆ ಶಾಸಕ ಆನಂದ್ ಚಾಲನೆ

**ಬೀರೂರು:** ಪಟ್ಟಣವು ದಿನದಿಂದ ದಿನಕ್ಕೆ ಬೆಳೆಯುತ್ತಿದ್ದು, ಜನಸಂಖ್ಯೆಯು ಸಹ ಹೆಚ್ಚಾಗುತ್ತಿದೆ, ಅದರಂತೆ ವಾಹನ ದಟ್ಟಣೆ-ಯು ಹೆಚ್ಚುತ್ತಿದ್ದು, ಅಪಘಾತಗಳನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಲಿಂಗದಹಳ್ಳಿ ರಸ್ತೆಗೆ ದ್ವಿಪಥ ರಸ್ತೆ ಮಾಡಿ ರಸ್ತೆ ಅಗಲೀಕರಣ ಮಾಡಲಾಗುವುದು ಜೊತೆಗೆ ಈ ರಸ್ತೆಯ ಎರಡು ಬದಿಗಳಲ್ಲಿ ಬಾಕ್ಸ್ ಚರಂಡಿಯನ್ನು ಸಹ ಮಾಡಲಾಗುವುದು ಎಂದು ಶಾಸಕ ಕೆ.ಎಸ್.ಆನಂದ್ ಹೇಳಿದರು.

ಅವರು ಪಟ್ಟಣದ ಲಿಂಗದಹಳ್ಳಿ ರಸ್ತೆಯ ಎಸ್.ಎಂ.ಕೃಷ್ಣ ಸಮುದಾಯ ಭವನದ ಮುಂಭಾಗ 4 ಕೋಟಿ ರೂ ವೆಚ್ಚದ ರಸ್ತೆ ಅಗಲೀಕರಣ ಹಾಗೂ ಅಲಂಕಾರಿಕ ವಿದ್ಯುತ್ ಕಂಬಗಳ ಅಳವಡಿಕೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಇದರ ಜೊತೆ ಮಹಾತ್ಮಗಾಂಧಿ ವೃತ್ತದಿಂದ ಶಿವಾಜಿ ಪುತ್ಥಳಿವರೆಗೂ ಹಾಗೂ ಲಿಂಗದಹಳ್ಳಿ ರಸ್ತೆಯ ರೈಲ್ವೆ ಅಂಡರ್ ಬ್ರಿಡ್ಜ್‌ನಿಂದ ಮಹಾತ್ಮಗಾಂಧಿ ಉದ್ಯಾನದವರೆಗೂ ಎರಡು ಕಡೆ ವಿದ್ಯುತ್ ಅಲಂಕಾರಿಕ ಕಂಬಗಳನ್ನು ಅಳವಡಿಸಲಾಗುವುದು. ಇದರಿಂದಾಗಿ ಪ್ರವಾಸಿ ತಾಣಗಳಾದ ಕೆಮ್ಮಣ್ಣುಗುಂಡಿ-ಕಲ್ಲತ್ತಿಗಿರಿ ಕಡೆಗೆ ತೆರಳುವ ಪ್ರವಾಸಿಗರಿಗೆ



ಅನುಕೂಲವಾಗುವುದರ ಜೊತೆ ಪಟ್ಟಣವು ಸುಂದರವಾಗಿ ಕಾಣುತ್ತದೆ ಎಂದರು.

ಪಟ್ಟಣದಲ್ಲಿ ಹಾದುಹೋಗುವ ಬಿ.ಹೆಚ್. ರಸ್ತೆ ಅಗಲೀಕರಣಕ್ಕೆ ಸುಮಾರು 27 ಕೋಟಿ ರೂ ಅಂದಾಜು ಆಗಲಿದ್ದು, ಆ ರಸ್ತೆಯನ್ನು ಸಹ ಮುಂದಿನ ದಿನಗಳಲ್ಲಿ ದ್ವಿಪಥ ರಸ್ತೆಯನ್ನಾಗಿ ಅಭಿವೃದ್ಧಿ ಪಡಿಸಲಾಗುವುದು. ಉಳಿದಂತೆ ಪಟ್ಟಣದ ಎಲ್ಲಾ ವಾರ್ಡ್‌ಗಳಿಗೂ ಮುಂಬರುವ ಸಾಲಿನಲ್ಲಿ ನಗರೋತ್ಥಾನ ಯೋಜನೆಯಡಿ ಇರುವ ಸಮಸ್ಯೆಗಳಿಗೆ ಹಣ ಬಿಡುಗಡೆ ಮಾಡಿಸಿ ಆ ಕಾಮಗಾರಿಗಳಿಗು ಒತ್ತು ನೀಡಲಾಗುವುದು ಎಂದರು.

ಪುರಸಭೆ ಅಧ್ಯಕ್ಷೆ ವನಿತಮಧು ಮಾತನಾಡಿ, ಬೀರೂರು ಪಟ್ಟಣವನ್ನು ಶಾಸಕರು ಪರಿಣಿಸಿ ಅಭಿವೃದ್ಧಿ ಪಡಿಸುತ್ತಿರುವುದು ಶ್ಲಾಘನೀಯವಾದದ್ದು, ಭಗವತ್ ನಗರ ಮತ್ತು ಪುರಿಭಟ್ಟಿ ಬಡಾವಣೆಗಳಿಗೆ ರಸ್ತೆಯೇ ಇಲ್ಲದೆ ಜನ ಪರದಾಡುತ್ತಿದ್ದಾರೆ. ಈ ಸಮಸ್ಯೆ ಬಗ್ಗೆ ಶಾಸಕರು ಗಮನಹರಸಿ ಶೀಘ್ರ ಅವರ ಅನುದಾನದಲ್ಲಿ ರಸ್ತೆ ನಿರ್ಮಾಣ ಮಾಡಿಕೊಡುವಂತೆ ಮನವಿ ಮಾಡಿದ ಅವರು, ಮಾರ್ಗದ ಕ್ಯಾಂಪ್‌ನಲ್ಲಿ ಸುಮಾರು ಐದಾರು ವಾರ್ಡಗಳಿದ್ದು, ಜನ ಪಟ್ಟಣದ ಒಳಭಾಗಕ್ಕೆ ಬರಲು ಸುತ್ತಿಕೊಂಡು ಬರುವ ಪರಿಸ್ಥಿತಿ ಇದೆ. ಇತ್ತೀಚೆಗೆ ರೈಲ್ವೆ ಖಾತೆ ಸಚಿವ ವಿ.ಸೋಮಣ್ಣ ಬಂದಾಗ, ಮಾರ್ಕೆಟ್ ರಸ್ತೆಯಿಂದ ಭೂತನಗುಡಿ ಬೀದಿವರೆಗೂ ರೈಲ್ವೆ ಓವರ್ ಬ್ರಿಡ್ಜ್ ಮಾಡಿಕೊಡುವಂತೆ ಪುರಸಭೆ ಮತ್ತು ನಾಗರೀಕರು ಮನವಿ ಮಾಡಿದ್ದರು, ಅದು ಸದ್ಯ ಯಾವ ಸ್ಥಿತಿಯಲ್ಲಿದೆ ಎಂದು ಶಾಸಕರು ಗಮನ ಹರಸಿ ಸಚಿವರೊಂದಿಗೆ ಚರ್ಚಿಸಿ ಶೀಘ್ರ ರೈಲ್ವೆ ಓವರ್ ಬ್ರಿಡ್ಜ್ ಕಾಮಗಾರಿಗೆ ಚಾಲನೆ ನೀಡುವಂತೆ ಮನವಿ ಮಾಡಿದರು.

ಇದಕ್ಕೆ ಉತ್ತರಿಸಿದ ಶಾಸಕರು, ರೈಲ್ವೆ ಓವರ್ ಬ್ರಿಡ್ಜ್ ಕಾಮಗಾರಿ ಬಗ್ಗೆ ಸಚಿವ ಸೋಮಣ್ಣವರು ಈ ಕಾಮಗಾರಿ ಮಾಡುವಂತೆ ಪಟ್ಟಿಯಲ್ಲಿ ಸೇರಿಸಿದ್ದಾರೆಂಬ ಮಾಹಿತಿ ಇದೆ. ಮತ್ತೊಮ್ಮೆ ಚರ್ಚಿಸಿ ಬ್ರಿಡ್ಜ್ ಮಾಡಿಸಲಾಗುವುದು. ಉಳಿದಂತೆ ಭಗವತ್ ನಗರದ ರಸ್ತೆ ಸಮಸ್ಯೆ ಬಗ್ಗೆ ಎಲ್ಲಾ ಕಡೆ ಕೇಳಿ ಬರುತ್ತಿದ್ದು, ಶೀಘ್ರ ನನ್ನ ಅನುದಾನವನ್ನೆ ಹಾಕಿ ರಸ್ತೆ ಕಾಮಗಾರಿ ಮಾಡಿಸಿ ಅಲ್ಲಿನ ಜನರ ಸಮಸ್ಯೆಗೆ ಮುಕ್ತಿ ಹಾಕುತ್ತೇನೆ ಎಂದು ಬರವಸೆ ನೀಡಿದ ಅವರು, ಗುತ್ತಿಗೆದಾರರು ಕಾಮಗಾರಿಗಳನ್ನು ಗುಣಮಟ್ಟದಿಂದ ಮಾಡಿ ಕಾಮಗಾರಿಯ ಗಾಂಭೀರ್ಯತೆ ಉಳಿಸಬೇಕು ಇದಕ್ಕೆ ಪುರಸಭೆ ಅಧ್ಯಕ್ಷರು ಮತ್ತು ಸದಸ್ಯರು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ಪುರಸಭೆ ಸದಸ್ಯೆ ಜ್ಯೋತಿ ಸಂತೋಷ್‌ಕುಮಾರ್, ಜಿಮ್‌ರಾಜು ಮಾತನಾಡಿದರು. ಪುರಸಭೆ ಉಪಾಧ್ಯಕ್ಷ ನಾಗರಾಜ್, ಸದಸ್ಯರಾದ ಮಾನಿಕ್‌ಭಾಷ, ಬಿ.ಕೆ.ಶಶಿಧರ್, ಎಲೆರವಿಕುಮಾರ್, ಲೋಕೇಶಪ್ಪ, ಆಶ್ರಯಕಮಿಟಿ ಸದಸ್ಯರಾದ ಬಿ.ಟಿ.ಚಂದ್ರಶೇಖರ್, ಮುಬಾರಕ್, ಪಿಡಬ್ಲೂಡಿ ಎಇಇ ವೈ.ಆರ್.ಬಸವರಾಜ್, ಎಇ ಶಿವಮೂರ್ತಿ, ಪುರಸಭೆ ಮುಖ್ಯಾಧಿಕಾರಿ ಪ್ರಕಾಶ್, ಆರೋಗ್ಯ ನಿರೀಕ್ಷಕ ಲಕ್ಷ್ಮಣ್, ಗುತ್ತಿಗೆದಾರ ವಿನಯ್ ಸೇರಿದಂತೆ ಸಾರ್ವಜನಿಕರು ಇದ್ದರು.

# ಧಾರವಾಡದಲ್ಲೂ ಜನಿವಾರ ವಿವಾದ: ಜನಿವಾರ ಕತ್ತರಿಸಿ ಕೈಗೆ ಕೊಟ್ಟ ಸಿಬ್ಬಂದಿ, ಕ್ರಮಕ್ಕೆ ಆಗ್ರಹ

**ಧಾರವಾಡ:** ಶಿವಮೊಗ್ಗ, ಬೀದರ್ ಬಳಿಕ ಇದೀಗ ಧಾರವಾಡದಲ್ಲಿಯೂ ಜನಿವಾರ ಕತ್ತರಿಸಿ ಸಿಇಟಿ ಪರೀಕ್ಷೆಗೆ ಅವಕಾಶ ಕೊಟ್ಟಿರುವ ಘಟನೆಯೊಂದು ತಡವಾಗಿ ಬೆಳಕಿಗೆ ಬಂದಿದೆ. ಧಾರವಾಡ ಜಿಲ್ಲೆಯ ಹುರಕಡ್ಲಿ ಕಾಲೇಜಿನ ಪರೀಕ್ಷಾ ಕೇಂದ್ರದಲ್ಲಿ ಈ ಘಟನೆ ನಡೆದಿದೆ.

ಧಾರವಾಡ ನಗರದ ಜೆಎಸ್‌ಎಸ್ (ಎಖಖ) ಕಾಲೇಜಿನ ವಿದ್ಯಾರ್ಥಿ ನಂದನ್ ಏರಿ ಸಿಇಟಿ ಪರೀಕ್ಷೆ ಬರೆಯಲು ತೆರಳಿದ್ದು, ಈ ವೇಳೆ ವಿದ್ಯಾರ್ಥಿಗಳ ತಪಾಸಣೆ ಮಾಡುವಾಗ ಪರೀಕ್ಷಾ ಕೇಂದ್ರದ ಸಿಬ್ಬಂದಿಯೊಬ್ಬರು ನಂದನ್ ಎಂಬ ಅಭ್ಯರ್ಥಿ ಹಾಕಿಕೊಂಡಿದ್ದ ಜನಿವಾರವನ್ನು ಗಮನಿಸಿದ್ದಾರೆ.

ಜನಿವಾರ ಹಾಕಿಕೊಂಡು ಪರೀಕ್ಷಾ ಕೇಂದ್ರದೊಳಗೆ ಹೋಗುವಂತಿಲ್ಲ ಎಂದು ತಡೆದಿದ್ದಾರೆ. ಈ ವೇಳೆ ವಿದ್ಯಾರ್ಥಿ ನಾನು ಬ್ಯಾಗಿನೊಳಗೆ ಇಟ್ಟುಕೊಳ್ಳುತ್ತೇನೆ




ಎಂದು ಹೇಳಿದ್ದಾನೆ. ಆದರೆ, ಅದಕ್ಕೂ ಅವಕಾಶ ನೀಡದೇ ಸಮಯವಿಲ್ಲ ಎಂದು ಜನಿವಾರವನ್ನು ಕತ್ತರಿಸಿದ್ದಾರೆಂಬ ಆರೋಪ ಕೇಳಿ ಬಂದಿದೆ.

ಕಳೆದೆರಡು ದಿನಗಳಿಂದ ಮಾಧ್ಯಮಗಳಲ್ಲಿ ಬರುತ್ತಿದ್ದ ಶಿವಮೊಗ್ಗ, ಬೀದರ್ ಜನಿವಾರದ ಸುದ್ದಿಗಳನ್ನು ಗಮನಿಸಿದ್ದ ಹುಡುಗ ತನಗಾಗಿದ್ದರ ಕುರಿತು ತನ್ನ ತಂದೆಗೆ ತಿಳಿಸಿದ್ದಾನೆ.

ಇದನ್ನು ತಿಳಿದ ತಂದೆ ಆಕ್ರೋಶಗೊಂಡಿದ್ದು, ಇದೇ ಕಾರಣದಿಂದ ಮಗನಿಗೆ ಸರಿಯಾಗಿ ಪರೀಕ್ಷೆ ಬರೆಯಲು ಆಗಿಲ್ಲ ಎಂದು ಕಿಡಿಕಾರಿದ್ದಾರೆ.

ಘಟನೆ ಸಬಂಧ ಪ್ರತಿಕ್ರಿಯೆ ನೀಡಿರುವ ಸಚಿವ ಸಂತೋಷ್ ಲಾಡ್, ಇಂತಹ ಘಟನೆಗಳ ಬಗ್ಗೆ ಲಿಖಿತ ದೂರುಗಳು ಬಂದರೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ಇಂತಹ ಕೃತ್ಯಗಳಲ್ಲಿ ಭಾಗಿಯಾಗಿರುವವರು ಸರ್ಕಾರಿ ಅಧಿಕಾರಿಗಳೋ ಅಥವಾ ಖಾಸಗಿ ಉದ್ಯೋಗಿಗಳೋ ಎಂಬುದು ಸ್ಪಷ್ಟವಾಗಿಲ್ಲ. ಈ ಸಮಸ್ಯೆಯನ್ನು ಬಗೆಹರಿಸಲಾಗುವುದು ಮತ್ತು ತಪ್ಪಿತಸ್ಥರೆಂದು ಕಂಡುಬಂದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

# ಸುಪ್ರೀಂ ಕೋರ್ಟ್ ಹಿರಿಯ ವಕೀಲ ಶರತ್ ಜವಲಿ ನಿಧನ: ಸಿಎಂ ಸಿದ್ದರಾಮಯ್ಯ ಸೇರಿ ಹಲವರ ಸಂತಾಪ



**ಬೆಂಗಳೂರು\ನವದೆಹಲಿ:** ಭಾರತದ ಕಾನೂನು ಸಮುದಾಯ ಇಂದು ಶೋಕಸಾಗರದಲ್ಲಿ ಮುಳುಗಿದೆ. ಕಾರಣ, ಸುಪ್ರೀಂ ಕೋರ್ಟ್‌ನ ಹಿರಿಯ ವಕೀಲ ಮತ್ತು ಐತಿಹಾಸಿಕ ಕಾವೇರಿ, ಕೃಷ್ಣ ಮತ್ತು ಮಹಾದಾಯಿ ನದಿ ನೀರಿನ ವಿವಾದಗಳ ಕಾನೂನು ತಂಡದಲ್ಲಿ ಕರ್ನಾಟಕದ ಮುಖವಾಗಿದ್ದ ಶರತ್ ಜವಲಿ ನಿಧನರಾಗಿದ್ದಾರೆ.

ಅತ್ಯುನ್ನತ ಕಾನೂನು ಕುಶಾಗ್ರಮತಿ ಹೊಂದಿದ್ದ ಜವಲಿ ಅವರ ನಿರ್ಗಮನವು ಭಾರತೀಯ ನ್ಯಾಯಶಾಸ್ತ್ರದಲ್ಲಿ ಒಂದು ಯುಗದ ಅಂತ್ಯವನ್ನು ಸೂಚಿಸುತ್ತದೆ. ಖ್ಯಾತ ವಕೀಲರಾದ ಫಾಲಿ ಎಸ್ ನಾರಿಮನ್ ಮತ್ತು ಅನಿಲ್ ದಿವಾನ್ ನಂತರ ನಿಧನರಾದ ಕರ್ನಾಟಕದ ಕಾನೂನು ತಂಡದಲ್ಲಿ ಜವಲಿ ಮೂರನೆಯವರಾಗಿದ್ದಾರೆ.

1960 ರ ದಶಕದ ಅಂತ್ಯದಿಂದ ಕರ್ನಾಟಕ ರಾಜ್ಯವನ್ನು ಪ್ರತಿನಿಧಿಸುತ್ತಿದ್ದ ಜವಲಿ, ಮೊದಲ ಕೃಷ್ಣ ನದಿ ನೀರು ವಿವಾದ ನ್ಯಾಯಮಂಡಳಿಯ ಸಮಯದಲ್ಲಿ ರಾಷ್ಟ್ರಮಟ್ಟದಲ್ಲಿ ಗಮನ ಸೆಳೆದರು. ಐದು ದಶಕಗಳಿಗೂ ಹೆಚ್ಚು ಕಾಲ, ಅವರು ದೇಶದ ಅತ್ಯಂತ ಹೆಚ್ಚಿನ ಮಟ್ಟದ ನೀರಿಗೆ ಸಂಬಂಧಪಟ್ಟ ಕೋರ್ಟ್ ವಾಜ್ಯಗಳಲ್ಲಿ ಕರ್ನಾಟಕದ ಅಚಲ ಧ್ವನಿಯಾಗಿದ್ದರು. ನ್ಯಾಯಾಲಯದಲ್ಲಿ ಶಾಂತವಾಗಿದ್ದರೂ ಅವರ ವಕಾಲತ್ತು ಅದ್ವಿತೀಯವಾಗಿತ್ತು.

ಪರಂಪರೆ ಮತ್ತು ಪ್ರತಿಭೆಯನ್ನು ಹೊಂದಿದ್ದ ಜವಲಿ, ಅಜ್ಮೀರ್‌ನ ಮೇಯೊ ಕಾಲೇಜಿನಲ್ಲಿ ಆರಂಭಿಕ ಶಿಕ್ಷಣವನ್ನು ಪಡೆದರು, ನಂತರ ಭಾರತದ ಮಾಜಿ ಅಟಾರ್ನಿ ಜನರಲ್ ಎಸ್.ವಿ. ಗುಪ್ತೆ ಅವರ ಅಡಿಯಲ್ಲಿ ವಿಶಿಷ್ಟ ಕಾನೂನು ಶಿಷ್ಯವೃತ್ತಿಯನ್ನು ಪಡೆದರು. ಇತ್ತೀಚೆಗೆ, ಕೇಂಬ್ರಿಡ್ಜ್‌ನ ಸಿಡ್ನಿ ಸಸೆಕ್ಸ್ ಕಾಲೇಜಿನ ಫೆಲೋ ಆಗಿ ನೇಮಕಗೊಂಡ ಅಪರೂಪದ ಗೌರವವನ್ನು ಅವರಿಗೆ ನೀಡಲಾಯಿತು,

ಅವರನ್ನು ಮೂಲತಃ ವಕೀಲರಾಗಿರುವ ಸಿಎಂ ಸಿದ್ದರಾಮಯ್ಯ ನೆನಪಿಸಿಕೊಂಡಿದ್ದಾರೆ. ನನ್ನ ಹಿರಿಯ ವಕೀಲ ಚಿಕ್ಕಬೋರಾಯ ಅವರೊಂದಿಗೆ ಕೋರ್ಟ್‌ನಲ್ಲಿ ವಾದ ಮಾಡುತ್ತಿದ್ದ ರೀತಿ, ಅವರ ಅದ್ಭುತ ಕುಶಾಗ್ರಮತಿ, ಬುದ್ಧಿವಂತಿಕೆ, ವಕಾಲತ್ತಿನ ರೀತಿ ಕಂಡು ದಿಗ್ಭ್ರಮೆಗೊಂಡಿದ್ದೆ ಎಂದಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಂತಾಪ ಸೂಚಿಸಿ, ಸುಪ್ರೀಂ ಕೋರ್ಟ್‌ನ ಹಿರಿಯ ವಕೀಲ ಶರತ್ ಜವಲಿ ಅವರ ನಿಧನದಿಂದ ತೀವ್ರ ದುಃಖವಾಗಿದೆ. ಅತ್ಯುನ್ನತ ಕಾನೂನು ಮನಸ್ಸು ಹೊಂದಿದ್ದ ಅವರು 1960 ರ ದಶಕದಿಂದಲೂ ಕಾವೇರಿ, ಕೃಷ್ಣಾ ಮತ್ತು ಮಹದಾಯಿ ನದಿ ನೀರಿನ ವಿವಾದಗಳಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿದ್ದಾರೆ. ನಾನು ಮೈಸೂರಿನಲ್ಲಿ ಕಿರಿಯ ವಯಸ್ಸಿನಲ್ಲಿದ್ದಾಗ ಅವರ ವಕಾಲತ್ತು ನನ್ನ ಮೇಲೆ ಶಾಶ್ವತವಾದ ಪ್ರಭಾವ ಬೀರಿತು. ಅವರ ನಮ್ರತೆ ಅವರ ಸ್ಥಾನಮಾನಕ್ಕೆ ಹೊಂದಿಕೆಯಾಯಿತು. ಅವರನ್ನು ಕಳೆದುಕೊಂಡಿರುವುದು ತುಂಬಲಾರದ ನಷ್ಟ ಎಂದಿದ್ದಾರೆ.

# ಶ್ರೀ ಮುರುಘಾಮಠದಲ್ಲಿ ಏ.28 ರಿಂದ 30ರವರೆಗೆ ಬಸವೇಶ್ವರರ ಜಯಂತಿ ಅಂಗವಾಗಿ ವಿವಿಧ ಸ್ಪರ್ಧೆಗಳ ಆಯೋಜನೆ

**ಚಿತ್ರದುರ್ಗ :** ಏಪ್ರಿಲ್ 28, 29 ಹಾಗೂ 30ರಂದು ನಗರದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದಲ್ಲಿ ಬಸವೇಶ್ವರರ ಜಯಂತಿ ಅಂಗವಾಗಿ ವಿಶೇಷ ಕಾರ್ಯಕ್ರಮಗಳು ಹಾಗೂ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಏ. 28ರಂದು ಸೋಮವಾರ ಬೆಳಗ್ಗೆ 10ಗಂಟೆಗೆ ಶ್ರೀಮಠದ ಅನುಭವ ಮಂಟಪದಲ್ಲಿ ವಚನ ಕಂಠಪಾಠ ಸ್ಪರ್ಧೆ, ಅದೇ ಸಮಯದಲ್ಲಿ ಶ್ರೀಮಠದ ಅಲ್ಲಮಪ್ರಭು ಸಂಶೋಧನಾ ಕೇಂದ್ರದಲ್ಲಿ ಬಸವಾದಿ ಶಿವಶರಣರ ವೇಷಭೂಷಣ ಸ್ಪರ್ಧೆ ಹಾಗೂ ಶ್ರೀಮಠದ ಆವರಣದಲ್ಲಿ ರಂಗೋಲಿ ಸ್ಪರ್ಧೆ (ಇದರಲ್ಲಿ ಬಸವಾದಿ ಶಿವಶರಣರ ಚಿತ್ರಗಳನ್ನೂ ಬಿಡಿಸಬಹುದಾಗಿದೆ) ನಡೆಯಲಿದೆ.

29ರಂದು ಮಂಗಳವಾರ ಬೆಳಗ್ಗೆ 10 ಗಂಟೆಗೆ ಅನುಭವ ಮಂಟಪದಲ್ಲಿ 18ವರ್ಷ ಮೇಲ್ಪಟ್ಟವರಿಗೆ 1ಗಂಟೆ ಕಾಲಾವಧಿಯಲ್ಲಿ "ಸರ್ವಶರಣರ ದೃಷ್ಟಿಯಲ್ಲಿ ಬಸವಣ್ಣ"ನವರು ವಿಷಯ ಕುರಿತು ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ. ಪಿಯುಸಿ, ಪದವಿ ಹಾಗೂ ಪದವೀಧರರಿಗೆ 7 ನಿಮಿಷಗಳ ಕಾಲಾವಧಿಯಲ್ಲಿ "ಸಾಂಸ್ಕೃತಿಕ ನಾಯಕ ಬಸವಣ್ಣ" ವಿಷಯ ಕುರಿತಾಗಿ ಭಾಷಣ ಸ್ಪರ್ಧೆಯನ್ನು ಅಲ್ಲಮಪ್ರಭು ಸಂಶೋಧನಾ ಕೇಂದ್ರದಲ್ಲಿ ಏರ್ಪಡಿಸಲಾಗಿದೆ.

ಆಯಾ ವಿಭಾಗದಲ್ಲಿ ವಿಜೇತರಾದವರಿಗೆ ಪ್ರಥಮ ರೂ. 5000, ದ್ವಿತೀಯ ರೂ. 3000, ತೃತೀಯ ರೂ. 2000 ನಗದು ಬಹುಮಾನ ಮತ್ತು ಸ್ಪರ್ಧೆಗಳಲ್ಲಿ ಭಾಗವಹಿಸಿದ ಎಲ್ಲರಿಗೂ ಪ್ರಶಸ್ತಿ ಪತ್ರ ವಿತರಿಸಲಾಗುವುದು. ತೀರ್ಪುಗಾರರ ನಿರ್ಣಯವೇ ಅಂತಿಮವಾಗಿರುತ್ತದೆ.

ಸ್ಪರ್ಧೆಗಳಲ್ಲಿ ಭಾಗವಹಿಸುವವರು ತಮ್ಮ ಹೆಸರು ನೋಂದಾಯಿಸಿಕೊಳ್ಳಲು ದಿನಾಂಕ; 24-4-2025ರ ಗುರುವಾರ ಕಡೆ ದಿನವಾಗಿರುತ್ತದೆ. ಸ್ವ-ವಿವರವುಳ್ಳ ಮಾಹಿತಿಯನ್ನು ಈ ಕೆಳಕಂಡ 94482 95901,94499 74004, 9902929701, 97400 37176, 944864932 , 9886840737, ಮೊಬೈಲ್ ನಂಬರ್‌ಗಳಿಗೆ ಸಂಪರ್ಕಿಸಿ, ಖುದ್ದಾಗಿ ಇಲ್ಲವೆ, ಫೋನಿನಲ್ಲಿ ಮಾಹಿತಿಯನ್ನು ನೀಡಬಹುದಾಗಿದೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ. ಆಸಕ್ತರು ಇಂತಹ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಲೂ ಸಹ ಕೋರಲಾಗಿದೆ.

ಬಸವಾಭಿಮಾನಿಗಳು, ಶ್ರೀಮಠದ ಭಕ್ತರು, ಬಸವ ಸಂಘಟನೆಗಳು, ಬಸವಕೇಂದ್ರಗಳು ಹಾಗೂ ಸರ್ವ ಸಮಾಜಗಳ ಸಹಯೋಗದಲ್ಲಿ ಮೂರು ದಿನಗಳ ಕಾಲ ಅರ್ಥಪೂರ್ಣ ಕಾರ್ಯಕ್ರಮ ಆಯೋಜಿಸಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕಾಗಿ ವಿನಂತಿಸಲಾಗಿದೆ.

# ಜಾತಿ ಜನಗಣತಿ ವರದಿ ವಿರುದ್ಧ ಲಿಂಗಾಯತರು-ಒಕ್ಕಲಿಗರಿಂದ ಒಗ್ಗಟ್ಟಿನ ಹೋರಾಟ: ಶಾಸಕ ಶಾಮನೂರು ಶಿವಶಂಕರಪ್ಪ

**ದಾವಣಗೆರೆ:** ಜಾತಿ ಜನಗಣತಿ ವರದಿ ವಿರುದ್ಧ ಲಿಂಗಾಯತರು ಹಾಗೂ ಒಕ್ಕಲಿಗರು ಒಗ್ಗಟ್ಟಿನಿಂದ ಹೋರಾಟ ನಡೆಸಲಿದ್ದಾರೆಂದು ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭಾದ ಅಧ್ಯಕ್ಷ ಮತ್ತು ಕಾಂಗ್ರೆಸ್ ಹಿರಿಯ ನಾಯಕ ಶಾಮನೂರು ಶಿವಶಂಕರಪ್ಪ ಅವರು ಬುಧವಾರ ಹೇಳಿದ್ದಾರೆ.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾತಿ ಗಣತಿ ವಿರುದ್ಧ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ರಾಜ್ಯದಲ್ಲಿ ವೀರಶೈವ ಲಿಂಗಾಯತರನ್ನು ಹಾಗು ಒಕ್ಕಲಿಗರನ್ನು ಎದುರಾಕಿಕೊಂಡು ರಾಜ್ಯಭಾರ ಮಾಡೋಕೆ ಆಗುತ್ತದೆಯೇ ಎಂದು ಸವಾಲು ಹಾಕಿದರು,

ಸರ್ಕಾರ ಜಾತಿಗಣತಿ ವರದಿಯನ್ನು ಬಿಡುಗಡೆ ಮಾಡುವುದಾಗಿ ಹೇಳುತ್ತಿದೆ. ಆದರೆ, ಮಾಡುತ್ತಿಲ್ಲ. ನಮ್ಮ ಪ್ರಕಾರ ರಾಜ್ಯದಲ್ಲಿ ವೀರಶೈವ ಲಿಂಗಾಯತರ ಸಂಖ್ಯೆ ಅಧಿಕವಾಗಿದೆ. ಎರಡನೇ ಸ್ಥಾನದಲ್ಲಿ ಒಕ್ಕಲಿಗ ಸಮುದಾಯವಿದೆ. ಜಾತಿ ಜನಗಣತಿ ವರದಿ ಬಿಡುಗಡೆ ಮಾಡುವುದಾಗಿ ಸರ್ಕಾರ ಸುಮ್ಮನೆ ಹೇಳುತ್ತಿದೆ. ಒಂದೊಮ್ಮೆ ಬಿಡುಗಡೆ ಮಾಡಿದರೆ ಒಕ್ಕಲಿಗರು ಮತ್ತು ಲಿಂಗಾಯತರು ಒಗ್ಗೂಡಿ ಹೋರಾಟ ಮಾಡುತ್ತೇವೆಂದು ತಿಳಿಸಿದರು.

10 ವರ್ಷಗಳ ಹಿಂದೆ ನಡೆಸಿದ ಸಮೀಕ್ಷೆಯು ಅವೈಜ್ಞಾನಿಕವಾಗಿದ್ದು, ಒಂದು ಸರ್ಕಾರ ವರದಿಯನ್ನು ಜಾರಿಗೆ ತಂದಿದ್ದೇ ಆದರೆ, ಹಿನ್ನಡೆ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಇದು ಕೇವಲ ನನ್ನ ಅಭಿಪ್ರಾಯವಷ್ಟೇ ಅಲ್ಲ, ಇತರ ಅನೇಕರ ಅಭಿಪ್ರಾಯವೂ ಆಗಿದೆ. ಗುರುವಾರ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ವರದಿಯ ಬಗ್ಗೆ ಚರ್ಚಿಸಲು ಸರ್ಕಾರ ಯೋಜಿಸುತ್ತಿದೆ. ಸರ್ಕಾರ ಚರ್ಚೆ ಮಾಡಲಿ ಸಾಮಾಜಿಕ-ಆರ್ಥಿಕ-ಶೈಕ್ಷಣಿಕ ಸಮೀಕ್ಷೆಯನ್ನು ವೈಜ್ಞಾನಿಕವಾಗಿ ನಡೆಸಲಿ ಎಂದು ಹೇಳಿದರು.

## ಪ್ರವಾದಿ ಪೈಗಂಬರ್‌ರವರ ಬಗ್ಗೆ ಬಸನಗೌಡ ಪಾಟೀಲ್ ಯತ್ನಾಳ್ ಅವಹೇಳನ;

# ಸುಮೋಟೋ ಕೇಸ್ ದಾಖಲಿಸಿ ಬಂಧಿಸಲು ಗೃಹ ಸಚಿವರಿಗೆ ಮನವಿ

**ತುಮಕೂರು:** ಪ್ರವಾದಿ ಮಹಮ್ಮದ್ ಪೈಗಂಬರ್ ಅವರ ಬಗ್ಗೆ ಬಿಜೆಪಿಯ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪ್ರಚೋದನಾತ್ಮಕ ಮತ್ತು ಅವಹೇಳನಕಾರಿ ಹೇಳಿಕೆ ನೀಡಿರುವುದು ಖಂಡನೀಯ, ಇದು ಇಡೀ ಇಸ್ಲಾಂ ಧರ್ಮದ ಜನರ ಭಾವನೆಗೆ ಘಾಸಿಯುಂಟು ಮಾಡಿದ್ದು, ಯತ್ನಾಳ್ ವಿರುದ್ಧ ಸುಮೋಟೋ ಕೇಸ್ ದಾಖಲಿಸಿ ಕೂಡಲೆ ಬಂಧಿಸಬೇಕೆಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಅವರಿಗೆ ಮುಸ್ಲಿಂ ಸಮುದಾಯದ ಮುಖಂಡರು ಮನವಿ ಸಲ್ಲಿಸಿದರು.

ಈ ಕುರಿತು ಮಾತನಾಡಿದ ಡಾ. ಎಪಿಜೆ ಅಬ್ದುಲ್ ಕಲಾಂ ಫೌಂಡೇಷನ್ ಮತ್ತು ಅಕ್ಯಾಡೆಮಿಯ ಅಧ್ಯಕ್ಷ ನಿಸಾರ್ ಅಹಮದ್ (ಆರಿಫ್) ಪ್ರವಾದಿ ಮಹಮದ್ ಪೈಗಂಬರ್ ರವರು ಇಡೀ ವಿಶ್ವದ ಶಾಂತಿ ಬಯಸಿದ ಧರ್ಮ ಪ್ರವರ್ತಕರಾಗಿದ್ದು, ಅಂಥವರ ಬಗ್ಗೆ ಬಾಯಿ ತೆವಲಿಗಾಗಿ ಮಾತನಾಡಿರುವ ಯತ್ನಾಳ್‌ರನ್ನು ಕೂಡಲೆ ಬಂಧಸಬೇಕು ಎಂದು ಸಚಿವರದಲ್ಲಿ ಮನವಿ ಮಾಡಿದರು.

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಒಂದು ಧರ್ಮವನ್ನು ಗುರಿಯಾಗಿಟ್ಟು-ಕೊಂಡು ಪದೇ ಪದೇ ಈ ರೀತಿ ಪ್ರಚೋದನಾತ್ಮಕ ಹೇಳಿಕೆ ನೀಡುತ್ತಿರುವುದು ಖಂಡನೀಯ, ಇದೇ ಚಾಳಿಯನ್ನು ಯತ್ನಾಳ್ ಮುಂದುವರಿಸಿದ್ದೇ ಆದಲ್ಲಿ ಮುಂದಿನ ದಿನಗಳಲ್ಲಿ ಅವರ ವಿರುದ್ಧ ರಾಜ್ಯಾದ್ಯಂತ ಹೋರಾಟ ಮಾಡಲಾಗುವುದು. ಇಸ್ಲಾಂ ಧರ್ಮವನ್ನು ಆಧಾರವಾಗಿಟ್ಟುಕೊಂಡು ಪದೇ ಪದೇ ಈ ರೀತಿ ಪ್ರಚೋದನಾತ್ಮಕ ಹೇಳಿಕೆ ನೀಡುತ್ತಿರುವುದು ಖಂಡನೀಯ ಎಂದು ನಿಸಾರ್ ಅಹಮದ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.



# ಜಾತಿ ಜನಗಣತಿ ಲೆಕ್ಕ- ಇಲ್ಲ ಪಕ್ಕಾ: ವರದಿಗೆ ಸ್ವಪಕ್ಷೀಯರಿಂದಲೇ ತೀವ್ರ ವಿರೋಧ; ಪ್ರತಿಭಟನೆ ಎಚ್ಚರಿಕೆ




**ಮೈಸೂರು:** ಜಾತಿ ಜನಗಣತಿ ವರದಿಯನ್ನು ವಿವರವಾಗಿ ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಗುರುವಾರ ವಿಶೇಷ ಸಚಿವ ಸಂಪುಟ ಸಭೆ ಕರೆದಿದ್ದು, ಎಲ್ಲರ ದೃಷ್ಟಿ ಸಭೆಯ ಫಲಿತಾಂಶದ ಮೇಲೆ ನೆಟ್ಟಿದೆ.

ಕಳೆದ ವಾರ ಈ ವರದಿಯನ್ನು ಸಚಿವ ಸಂಪುಟ ಅಂಗೀಕರಿಸಿದಾಗಿನಿಂದ, ಅನೇಕ ಪ್ರಬಲ ಸಮುದಾಯಗಳು ಮತ್ತು ವಿರೋಧ ಪಕ್ಷಗಳು ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತ ಪಡಿಸಿವೆ.

ಒಕ್ಕಲಿಗ ಮತ್ತು ವೀರಶೈವ-ಲಿಂಗಾಯತ ಸಮುದಾಯಗಳು ವರದಿಯನ್ನು "ಅವೈಜ್ಞಾನಿಕ" ಎಂದು ಕರೆದು ಆಕ್ಷೇಪ ವ್ಯಕ್ತಪಡಿಸಿವೆ. ವರದಿಯ ಪರಿಣಾಮಗಳ ಕುರಿತು ಚರ್ಚಿಸಲು ಅನೇಕ ಜಾತಿ ಆಧಾರಿತ ಸಂಘಟನೆಗಳು ಸಭೆಗಳನ್ನು ಕರೆದಿವೆ ಮತ್ತು ಗುರುವಾರದ ಸಭೆಯ ಬೆಳವಣಿಗೆಗಳು ಮತ್ತು ಫಲಿತಾಂಶವನ್ನು ಸೂಕ್ಷ್ಮವಾಗಿ ಗಮನಿಸುತ್ತಿವೆ.

ಒಕ್ಕಲಿಗ ಸಂಘ ಬಂದ್‌ಗೆ ಕರೆ ನೀಡುವುದಾಗಿ ಬೆದರಿಕೆ ಹಾಕಿದೆ. ಸಮುದಾಯದ ಸಚಿವರು ಮತ್ತು ಶಾಸಕರ ರಾಜೀನಾಮೆ ನೀಡಬೇಕೆಂದು ಒಕ್ಕಲಿಗರ ಸಂಘ ಆಗ್ರಹಿಸಿದೆ. ಸಮುದಾಯಗಳ ಹಿತದೃಷ್ಟಿಯಿಂದ ಪಾರದರ್ಶಕತೆಯನ್ನು ಕಾಯ್ದುಕೊಳ್ಳುವ ಮೂಲಕ ಮರು ಸಮೀಕ್ಷೆ ನಡೆಸಬೇಕೆಂದು ಒಕ್ಕಲಿಗ ನಾಯಕ ಪಿಳ್ಳಪ್ಪ ಒತ್ತಾಯಿಸಿದ್ದಾರೆ. ವರದಿಯನ್ನು ಸ್ವೀಕರಿಸುವ ಯಾವುದೇ ಆತುರದ ನಿರ್ಧಾರವು ವಿನಾಶಕ್ಕೆ ಕಾರಣವಾಗುತ್ತದೆ ಎಂದು ಅವರು ಹೇಳಿದರು, ಏಕೆಂದರೆ ಕಾಂಗ್ರೆಸ್‌ನ ಅನೇಕರು ಇದನ್ನು ವಿರೋಧಿಸಿದ್ದಾರೆ ಎಂದಿದ್ದಾರೆ.

ಜಾತಿ ಎಣಿಕೆ ಮಾಡಲು ಯಾರೂ ತಮ್ಮ ಮನೆಗೆ ಭೇಟಿ ನೀಡಿಲ್ಲ ಹೀಗಾಗಿ ವರದಿಯನ್ನು ಸ್ವೀಕರಿಸುವುದಿಲ್ಲ ಎಂದು ಕಾಂಗ್ರೆಸ್ ಶಾಸಕ ರವಿಕುಮಾರ್ ಹೇಳಿದ್ದಾರೆ. ಒಕ್ಕಲಿಗ ಜನಸಂಖ್ಯೆಯು ಒಂದು ಕೋಟಿಗಿಂತ ಹೆಚ್ಚು ಎಂದು ಅವರು ಹೇಳಿಕೊಂಡಿದ್ದು, ವರದಿಯನ್ನು ಪರಿಶೀಲಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿದ್ದಾರೆ. ಒಕ್ಕಲಿಗ ನಾಯಕರು, ಚುನಾಯಿತ ಪ್ರತಿನಿಧಿಗಳು ಮತ್ತು ಸ್ವಾಮೀಜಿಗಳು ಮುಂದಿನ ಪ್ಲಾನ್ ನಿರ್ಧರಿಸುತ್ತಾರೆ ಎಂದು ಅವರು ಹೇಳಿದರು.

ಏತನ್ಮಧ್ಯೆ, ಕಾಂತರಾಜ್ ಆಯೋಗದ ವರದಿಯ ಸಾಧಕ-ಬಾಧಕಗಳನ್ನು ಚರ್ಚಿಸಲು ವೀರಶೈವ-ಲಿಂಗಾಯತ ಸಂಘಟನೆಗಳು ಸಹ ಸಭೆ ನಡೆಸಿದವು. ಕಾಂಗ್ರೆಸ್ ಸರ್ಕಾರವು ತನ್ನ ಹಿಂದಿನ ಅವಧಿಯಲ್ಲಿ ವೀರಶೈವರು ಮತ್ತು ಲಿಂಗಾಯತರನ್ನು ವಿಭಜಿಸಲು ಪ್ರಯತ್ನಿಸುತ್ತಿದೆ ಮತ್ತು ವರದಿಯ ಮೂಲಕ ಸಮುದಾಯವನ್ನು ಗುರಿಯಾಗಿಸಲು ಬಯಸುತ್ತಿದೆ ಎಂದು ಅವರು ಆರೋಪಿಸಿದರು.

ಸರ್ಕಾರವು ಮರು ಸಮೀಕ್ಷೆ ಬದಲು ವರದಿಯನ್ನು ಸ್ವೀಕರಿಸಲು ಆತುರದ ನಿರ್ಧಾರ ತೆಗೆದುಕೊಂಡರೆ ಪ್ರಬಲ ಸಮುದಾಯಗಳು ಪ್ರತಿಭಟನೆ ನಡೆಸುತ್ತವೆ ಎಂದು ಅವರು ಹೇಳಿದರು. ಮುಂದಿನ ಕ್ರಮವನ್ನು ನಿರ್ಧರಿಸಲು ಒಕ್ಕಲಿಗ ಮತ್ತು ಲಿಂಗಾಯತ ಸಮುದಾಯಗಳು ಮಠಾಧೀಶರು ಮತ್ತು ಶ್ರೀಗಳ ಬೆಂಬಲಕ್ಕೆ ನಿಂತಿವೆ.

# ಗ್ಯಾರಂಟಿ ಯೋಜನೆಗಳ ಅರಿವು ಮತ್ತು ಪ್ರಚಾರ ಮೂಡಿಸುವ ಕಾರ್ಯವಾಗಬೇಕು: ಚಿದಾನಂದಪ್ಪ



**ಬಳ್ಳಾರಿ:** ರಾಜ್ಯ ಸರ್ಕಾರದ ಪಂಚಗ್ಯಾರಂಟಿ ಯೋಜನೆಗಳಿಂದ ಬಡ ಜನರ ಏಳ್ಗೆಗೆ ಪೂರಕವಾಗಿದ್ದು, ಯೋಜನೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಗ್ರಾಪಂ ಮಟ್ಟದಲ್ಲಿ ಗ್ಯಾರಂಟಿ ಯೋಜನೆಗಳ ಅರಿವು ಮತ್ತು ಪ್ರಚಾರ ಮೂಡಿಸುವ ಕಾರ್ಯವಾಗಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಚಿದಾನಂದಪ್ಪ ಕೆ.ಇ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್‌ನ ಹಳೆಯ ನಜೀರ್ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಡುಬಡವರು ಮತ್ತು ಅಹಾಯಕ ಕುಟುಂಬಗಳಿಗಾಗಿಯೇ ನೆರವು ನೀಡಲು ರಾಜ್ಯ ಸರ್ಕಾರವು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಈಗಾಗಲೇ ಗ್ಯಾರಂಟಿ ಯೋಜನೆಗಳಿಂದ ಸಾಕಷ್ಟು ಪ್ರಮಾಣದ ಅರ್ಹರು ಇದರ ಲಾಭ ಪಡೆಯುತ್ತಿದ್ದಾರೆ. ಅದೇರೀತಿಯಾಗಿ ಹೊರಗುಳಿದ ಅರ್ಹ ಫಲಾನುಭವಿಗಳನ್ನು ಗುರುತಿಸಿ, ಗ್ಯಾರಂಟಿ ಯೋಜನೆಗಳ ಲಾಭ ತಲುಪಿಸಲು ಅಧಿಕಾರಿಗಳು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಗ್ಯಾರಂಟಿ ಯೋಜನೆಗಳನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ಶೇ.100ರಷ್ಟು ಪ್ರಗತಿ ಸಾಧಿಸಬೇಕು ಎಂದರು.

ಗೃಹಲಕ್ಷ್ಮಿ ಯೋಜನೆಯಡಿ ನೋಂದಣಿಯಾದ ಫಲಾನುಭವಿಗಳಿಗೆ ಆಗಸ್ಟ್ 2023 ರಿಂದ ಡಿಸೆಂಬರ್ 2024 ರವರೆಗೆ ರೂ.2,000 ರಂತೆ ಒಟ್ಟು 43,92,946 ಫಲಾನುಭವಿಗಳಿಗೆ ಮಾಹೆವಾರು ಒಟ್ಟು 878,58,92,000 ರೂ.ಗಳು ಸರ್ಕಾರದಿಂದ ನೇರವಾಗಿ ಫಲಾನುಭವಿಗಳ ಖಾತೆಗಳಿಗೆ ವರ್ಗಾವಣೆ ಮಾಡಲಾಗಿದೆ. 2025 ರ ಜನವರಿ ತಿಂಗಳ ಹಣವು ಪಾವತಿಯಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್‌ಕುಮಾರ್ ಅವರು ಸಭೆಗೆ ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಪ್ರತಿಕ್ರಿಯಿಸಿ, ಗೃಹಲಕ್ಷ್ಮಿ ಯೋಜನೆಯಡಿ ನೋಂದಾಯಿಸಿಕೊಂಡ ಫಲಾನುಭವಿಗಳಲ್ಲಿ ಎನ್‌ಪಿಸಿಐ ಸಮಸ್ಯೆ, ತೀರಿಹೋದವರು ಮತ್ತು ಐಟಿ-ಜಿಎಸ್‌ಟಿ ಸಂಬಂಧಿತ ಕಾರಣಗಳಿಂದ ಸೌಲಭ್ಯ ವಂಚಿತರಾದ ಫಲಾನುಭವಿಗಳ ನಿಖರ ಮಾಹಿತಿ ಕಂಡುಕೊಳ್ಳಬೇಕು. ಇದರಿಂದ ಯೋಜನೆಯ ಹಣ ಪೋಲಾಗದಂತೆ ತಡೆಯಬಹುದು ಎಂದು ತಿಳಿಸಿದರು.

ಎನ್‌ಪಿಸಿಐ ಲಿಂಕ್ ಆಗದ ಫಲಾನುಭವಿಗಳು ಮತ್ತು ಫಲಾನುಭವಿಗಳ ವಯೋಸಹಜದಿಂದ ಮರಣ ಹೊಂದಿದವರ ಮಾಹಿತಿ ಗುರುತಿಸಲು ತಾಪಂ ಇಒ, ಗ್ರಾಪಂ ಪಿಡಿಒ ಮತ್ತು ಲೀಡ್ ಬ್ಯಾಂಕ್ ಅಧಿಕಾರಿಗಳನ್ನೊಂಡು ಗ್ರಾಪಂ ಮಟ್ಟದಲ್ಲಿ ವಿಶೇಷ ಕ್ಯಾಂಪೇನ್ ಗಳನ್ನು ಆಯೋಜಿಸಬೇಕು ಎಂದು ನಿರ್ದೇಶನ ನೀಡಿದರು.

ಅನ್ನಭಾಗ್ಯ ಯೋಜನೆಯಡಿ ಜುಲೈ 2023 ರಿಂದ ಡಿಸೆಂಬರ್ 2024 ರವರೆಗೆ ಜಿಲ್ಲೆಯಲ್ಲಿ ಒಟ್ಟು 1,81,10,436 ಫಲಾನುಭವಿಗಳಿಗೆ ಇದುವರೆಗೂ ಒಟ್ಟು 292.29 ಕೋಟಿ ರೂ.ಗಳ ಸಹಾಯಧನ ನೀಡಲಾಗಿದೆ. 2025ರ ಜನವರಿ ಮಾಹೆಯ ಡಿಬಿಟಿ ಯ ಅನುದಾನ ಬಿಡುಗಡೆಯಾಗಿಲ್ಲ, ಉಳಿದ ಫೆಬ್ರವರಿ ಮತ್ತು ಮಾರ್ಚ್ ಮಾಹೆಯ ಹೆಚ್ಚುವರಿ ಅಕ್ಕಿಯನ್ನು ರಾಜ್ಯ ಸರ್ಕಾರವು ನಿರ್ದೇಶನದಂತೆ ಅಕ್ಕಿ ವಿತರಿಸಲಾಗಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸಕೀನಾ ಅವರು ಸಭೆಗೆ ತಿಳಿಸಿದರು.

ಅಧ್ಯಕ್ಷರಾದ ಚಿದಾನಂದಪ್ಪ ಅವರು ಮಾತನಾಡಿ, ಜಿಲ್ಲೆಯಲ್ಲಿ ಹೆಚ್ಚಾಗಿ ಅಕ್ರಮ ಪಡಿತರ ಸಾಗಾಣೆ ಸಂಬಂಧಿಸಿದಂತೆ ಪ್ರಕರಣಗಳು ದಾಖಲಾಗುತ್ತಿದ್ದು, ಇದಕ್ಕೆ ಕಡಿವಾಣ ಹಾಕಬೇಕಿದೆ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಒಟ್ಟು 3,18,885 ಅರ್ಹ ಗ್ರಾಹಕರಿದ್ದು, ಅದರಲ್ಲಿ ಈವರೆಗೆ (ಮಾ.31 ರ ವರೆಗೆ) 2,82,956 ಗ್ರಾಹಕರು ನೋಂದಣಿ ಮಾಡಿಕೊಂಡಿದ್ದಾರೆ. 35,929 ಗ್ರಾಹಕರು ನೋಂದಾಯಿಸಲು ಬಾಕಿಯಿದ್ದಾರೆ. ಸರ್ಕಾರವು 2023ರ ಆಗಸ್ಟ್‌ನಿಂದ 2025ರ ಮಾರ್ಚ್‌ವರೆಗೆ ಒಟ್ಟು 277.02 ಕೋಟಿ ರೂ. ಪಾವತಿಸಿದೆ ಎಂದು ಜೆಸ್ಕಾಂ ಇಲಾಖೆಯ ಅಧಿಕಾರಿಗಳು ಸಭೆಗೆ ತಿಳಿಸಿದರು.

ಇದಕ್ಕೆ ಅಧ್ಯಕ್ಷರು ಪ್ರತಿಕ್ರಿಯಿಸಿ, ಜಿಲ್ಲೆಯಲ್ಲಿ ಅನಧೀಕೃತವಾಗಿ ವಿದ್ಯುತ್ ಸಂಪರ್ಕ ಪಡೆಯುತ್ತಿರುವವರನ್ನು ಗುರುತಿಸಿ ವಿದ್ಯುತ್ ಮೀಟರ್ ಸಂಪರ್ಕ ಪಡೆಯಲು ತಿಳಿಸಬೇಕು. ಬಾಡಿಗೆ ಮನೆ ಬದಲಾಯಿಸುವವರ ಯೋಜನೆ ಪಡೆಯಲು ಲಿಂಕಿಂಗ್ ಮತ್ತು ಡಿ-ಲಿಂಕಿಂಗ್ ಮಾಹಿತಿಯು ಸಹ ಪೂರಕವಾಗಿರಬೇಕು ಎಂದು ಜೆಸ್ಕಾಂ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಶಕ್ತಿ ಯೋಜನೆಯಡಿ ಬಳ್ಳಾರಿ ವಿಭಾಗದ ಸಾರಿಗೆ ಇಲಾಖೆಯ ಬಸ್‌ಗಳಲ್ಲಿ ಜೂನ್-2023 ರಿಂದ ಮಾರ್ಚ್-2025 ರವರೆಗೆ ಮಹಿಳಾ ವಯಸ್ಕರು ಮತ್ತು ಹೆಣ್ಣು ಮಕ್ಕಳು ಸೇರಿ ಒಟ್ಟು 4,52,37,755 ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದು, 167,99,61,992 ರೂ.ಗಳು ಸಾರಿಗೆ ಆದಾಯ ಹೊಂದಲಾಗಿದೆ ಎಂದು ಕ.ಕ.ಸಾರಿಗೆ ಸಂಸ್ಥೆಯ ಬಳ್ಳಾರಿ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದರು.

ಯುವ ನಿಧಿ ಯೋಜನೆಯಡಿ ಫೆಬ್ರವರಿ-2025 ಮಾಹೆವರೆಗೆ ಜಿಲ್ಲೆಯ 7,618 ನಿರುದ್ಯೋಗಿ ಅಭ್ಯರ್ಥಿಗಳು ನೋಂದಾಯಿಸಿದ್ದು, ಈವರೆಗೆ 9,79,38,000 ರೂ. ಫಲಾನುಭವಿಗಳಿಗೆ ಜಮೆ ಮಾಡಲಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಅಧಿಕಾರಿಗಳು ಸಭೆಗೆ ತಿಳಿಸಿದರು.

# ಜಾತಿ ಗಣತಿ ವರದಿಯಲ್ಲಿ ವ್ಯತ್ಯಾಸವಾದರೆ ಅಗ್ನಿವಂಶ ಕ್ಷತ್ರಿಯ ಸಮುದಾಯದಿಂದ ಹೋರಾಟ

**ತುಮಕೂರು :** ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಜಾತಿಗಣತಿ ವರದಿಯನ್ನು 10 ವರ್ಷಗಳ ನಂತರ ಜಾರಿ ಮಾಡಲು ಮುಂದಾಗುತ್ತಿದೆ. ಸದ್ಯದ ಮಟ್ಟಿಗೆ ಮುದ್ರಣ ಮಾಧ್ಯಮ ಮತ್ತು ಎಲೆಕ್ಟ್ರಾನಿಕ್ ಮಾಧ್ಯಮದಲ್ಲಿ ಅಗ್ನಿವಂಶ ಕ್ಷತ್ರಿಯ ತಿಗಳ ಸಮುದಾಯದ ಅಂಕಿ ಅಂಶಗಳು ಪ್ರಕಟವಾಗುತ್ತಿದ್ದು ಅಸಮರ್ಪಕವಾಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ ಎಂದು ಕರ್ನಾಟಕ ಅಗ್ನಿವಂಶ ಕ್ಷತ್ರಿಯ ತಿಗಳ ಯೂಥ್ ಫೋರ್ಸ್ ಅಧ್ಯಕ್ಷರಾದ ಮಾರುತಿ ಕೆ. ಆರ್. ಅವರು ಆರೋಪ ಮಾಡಿದರು.



ತುಮಕೂರು ನಗರದಲ್ಲಿ ಜಾತಿಗಣತಿ ವರದಿ ಬಗ್ಗೆ ಮಾತನಾಡಿದ ಅವರು, ಏಪ್ರಿಲ್ 17 ಕ್ಯಾಬಿನೆಟ್ ಮೀಟಿಂಗ್ ನಲ್ಲಿ ಚರ್ಚೆ ಮಾಡಲು ತೀರ್ಮಾನಿಸಲಾಗಿದೆ. ಈಗಾಗಲೇ ವರದಿಯ ಪ್ರತಿಯನ್ನು ಎಲ್ಲಾ ಶಾಸಕರುಗಳಿಗೆ ನೀಡಲಾಗಿದೆ. ಆದರೆ ಕೆಲವು ಮಾಧ್ಯಮಗಳಲ್ಲಿ ಪ್ರಸಾರವಾದಂತೆ ಅಥವಾ ಮುದ್ರಣ ಮಾಧ್ಯಮದಲ್ಲಿ ಪ್ರಕಟವಾಗಿರುವಂತೆ ಅಗ್ನಿವಂಶ ಕ್ಷತ್ರಿಯ ಸಮುದಾಯದ ಅಂಕಿ ಅಂಶಗಳೇ ಇಲ್ಲ. ತಿಗಳ ಸಮುದಾಯವನ್ನು ಕೂಡ ಸಮರ್ಪಕವಾಗಿ ದಾಖಲು ಮಾಡಿಲ್ಲ. ಹೀಗಿದ್ದ ಮೇಲೆ ಈ ವರದಿಯನ್ನು ಅಗ್ನಿವಂಶ ಕ್ಷತ್ರಿಯ ಸಮುದಾಯದವರು ಒಪ್ಪಿಕೊಳ್ಳುವುದರೋ ಹೇಗೆ..? ಎಂದು ಪ್ರಶ್ನೆ ಮಾಡಿದರು. ತಿಗಳ ಸಮುದಾಯದವರು 1897ರಲ್ಲಿ 57,710 ಜನಸಂಖ್ಯೆ ಇತ್ತು ಇಲ್ಲಿಯವರೆಗೆ 128 ವರ್ಷಗಳು ಕಳೆದಿವೆ. ಈಗ ಅದರ ಪ್ರಮಾಣ ಎಷ್ಟಾಗಿರಬೇಕು ಇದರ ಯಾವುದೇ ಅಂದಾಜು ಸರ್ಕಾರ ದಾಖಲು ಮಾಡಿದಂತೆ ಕಾಣಿಸುತ್ತಿಲ್ಲ. ನೂರಾರು ವರ್ಷಗಳಿಂದ ಪೂಜೆ ಮಾಡಿಕೊಂಡು ಬರುತ್ತಿರುವ ಅಗ್ನಿ ಬನ್ನಿರಾಯಸ್ವಾಮಿಯನ್ನು ಸರ್ಕಾರದ ವತಿಯಿಂದಲೇ ಜಯಂತಿಯನ್ನು ಆಚರಣೆ ಮಾಡಲಾಗುತ್ತಿದೆ. ಕಳೆದ ಬಿಜೆಪಿ ಸರ್ಕಾರ ತಿಗಳ ಅಭಿವೃದ್ಧಿ ನಿಗಮ ಮಂಡಳಿಯನ್ನು ಸ್ಥಾಪನೆ ಮಾಡಿದೆ. ಚುನಾವಣೆಯ ಸಂದರ್ಭದಲ್ಲಿ ಮಾತ್ರ ತಿಗಳ ಸಮುದಾಯ ಬಹುಶಹ ಗುರುತಿಗೆ ಬರುತ್ತದೆಯೇನೋ ಕಾಣೆ ಎಂದು ಅಸಮಾಧಾನ ಹೊರಹಾಕಿದರು.

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ರಾಮನಗರ, ಚಿಕ್ಕಬಳ್ಳಾಪುರ, ಕೋಲಾರ, ಮಂಡ್ಯ, ಹಾಸನ, ಮೈಸೂರು, ಚಿಕ್ಕಮಗಳೂರು ಸೇರಿದಂತೆ ಹಳೆ ಮೈಸೂರು ಭಾಗದಲ್ಲಿ ಸುಮಾರು 10 ಲಕ್ಷಕ್ಕಿಂತ ಹೆಚ್ಚು ಅಗ್ನಿವಂಶ ಕ್ಷತ್ರಿಯ ಸಮುದಾಯದವರು ಇದ್ದಾರೆ. ಇವರ ಯಾವುದೇ ಮನೆಗಳಿಗೆ ಯಾವುದೇ ಅಧಿಕಾರಿಗಳು ಭೇಟಿ ನೀಡಿ ಮಾಹಿತಿಯನ್ನು ಕೇಳಿಲ್ಲ. ಹೀಗಾಗಿ ಇದೊಂದು ಅವೈಜ್ಞಾನಿಕ ಜಾತಿಗಣತಿ ಎನ್ನುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ ಎಂದರು.

# ಮೇ 1ರಿಂದ ಜಿಪಿಎಸ್ ಆಧಾರಿತ ಟೋಲ್ ಸಂಗ್ರಹ ವ್ಯವಸ್ಥೆ ಜಾರಿ

**ನವದೆಹಲಿ:** ಮೇ 1 ರಿಂದ ದೇಶದ ರಾಷ್ಟ್ರೀಯ ಹೆದ್ದಾರಿಗಳಲ್ಲಿ ರಸ್ತೆ ಪ್ರಯಾಣವು ಹೆಚ್ಚು ಸುಗಮವಾಗಲಿದೆ, ಫಾಸ್ಟ್ ಟ್ಯಾಗ್‌ಗಳ ಬದಲು ಹೊಸ ಜಿಪಿಎಸ್ ಆಧಾರಿತ ಟೋಲ್ ಸಂಗ್ರಹ ವ್ಯವಸ್ಥೆಯನ್ನು ಪರಿಚಯಿಸಲಾಗುತ್ತಿದೆ.

ಜಾಗತಿಕ ಸಂಚರಣೆ ಉಪಗ್ರಹ ವ್ಯವಸ್ಥೆ (GNSS) ಏಪ್ರಿಲ್ 1ರಿಂದ ಜಾರಿಗೆ ಬರುವ ನಿರೀಕ್ಷೆಯಿತ್ತು, ವಿಳಂಬವಾಗಿ ಈಗ ಮೇ 1ರಿಂದ ಜಾರಿಗೆ ಬರುವ ಸಾಧ್ಯತೆಯಿದೆ.

ಈ ಬಗ್ಗೆ ಮಾತನಾಡಿರುವ ಕೇಂದ್ರ ರಸ್ತೆ ಮತ್ತು ಸಾರಿಗೆ ಸಚಿವ ನಿತಿನ್ ಗಡ್ಕರಿ, ಮುಂದಿನ 15 ದಿನಗಳಲ್ಲಿ ನಾವು ಹೊಸ ಟೋಲ್ ನೀತಿಯನ್ನು ತರುತ್ತಿದ್ದೇವೆ. ಟೋಲ್ ಪ್ಲಾಜಾಗಳಿಗಾಗಿ ನಿಲ್ಲಬೇಕಾಗಿಲ್ಲದ ಕಾರಣ ನಾವು ಸ್ಯಾಟಲೈಟ್ ಟೋಲ್ ವ್ಯವಸ್ಥೆಯನ್ನು ಪ್ರಾರಂಭಿಸುತ್ತಿದ್ದೇವೆ ಎಂದರು.

GNSS ಎಂದರೇನು ಮತ್ತು ಅದು ಹೇಗೆ ಕಾರ್ಯನಿರ್ವಹಿಸುತ್ತದೆ?




ಗ್ಲೋಬಲ್ ನ್ಯಾವಿಗೇಷನ್ ಸ್ಯಾಟಲೈಟ್ ಸಿಸ್ಟಮ್ (GNSS) ಒಂದು ಉಪಗ್ರಹ ಆಧಾರಿತ ಟೋಲ್ ಸಂಗ್ರಹ ವ್ಯವಸ್ಥೆಯಾಗಿದ್ದು, ಇದರಲ್ಲಿ ಒಬ್ಬ ವ್ಯಕ್ತಿಯು ಪ್ರಯಾಣಿಸಿದ ದೂರವನ್ನು ಆಧರಿಸಿ ಅವರ ಬ್ಯಾಂಕ್ ಖಾತೆಗಳಿಂದ ನೇರವಾಗಿ ಹಣವನ್ನು ಕಡಿತಗೊಳಿಸಲಾಗುತ್ತದೆ. ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರ ಪ್ರಕಾರ, ಹೊಸ ವ್ಯವಸ್ಥೆಯು ಸಮಯ ಮತ್ತು ವೆಚ್ಚ-ಪರಿಣಾಮಕಾರಿ ಮತ್ತು ವೇಗವಾಗಿರುತ್ತದೆ.

GNSS, FASTag ಗಿಂತ ಹೇಗೆ ಭಿನ್ನವಾಗಿದೆ?

FASTag ವ್ಯವಸ್ಥೆಯು ಸಾಂಪ್ರದಾಯಿಕ ನಗದು ಸಂಗ್ರಹ ವಿಧಾನಕ್ಕಿಂತ ವೇಗವಾಗಿದ್ದರೂ, ವಾಹನಗಳು ಟೋಲ್ ಬೂತ್‌ನಲ್ಲಿ ಹಲವೊಮ್ಮೆ ಕಾದು ನಿಲ್ಲಬೇಕಾಗುತ್ತದೆ. ಹಲವು ಬಾರಿ ವಿಶೇಷವಾಗಿ ಪೀಕ್ ಅವರ್ ಗಳಲ್ಲಿ ಇದು ದೀರ್ಘ ಸರತಿ ಸಾಲುಗಳಿಗೆ ಕಾರಣವಾಗುತ್ತದೆ.

ಆದಾಗ್ಯೂ, ಜಿಎನ್ ಎಸ್ ವ್ಯವಸ್ಥೆಯು ವಾಹನಗಳ ಸ್ಥಳಗಳನ್ನು ಪತ್ತೆಹಚ್ಚಲು ಉಪಗ್ರಹಗಳೊಂದಿಗೆ ಸಂವಹನ ನಡೆಸುವ ವರ್ಚುವಲ್ ಟೋಲ್ ಬೂತ್‌ಗಳೊಂದಿಗೆ ಕಾರ್ಯನಿರ್ವಹಿಸುತ್ತದೆ. ಟ್ರ್ಯಾಕ್ ಮಾಡಲಾದ ಸ್ಥಳದ ಪ್ರಕಾರ, ವಾಹನವು ಪ್ರಯಾಣಿಸಿದ ದೂರವನ್ನು ವಿಶ್ಲೇಷಣೆ ಮಾಡಿ ಟೋಲ್‌ನ್ನು ಲೆಕ್ಕಹಾಕಲಾಗುತ್ತದೆ. ಹೊಸ ವ್ಯವಸ್ಥೆಯು ಭೌತಿಕ ಟೋಲ್ ಬೂತ್‌ಗಳನ್ನು ಸ್ಥಾಪಿಸುವ ಅಗತ್ಯವನ್ನು ನಿವಾರಿಸುವುದಲ್ಲದೆ, ಬಳಕೆದಾರರಿಗೆ ಹೊಂದಿಕೊಳ್ಳುವ ಪಾವತಿ ಆಯ್ಕೆಗಳನ್ನು ಒದಗಿಸುತ್ತದೆ.

## ಸಾಲು ಸಾಲು ಚಿತ್ರಗಳಲ್ಲಿ ಶಿವರಾಜ್‌ಕುಮಾರ್ ಬ್ಯುಸಿ; ಹೊಸ ಚಿತ್ರಕ್ಕೆ ಬಾಲಾಜಿ ಮಾಧವನ್ ಆಕ್ಷನ್ ಕಟ್!



ನಟ ಶಿವರಾಜ್‌ಕುಮಾರ್ ಇದೀಗ ಹಲವು ವಿಭಿನ್ನ ಚಿತ್ರಗಳಲ್ಲಿ ನಟಿಸುತ್ತಿದ್ದಾರೆ. ಸದ್ಯ ಅವರು ತಮ್ಮ 131ನೇ ಚಿತ್ರವಾದ ತೆಲುಗಿನ ನಟ ರಾಮ್ ಚರಣ್ ಅವರೊಂದಿಗೆ ಪ್ಯಾನ್–ಇಂಡಿಯಾ ಯೋಜನೆ, ರಜನಿಕಾಂತ್

ನಟಿಸಿರುವ ಬಹು ನಿರೀಕ್ಷಿತ ಜೈಲರ್ 2 ಮತ್ತು ನಿರ್ದೇಶಕ ಪವನ್ ಒಡೆಯರ್ ಅವರೊಂದಿಗೆ ಮುಂಬರುವ ಚಿತ್ರದಲ್ಲಿ ತೊಡಗಿಸಿಕೊಂಡಿದ್ದಾರೆ. ಇದೀಗ, ಡಾ. ರಾಜ್‌ಕುಮಾರ್ ಅವರ ಹುಟ್ಟುಹಬ್ಬದ (ಏಪ್ರಿಲ್ 24) ವಾರ್ಷಿಕೋತ್ಸವದಂದು, ಹೊಸ ಚಿತ್ರವನ್ನು ಘೋಷಿಸಲಾಗಿದೆ.

ಇದು ಶ್ರಿತಿಕ್ ಮೋಷನ್ ಪಿಕ್ಚರ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಮೊದಲ ಚಿತ್ರವಾಗಿದ್ದು, ಖ್ಯಾತ ಚಲನಚಿತ್ರ ನಿರ್ಮಾಪಕ ಪಿ ವಾಸು ಅವರ ಸೋದರಳಿಯ ಬಾಲಾಜಿ ಮಾಧವನ್ ಅವರು ಮೊಟ್ಟ ಮೊದಲ ಬಾರಿಗೆ ನಿರ್ದೇಶಕನ ಕ್ಯಾಪ್ ತೊಡಲಿದ್ದಾರೆ. ಚಿತ್ರವನ್ನು ಸಾಗರ್, ಕೃಷ್ಣಕುಮಾರ್ ಮತ್ತು ಸೂರಜ್ ಶರ್ಮಾ ನಿರ್ಮಿಸುತ್ತಿದ್ದಾರೆ.

ನಿರ್ಮಾಪಕರೊಂದಿಗೆ ಇತ್ತೀಚೆಗೆ ಶಿವರಾಜ್‌ಕುಮಾರ್ ಅವರನ್ನು ಭೇಟಿಯಾಗಿ ಬಾಲಾಜಿ ಮಾಧವನ್ ಕಥೆಯನ್ನು ವಿವರಿಸಿದ್ದಾರೆ. ಕಥೆಯನ್ನು ಕೇಳಿದ ನಟ ಸಂತೋಷ ವ್ಯಕ್ತಪಡಿಸಿದರು ಎಂದು ವರದಿಯಾಗಿದೆ.

ತಂಡವು ವಿಶಿಷ್ಟ ಕಥಾಹಂದರದ ಬಗ್ಗೆ ಸುಳಿವು ನೀಡಿದ್ದು, ಶೀಘ್ರದಲ್ಲೇ ಶೀರ್ಷಿಕೆಯನ್ನು ಅನಾವರಣಗೊಳಿಸಲು ಯೋಜಿಸುತ್ತಿದೆ. ಮುಂಬರುವ ವಾರಗಳಲ್ಲಿ ಚಿತ್ರದ ಪಾತ್ರವರ್ಗ ಮತ್ತು ಸಿಬ್ಬಂದಿ ಬಗ್ಗೆ ಹೆಚ್ಚಿನ ವಿವರಗಳನ್ನು ಬಹಿರಂಗಪಡಿಸುವ ನಿರೀಕ್ಷೆಯಿದೆ.


## 'ಬ್ಯಾಂಕ್ ಆಫ್ ಭಾಗ್ಯಲಕ್ಷ್ಮಿ' ಚಿತ್ರದ ಮೊದಲ ಹಾಡು ಬಿಡುಗಡೆ

ರಂಗಿತರಂಗ ಮತ್ತು ಅವನೇ ಶ್ರೀಮನ್ನಾರಾಯಣ ಮುಂತಾದ ಚಿತ್ರಗಳನ್ನು ನಿರ್ಮಿಸಿದ್ದ ಎಚ್‌ಕೆ ಪ್ರಕಾಶ್ ಇದೀಗ 'ಬ್ಯಾಂಕ್ ಆಫ್ ಭಾಗ್ಯಲಕ್ಷ್ಮಿ' ಎಂಬ ಹೊಸ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಅಭಿಷೇಕ್ ಎಂ ಚೊಚ್ಚಲ ನಿರ್ದೇಶನದ ಈ ಚಿತ್ರದಲ್ಲಿ ದಿಯಾ ಮತ್ತು ಬ್ಲಿಂಕ್ ಖ್ಯಾತಿಯ ದೀಕ್ಷಿತ್ ಶೆಟ್ಟಿ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಎಂಆರ್‌ಟಿ ಮ್ಯೂಸಿಕ್ (ಲಹರಿ) ಚಾನಲ್‌ನಲ್ಲಿ ಚಿತ್ರದ ಮೊದಲ ಹಾಡು 'ಹರ ಓಂ' ಬಿಡುಗಡೆ ಮಾಡಲಾಗಿದೆ.

'ಹರ ಓಂ' ಗೀತೆಯನ್ನು ಜುಡಾ ಸ್ಯಾಂಡಿ ಸಂಯೋಜಿಸಿದ್ದು, ನಾಗಾರ್ಜುನ ಶರ್ಮಾ ಸಾಹಿತ್ಯ ಬರೆದಿದ್ದಾರೆ. ಹಾಡಿಗೆ ಉಷಾ ಭಂಡಾರಿ ಮತ್ತು ದರ್ಶನ್ ನೃತ್ಯ ಸಂಯೋಜನೆ ಮಾಡಿದ್ದಾರೆ. ಉಷಾ ಈ ಹಾಡಿನಲ್ಲಿ ಕಾಣಿಸಿಕೊಂಡಿದ್ದಾರೆ.

ಪ್ರೇಮಂ ಪೂಜ್ಯಂ ಮತ್ತು ಕೌಸಲ್ಯಾ ಸುಪ್ರಜಾ ರಾಮ ಚಿತ್ರಗಳಿಗೆ ಹೆಸರುವಾಸಿಯಾದ ನಟಿ ಬೃಂದಾ ಆಚಾರ್ಯ, 'ಶಿವನ ಹೆಸರಿನಿಂದ ನನ್ನ ದಿನ ಪ್ರಾರಂಭವಾಗುತ್ತದೆ. ಈ ಹಾಡನ್ನು ಕೇಳಿದ ನಂತರ, ನಾನು ಅದನ್ನು ನಿರಂತರವಾಗಿ ಗುನುಗುತ್ತಿರುತ್ತೇನೆ' ಎಂದರು.

ನಿರ್ದೇಶಕ ಅಭಿಷೇಕ್ ಮಾತನಾಡಿ, 'ನಾನು ಈ ಹಿಂದೆ ನಿರ್ದೇಶಕ ಸಿಂಪಲ್ ಸುನಿ ಜೊತೆ ಕೆಲಸ ಮಾಡಿದ್ದರೂ, ನಿರ್ದೇಶಕನಾಗಿ ಇದು ನನ್ನ ಮೊದಲ ಚಿತ್ರ. ನಾನು ರಕ್ಷಿತ್ ಶೆಟ್ಟಿ ಮತ್ತು ಸಚಿನ್ ಜೊತೆ ಗಿಳಿಫಿ ಸ್ಟುಡಿಯೋವನ್ನು ನಡೆಸುತ್ತಿದ್ದೇನೆ. 'ಹರ ಓಂ' ಹಾಡು ಕ್ಲೈಮ್ಯಾಕ್ಸ್‌ಗೆ ಸ್ವಲ್ಪ ಮೊದಲು ಕಾಣಿಸಿಕೊಳ್ಳುತ್ತದೆ ಮತ್ತು ಭಾವನಾತ್ಮಕ ತೂಕವನ್ನು ಹೊಂದಿದೆ. ನಾವು ಚಿತ್ರೀಕರಣವನ್ನು ಪೂರ್ಣಗೊಳಿಸಿದ್ದೇವೆ ಮತ್ತು ಬಿಡುಗಡೆಯತ್ತ ಇದು ನಮ್ಮ ಮೊದಲ ಹೆಜ್ಜೆಯಾಗಿದೆ' ಎಂದು ಹೇಳಿದರು.



## ಕ್ರಿಕೆಟಿಗನೊಂದಿಗೆ ಸಪ್ತಪದಿ ತುಳಿದ ನಟಿ ಅರ್ಚನಾ ಕೊಟ್ಟಿಗೆ; ಆರ್.ಸಿ.ಬಿ ಆಟಗಾರ ದೇವದತ್ ಪಡಿಕ್ಕಲ್ ಹಾಜರಿ!



ಬೆಂಗಳೂರು: ನಟಿ ಅರ್ಚನಾ ಕೊಟ್ಟಿಗೆ ಬುಧವಾರ ನಡೆದ ಅದ್ದೂರಿ ಕಾರ್ಯಕ್ರಮದಲ್ಲಿ ಕ್ರಿಕೆಟಿಗ ಬಿಆರ್ ಶರತ್ ಅವರನ್ನು ವಿವಾಹವಾದರು. ಸ್ಯಾಂಡಲ್‌ವುಡ್ ಮತ್ತು ಕ್ರಿಕೆಟ್ ಕ್ಷೇತ್ರದ ಕೆಲವು ಪ್ರಮುಖರು ಭಾಗವಹಿಸಿ ನವದಂಪತಿಗೆ ಶುಭಕೋರಿದರು.

ಬುಧವಾರ ಬೆಳಿಗ್ಗೆ ಇಬ್ಬರು ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದಾರೆ. ಕೆಲವು ತಿಂಗಳ ಹಿಂದಷ್ಟೇ ಅರ್ಚನಾ ಹಾಗೂ ಶರತ್ ಅವರ ನಿಶ್ಚಿತಾರ್ಥ ನೆರವೇರಿತ್ತು.

ಮಂಗಳವಾರ ನಡೆದ ಆರತಕ್ಷತೆ ಸಮಾರಂಭದಲ್ಲಿ ಆರ್‌ಸಿಬಿಯ ದೇವದತ್ ಪಡಿಕಲ್, ಪ್ರಸಿದ್ಧ್ ಕೃಷ್ಣ (ಗುಜರಾತ್ ಟೈಟಾನ್ಸ್), ವೈಶಾಖ್ ವಿಜಯಕುಮಾರ್ (ಪಂಜಾಬ್ ಸೂಪರ್ ಕಿಂಗ್ಸ್) ಸೇರಿದಂತೆ ಹಲವಾರು ಕ್ರಿಕೆಟಿಗರು ಭಾಗವಹಿಸಿದ್ದರು. ಕರ್ನಾಟಕ ತಂಡದ ಪರ ರಣಜಿ ಕ್ರಿಕೆಟ್ ಆಡುತ್ತಿರುವ ತಮ್ಮ ಸ್ನೇಹಿತ ಬಿಆರ್ ಶರತ್ ಅವರಿಗೆ ಶುಭ ಹಾರೈಸಿದರು.


ಕನ್ನಡ ಚಿತ್ರರಂಗದ ನಟಿಯರಾದ ಸಪ್ತಮಿ ಗೌಡ, ಅಮೃತಾ ಅಯ್ಯಂಗಾರ್, ಸಾನ್ಯಾ ಅಯ್ಯರ್, ಆಶಿಕಾ ರಂಗನಾಥ್, ಅರ್ಚನಾ ಜೋಯಿಸ್, ನವೀನ್ ಶಂಕರ್, ಹಿತಾ ಚಂದ್ರಶೇಖರ್, ಸಾನ್ವಿ ಸುದೀಪ್, ಅನುಷಾ, ಖುಷಿ ರವಿ, ತೇಜಸ್ವಿನಿ ಶರ್ಮಾ, ರೋಶಿನಿ ಮತ್ತು ಇತರರು ಭಾಗಿಯಾಗಿದ್ದರು.

ಅರ್ಚನಾ ಕೊಟ್ಟಿಗೆ 2018ರಲ್ಲಿ ತೆರೆಕಂಡ ಅರಣ್ಯಕಾಂಡ ಚಿತ್ರದ ಮೂಲಕ ಕನ್ನಡ ಚಿತ್ರರಂಗಕ್ಕೆ ಪದಾರ್ಪಣೆ ಮಾಡಿದರು. ವಾಸು ನಾನ್ ಪಕ್ಕಾ ಕಮರ್ಷಿಯಲ್, ಡಿಯರ್ ಸತ್ಯ, ಯೆಲ್ಲೋ ಗ್ಯಾಂಗ್ಸ್ ಮತ್ತು ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ ಮುಂತಾದ ಚಿತ್ರಗಳಲ್ಲಿ ನಟಿಸಿದ್ದಾರೆ. ಅವರು ಈಗ ಚಜಜ5 ಕನ್ನಡದ ಮೊದಲ ಮೂಲ ಸರಣಿ 'ಅಯ್ಯನ ಮನೆ' ಬಿಡುಗಡೆಗೆ ಎದುರು ನೋಡುತ್ತಿದ್ದಾರೆ. ಇದು ಏಪ್ರಿಲ್ 25 ರಂದು ಸ್ಟ್ರೀಮ್ ಆಗಲಿದೆ.

ಶರತ್ ವಿಕೆಟ್–ಕೀಪರ್–ಬ್ಯಾಟ್ಸ್‌ಮನ್ ಆಗಿದ್ದು, 2018ರಲ್ಲಿ ರಣಜಿಗೆ ಪದಾರ್ಪಣೆ ಮಾಡಿದರು ಮತ್ತು ಚೊಚ್ಚಲ ಪಂದ್ಯದಲ್ಲೇ ವಿದರ್ಭ ಕ್ರಿಕೆಟ್ ತಂಡದ ವಿರುದ್ಧ ಶತಕ ಗಳಿಸಿದರು.

ಶರತ್ ಮತ್ತು ಅರ್ಚನಾ ಒಂದೇ ಕಾಲೇಜಿನಲ್ಲಿ ಓದಿದ್ದರು. 'ಶರತ್ ಕಾಲೇಜಿನಲ್ಲಿ ನನ್ನ ಸೀನಿಯರ್ ಮತ್ತು ಆಗಲೇ ನನಗೆ ಶರತ್ ಬಗ್ಗೆ ತಿಳಿದಿತ್ತು, ಆದರೆ ನಾವು ಕ್ಲೋಸ್ ಆಗಿರಲಿಲ್ಲ. ವರ್ಷಗಳ ನಂತರ, 2018 ರಲ್ಲಿ ನಾವು ಪರಸ್ಪರ ಸ್ನೇಹಿತನ ಮೂಲಕ ಭೇಟಿಯಾದೆವು. ಶರತ್‌ಗೆ ನಾನೆಂದರೆ ಮೊದಲಿನಿಂದಲೂ ಇಷ್ಟ. ಆದರೆ, ಶರತ್ ಅವರೇ ಮೊದಲು ಅದನ್ನು ಹೇಳಲಿ ಎಂದು ನಾನು ಕಾಯುತ್ತಿದ್ದೆ. ಆದರೆ, ಉತ್ತಮ ವ್ಯಕ್ತಿ ಎಂದು ಬೆಂಗಳೂರು ಟೈಮ್ಸ್ ಸಂದರ್ಶನವೊಂದರಲ್ಲಿ ಅರ್ಚನಾ ಹೇಳಿದ್ದನ್ನು ಉಲ್ಲೇಖಿಸಿದೆ.

## 'ನಾನು ರಾಮನ ತಂದೆ ದಶರಥನ ಮಾರ್ಗ ಅನುಸರಿಸುತ್ತೇನೆ, ಅದಕ್ಕೆ ಎರಡು ಮದುವೆ ಇರಬೇಕು': ಕಮಲ್ ಹಾಸನ್



**ನವದೆಹಲಿ:** ನಟ ಕಮಲ್ ಹಾಸನ್ ತಮ್ಮ ಮುಂಬರುವ ಚಿತ್ರ 'ಥಗ್ ಲೈಫ್' ಬಿಡುಗಡೆಗೆ ಎದುರುನೋಡುತ್ತಿದ್ದು, ಪ್ರಚಾರ ಕಾರ್ಯದಲ್ಲಿ ಬ್ಯುಸಿಯಾಗಿದ್ದಾರೆ. ಚಿತ್ರದ ಪ್ರಚಾರ ಕಾರ್ಯಕ್ರಮದಲ್ಲಿ, ತಮ್ಮ ವೈಯಕ್ತಿಕ ಜೀವನ ಮತ್ತು ಮದುವೆಯ ಬಗ್ಗೆ ಮಾತನಾಡಿದ್ದಾರೆ.

ಪತ್ರಕರ್ತರೊಬ್ಬರು ತ್ರಿಶಾ ಅವರ ವಿವಾಹದ ಕುರಿತು ಪ್ರಶ್ನೆ ಕೇಳಿದಾಗ, 'ಅದು (ಮದುವೆ) ಸಂಭವಿಸಿದರೂ ಪರವಾಗಿಲ್ಲ ಮತ್ತು ಅದು ಸಂಭವಿಸದಿದ್ದರೂ ಪರವಾಗಿಲ್ಲ' ಎಂದು ಹೇಳಿದರು.

ಇದು ಕಮಲ್ ಹಾಸನ್ ಅವರನ್ನು ತಮ್ಮ ವೈವಾಹಿಕ ಅನುಭವಗಳ ಬಗ್ಗೆ ಚಿಂತಿಸುವಂತೆ ಮಾಡಿತು. ಈಗ ಸಂಸತ್ ಸದಸ್ಯರಾಗಿರುವ ಜಾನ್ ಬ್ರಿಟ್ಟಾಸ್ ಅವರೊಂದಿಗಿನ ಸಂದರ್ಶನದಿಂದ ಆಯ್ದ ಕೆಲವು ವಿಚಾರಗಳನ್ನು ಕಮಲ್ ಹಂಚಿಕೊಂಡಿದ್ದಾರೆ.

ಕಮಲ್ ಹಾಸನ್ ಅವರು ಎರಡು ವಿವಾಹ ವಾಗಿದ್ದು, ಇಬ್ಬರಿಂದಲೂ ವಿಚ್ಛೇದನ ಪಡೆದಿದ್ದಾರೆ. 1978ರಲ್ಲಿ ವಾಣಿ ಗಣಪತಿ ಅವರನ್ನು ವಿವಾಹವಾಗಿದ್ದ ಅವರು 1988 ರಲ್ಲಿ ದೂರಾಗಿದ್ದರು. ಬಳಿಕ ಅದೇ ವರ್ಷ ನಟಿ ಸಾರಿಕಾ ಅವರೊಂದಿಗೆ ವಿವಾಹವಾಗಿದ್ದರು. ದಂಪತಿಗೆ ಶ್ರುತಿ ಹಾಸನ್ ಮತ್ತು ಅಕ್ಷರಾ ಹಾಸನ್ ಎಂಬ ಇಬ್ಬರು ಮಕ್ಕಳಿದ್ದಾರೆ. ಸಾರಿಕಾ ಅವರಿಂದಲೂ ಕಮಲ್ ಹಾಸನ್ 2004ರಲ್ಲಿ ವಿಚ್ಛೇದನ ಪಡೆದಿದ್ದಾರೆ.'ನನ್ನ ಆತ್ಮೀಯ ಸ್ನೇಹಿತ ಸಂಸದ ಬ್ರಿಟ್ಟಾಸ್ ಒಮ್ಮೆ ನನ್ನನ್ನು ಕೇಳಿದರು. ನಾನು ಒಳ್ಳೆಯ ಬ್ರಾಹ್ಮಣ ಕುಟುಂಬದಿಂದ ಬಂದಿದ್ದರೂ, ಎರಡು ಬಾರಿ ಏಕೆ ಮದುವೆಯಾದೆ ಎಂದು ಮತ್ತು ಕುಟುಂಬದ ಖ್ಯಾತಿಗೂ ಮದುವೆಗೂ ಏನು ಸಂಬಂಧ ಎಂದು ನಾನು ಅವರನ್ನು ಕೇಳಿದೆ' ಎಂದು ಅವರು ನೆನಪಿಸಿಕೊಂಡರು.

## ರಾಕೇಶ್ ಅಡಿಗ ನಟನೆಯ 'ನಾನು ಮತ್ತು ಗುಂಡ– 2' ಬಹು ಭಾಷೆಗಳಲ್ಲಿ ಬಿಡುಗಡೆಗೆ ಸಜ್ಜು

ಎರಡೂವರೆ ವರ್ಷಗಳ ಹಿಂದೆ ಪ್ರೇಕ್ಷಕರನ್ನು ಸೆಳೆದಿದ್ದ ಮನುಷ್ಯ ಮತ್ತು ನಾಯಿ ನಡುವಿನ ಆಳವಾದ ಬಾಂಧವ್ಯದ ಕಥೆಯನ್ನು ಒಳಗೊಂಡಿದ್ದ 'ನಾನು ಮತ್ತು ಗುಂಡ' ಚಿತ್ರ ಇದೀಗ ಹೊಸ ರೂಪದಲ್ಲಿ ಪ್ರೇಕ್ಷಕರ ಎದುರು ಬರಲು ಸಿದ್ಧವಾಗಿದೆ. ಚಿತ್ರದ ಸೀಕ್ವೆಲ್ 'ನಾನು ಮತ್ತು ಗುಂಡ– 2' ಚಿತ್ರ ಬಿಡುಗಡೆಗೆ ಸಜ್ಜಾಗಿದೆ. ಈ ಬಾರಿ, ಸಿಂಬು (ನಾಲ್ಕು ದಿನಗಳ ಚಿತ್ರೀಕರಣದ ನಂತರ ನಿಧನ ಹೊಂದಿದ ನಾಯಿ) ಅವರ ಮಗ ಸಿಂಬಾ ಚಿತ್ರದಲ್ಲಿ ಪ್ರಮುಖ ಪಾತ್ರವನ್ನು ನಿರ್ವಹಿಸಿದೆ. ಅದರೊಂದಿಗೆ ಮತ್ತೊಬ್ಬ ಸಹನಟ ಬಂಟಿ ಕೂಡ ಸೇರಿಕೊಂಡಿದ್ದು, ಈ ಭಾವಪೂರ್ಣ ಕಥೆಗೆ ಇನ್ನಷ್ಟು ಮೋಡಿ ಮಾಡಿದೆ.

ರಘು ಹಾಸನ್ ನಿರ್ದೇಶನ ಮತ್ತು ನಿರ್ಮಾಣದ ಈ ಸೀಕ್ವೆಲ್‌ನಲ್ಲಿ ರಾಕೇಶ್ ಅಡಿಗ ನಾಯಕನಾಗಿ ನಟಿಸಿದ್ದಾರೆ. ಮೂಲ ಚಿತ್ರದಲ್ಲಿ ಶಿವರಾಜ್ ಕೆಆರ್ ಪೇಟೆ ನಟಿಸಿದ್ದರು. ಆ ಪಾತ್ರದ ಮಗನಾಗಿ ರಾಕೇಶ್ ನಟಿಸಿದ್ದಾರೆ. ರಚನಾ ಇಂದರ್ ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ. 'ಮೊದಲ ಭಾಗದ ಚಿತ್ರದ ಸಮಯದಲ್ಲೇ ನಾವು ಸೀಕ್ವೆಲ್ ಕಥೆಯನ್ನು ಸಿದ್ಧಪಡಿಸಿದ್ದೆವು. ಚಿತ್ರವು ಭಾವನೆ, ದೈವಿಕ ವಿಚಾರಗಳು ಮತ್ತು ಸಂದೇಶವನ್ನು ಮಿಶ್ರಣ ಮಾಡುತ್ತದೆ' ಎಂದು ರಘು ಬಹಿರಂಗಪಡಿಸಿದರು.



ಊಟಿ, ತೀರ್ಥಹಳ್ಳಿ ಮತ್ತು ಶಿವಮೊಗ್ಗದಂತಹ ಸುಂದರವಾದ ಸ್ಥಳಗಳಲ್ಲಿ ಚಿತ್ರೀಕರಣ ಮಾಡಲಾಗಿದ್ದು, ಚಿತ್ರವು ಮೇ ತಿಂಗಳಲ್ಲಿ ಕನ್ನಡ, ತೆಲುಗು ಮತ್ತು ಹಿಂದಿ ಸೇರಿದಂತೆ ಐದು ಭಾಷೆಗಳಲ್ಲಿ ಬಿಡುಗಡೆಯಾಗುವ ನಿರೀಕ್ಷೆಯಿದೆ. ಶೈಲಜಾ ಕಿರಗಂದೂರು ಅವರು ಟೀಸರ್ ಬಿಡುಗಡೆ ಮಾಡಿ, ತಂಡಕ್ಕೆ ಶುಭಕೋರಿದರು.

ಚಿತ್ರಕ್ಕೆ ಆರ್‌ಪಿ ಪಟ್ನಾಯಕ್ ಸಂಗೀತ ಸಂಯೋಜಿಸಿದ್ದು, ಚಿತ್ರದಲ್ಲಿ ಆರು ಹಾಡುಗಳಿವೆ. ರೋಹಿತ್ ರಾಮನ್ ಮತ್ತು ವಿ ನಾಗೇಂದ್ರ ಪ್ರಸಾದ್ ಅವರು ಸಾಹಿತ್ಯ ಬರೆದಿದ್ದಾರೆ. ಜೊತೆಗೆ ರಿತ್ವಿಕ್ ಮುರಳೀಧರ್ ಅವರ ಹಿನ್ನೆಲೆ ಸಂಗೀತವನ್ನು ಹೊಂದಿದೆ.

## 'ರಾವಣ' ಶೂಟಿಂಗ್ ಗೂ ಮುನ್ನ ಮಹಾಕಾಳೇಶ್ವರನ ಸನ್ನಿಧಿಯಲ್ಲಿ ಯಶ್ ಪೂಜೆ!

ನಿತೇಶ್ ತಿವಾರಿ ರಾಮಾಯಣದ ಬಗ್ಗೆ ಬಾಲಿವುಡ್‌ನ ಕಾರಿಡಾರ್‌ಗಳಲ್ಲಿ ಸಾಕಷ್ಟು ಚರ್ಚೆಗಳು ನಡೆಯುತ್ತಿವೆ. ಈ ಚಿತ್ರದಲ್ಲಿ ಇಡೀ ತಾರೆಯರ ಗುಂಪೇ ಕಾಣಿಸಿಕೊಳ್ಳಲಿದೆ. ಈ ಚಿತ್ರದಲ್ಲಿ ದಕ್ಷಿಣ ಭಾರತದ ಸೂಪರ್‌ಸ್ಟಾರ್ ಯಶ್ 'ರಾವಣ' ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದು, ಅವರು ತಮ್ಮ ಪಾತ್ರದ ಚಿತ್ರೀಕರಣವನ್ನು ಪ್ರಾರಂಭಿಸಿದ್ದಾರೆ.

ಶೂಟಿಂಗ್ ಆರಂಭಕ್ಕೂ ಮುನ್ನ ಯಶ್ ಮಧ್ಯ ಪ್ರದೇಶದ ಮಹಾಕಾಳೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಯಶ್ ಅವರು ಶಿವನ ಭಕ್ತರು. ಅವರ ಮನೆಯ ಕುಲದೇವರು ಕೂಡ ಶಿವನೇ. ಈ ಕಾರಣಕ್ಕೆ ಶಿವನ ದರ್ಶನ ಪಡೆಯಲು ಅವರು ಮಹಾ ಕಾಳೇಶ್ವರ ದೇವಾಲಯಕ್ಕೆ ಭೇಟಿ ನೀಡಿದ್ದಾರೆ. ಯಶ್ ಅವರು 'ರಾಮಾಯಣ' ಚಿತ್ರದಲ್ಲಿ ರಾವಣನ ಪಾತ್ರ ಮಾಡುತ್ತಿದ್ದಾರೆ. ಮಂಗಳವಾರದಿಂದ (ಏಪ್ರಿಲ್ 22) ಅವರು ಶೂಟಿಂಗ್‌ನಲ್ಲಿ ಭಾಗಿ ಆಗಲಿದ್ದಾರೆ. ಅದಕ್ಕೂ ಮೊದಲು ಅವರು ದೇವಾಲಯಕ್ಕೆ ಭೇಟಿ ನೀಡಿದ್ದಾರೆ. ವಿಶೇಷ ಎಂದರೆ ರಾವಣ ಕೂಡ ಶಿವನ ದೊಡ್ಡ ಭಕ್ತ.

ನಿತೇಶ್ ತಿವಾರಿ ತಮ್ಮ ಮುಂಬರುವ ಚಿತ್ರದಲ್ಲಿ ಯಶ್, ರಣಬೀರ್ ಕಪೂರ್, ಸನ್ನಿ ಡಿಯೋಲ್, ರವಿ ದುಬೆ ಮತ್ತು ಸಾಯಿ ಪಲ್ಲವಿ ಅವರಂತಹ ಶ್ರೇಷ್ಠ ನಟರನ್ನು ಆಯ್ಕೆ ಮಾಡಿದ್ದಾರೆ. ರಾಮಾಯಣದ



ಪ್ರಮುಖ ಭಾಗವಾಗಿರುವುದರ ಜೊತೆಗೆ, ನಟ ಈ ಚಿತ್ರದ ಸಹ–ನಿರ್ಮಾಣವನ್ನೂ ಮಾಡುತ್ತಿದ್ದಾರೆ. ಈ ವಾರದಿಂದ ಅವರು ಮುಂಬೈನಲ್ಲಿ ತಮ್ಮ ಏಕವ್ಯಕ್ತಿ ದೃಶ್ಯಗಳ ಚಿತ್ರೀಕರಣವನ್ನು ಪ್ರಾರಂಭಿಸಲಿದ್ದಾರೆ. ಹೊಸ ಆರಂಭಕ್ಕೂ ಮುನ್ನ ದೇವರ ಆಶೀರ್ವಾದ ಪಡೆದರು.

ದೇವರ ದರ್ಶನ ಮಾಡಿ ಮಾತನಾಡಿದ ನಟ ತಾನು ಚಿಕ್ಕಂದಿನಿಂದಲೇ ಶಿವನ ಭಕ್ತ, ದೇವಸ್ಥಾನಕ್ಕೆ ಭೇಟಿ ನೀಡಿ ಖುಷಿಯಾಯಿತು. ಎಲ್ಲರಿಗೂ ಒಳ್ಳೆಯದಾಗಲಿ ಎಂದು ಪ್ರಾರ್ಥಿಸಿದೆ ಎಂದು ಹೇಳಿದ್ದಾರೆ. 'ರಾಮಾಯಣ' ಎರಡು ಭಾಗಗಳಲ್ಲಿ ಬರಲಿದೆ. ನಿತೇಶ್ ತಿವಾರಿ ಅವರ ಈ ಬಹುನಿರೀಕ್ಷಿತ ಚಿತ್ರ ಎರಡು ಭಾಗಗಳಲ್ಲಿ ಬಿಡುಗಡೆಯಾಗಲಿದೆ. ಚಿತ್ರದ ಮೊದಲ ಭಾಗವು 2026 ರ ದೀಪಾವಳಿಯಂದು ಬಿಡುಗಡೆಯಾಗಲಿದ್ದು, ಎರಡನೇ ಭಾಗವು 2027 ರ ದೀಪಾವಳಿಯಂದು ಬಿಡುಗಡೆಯಾಗಲಿದೆ.

# ಡಾ.ರಾಜಕುಮಾರ್ ನೆನಪಿನಲ್ಲಿ

ಕನ್ನಡ ಚಿತ್ರರಂಗದ ಎಲ್ಲ ಪ್ರಥಮಗಳು, ಎಲ್ಲ ಮೊದಲುಗಳು, ಹೊಸತುಗಳು, ಬದಲಾವಣೆಗಳು, ದಾಖಲೆಗಳು.. ಎಲ್ಲವೂ ಇರುವುದು ವರನಟ ಡಾ.ರಾಜಕುಮಾರ್ ಹೆಸರಿನಲ್ಲಿ. ಇಡೀ ಭಾರತೀಯ ಚಿತ್ರೋದ್ಯಮದಲ್ಲೇ ರಾಜ್‌ಕುಮಾರ್‌ಗೊಂದು ಘನತೆಯ ಸ್ಥಾನವಿದೆ. ದೊಡ್ಡ ಅಭಿಮಾನಿ ಬಳಗವಿದೆ, ಅವರನ್ನು ದೇವರೆಂದು ಪೂಜಿಸುವ, ಆರಾಧಿಸುವ 'ಅಭಿಮಾನಿ ದೇವರು'ಗಳಿದ್ದಾರೆ.

ಇಂಥ ರಾಜ್‌ಕುಮಾರ್ ಸಮಾಜಕ್ಕೆ, ಜನರಿಗೆ ಕೊಟ್ಟ ಕೊಡುಗೆ ಏನು ಎಂಬ ಪ್ರಶ್ನೆ ನಿರಂತರವಾಗಿ ಕೇಳುತ್ತಲೇ ಬಂದಿದೆ. ಈ ಪ್ರಶ್ನೆ ಕೇಳುವ ದೊಡ್ಡ ಗುಂಪೇ ಇದೆ.

ಡಾ.ರಾಜ್ ಅವರ ಕೊಡುಗೆಯ ಬಗ್ಗೆ ಅನುಮಾನಗಳಿವೆ. ಅವರೇನ್ ಮಾಡಿದ್ರಪ್ಪ ಎಂಬ ಲೇವಡಿಯ ಮಾತುಗಳಿವೆ. 'ಒಂದು ರೂಪಾಯಿ ಬಿಚ್ಚಲಿಲ್ಲ' ಎಂಬ ಆರೋಪಗಳಿವೆ.

ಅಷ್ಟಕ್ಕೂ ರಾಜ್‌ಕುಮಾರ್ ಏನು ಮಾಡಬೇಕಿತ್ತು ಸಹಾಯ, ಸಹಕಾರ, ನೆರವು, ಕೊಡುಗೆ ಎಲ್ಲವೂ ಬಹಿರಂಗವಾಗಿ ಮಾಡಬೇಕಿತ್ತೇ ಹೇಳಿಕೊಳ್ಳಬೇಕಿತ್ತಾ ಅದರ ಅಗತ್ಯವಿತ್ತೆ

ಡಾ.ರಾಜ್‌ಕುಮಾರ್ ನಟಿಸಿದ ಸಿನಿಮಾಗಳಿಗೇ ಈ ಸಮಾಜಕ್ಕೆ ಕೊಟ್ಟ ಅತ್ಯಮೂಲ್ಯ ಕೊಡುಗೆಗಳು ಅನ್ನಿಸುವುದಿಲ್ಲವೇ ರಾಜ್‌ಕುಮಾರ್ ಕನ್ನಡದ ಅಸ್ಮಿತೆಯ ಸಂಕೇತ ಅಲ್ಲವೇ 'ಅಭಿಮಾನಿ ದೇವರು'ಗಳ ಭಾವನೆಗೆ ಧಕ್ಕೆಯಾಗದಂಥ ಸಿನಿಮಾಗಳಲ್ಲಿ ನಟಿಸಬೇಕು, ಹಾಗೆಯೇ ಬದುಕಬೇಕೆಂಬ ನೈತಿಕ ಪ್ರಜ್ಞೆಯನ್ನು ಸದಾ ಜಾಗೃತವಾಗಿಟ್ಟುಕೊಂಡಿದ್ದವರು ಡಾ.ರಾಜ್. ಆ ಲಕ್ಷ್ಮಣ ರೇಖೆ ದಾಟಬಾರದೆಂಬ ಎಚ್ಚರಿಕೆ ಹಾಗೂ ಸದಭಿರುಚಿಯ ಚಿತ್ರಗಳಲ್ಲಿ ನಟಿಸುವ



ಮೂಲಕ ಜನರಿಗೆ ಜವಾಬ್ದಾರರಾಗಿ ಬದುಕಿದವರು ಡಾ.ರಾಜ್.

ಅಣ್ಣಾವ್ರ ಪ್ರತೀ ಸಿನಿಮಾದಲ್ಲೂ ಸಮಾಜಕ್ಕೊಂದು ಸಂದೇಶವಿರುತ್ತಿತ್ತು. ನೈತಿಕತೆಯ ಗೆರೆ ದಾಟುವಂಥ ಒಂದೇ ಒಂದು ದೃಶ್ಯವೂ ಅವರ ಚಿತ್ರಗಳಲ್ಲಿರಲಿಲ್ಲ ಅಂದರೆ, ಅದೆಷ್ಟರ ಮಟ್ಟಿಗೆ ಅವರ ಸಾಮಾಜಿಕ ಪ್ರಜ್ಞೆ ಜಾಗೃತವಾಗಿತ್ತು? ಅಚ್ಚರಿ ಅನ್ನಿಸದೇ ಇರದು.

ಅನುರೂಪದ ದಾಂಪತ್ಯ, ಅಣ್ಣತಮ್ಮರ ಸಹೋದರತ್ವ, ಅಕ್ಕ–ತಂಗಿಯರ ನಡುವಿನ ಬಾಂಧವ್ಯ, ಕುಟುಂಬಕ್ಕಾಗಿ ತ್ಯಾಗ, ವೈರತ್ವ, ಜಿದ್ದು ಸಾಧಿಸದಂಥ, ತನಗೆಷ್ಟೇ ಕೆಟ್ಟದ್ದು ಬಯಸಿದರೂ, ತಾನು ಕೆಟ್ಟದು ಬಯಸಬಾರದೆಂಬ ಮಗ, ತಂದೆ, ಅಣ್ಣ, ಗಂಡನ ಪಾತ್ರಗಳಿಗೆ ಜೀವ ತುಂಬಿ ನಟಿಸುತ್ತಲೇ ನಮ್ಮನ್ನೂ ಸರಿದಾರಿಗೆ ಕರೆದೊಯ್ದವರು ಡಾ.ರಾಜ್.

'ಸಾಕ್ಷಾತ್ಕಾರ' ಚಿತ್ರ ಕರ್ಮ ಸಿದ್ಧಾಂತವನ್ನು ಸಾರಿದರೆ, 'ಬಂಗಾರದ ಮನುಷ್ಯ' ವಿದ್ಯಾವಂತ ಯುವಕನಿಂದ ಕೃಷಿ ಕ್ಷೇತ್ರ ಬೆಳೆಯುತ್ತದೆಂಬ ಭವಿಷ್ಯದ ಚಿಂತನೆಯ ಸಾರ, ಅವಿಭಕ್ತ ಕುಟುಂಬಗಳ ಮಹತ್ವ ಸಾರುವ 'ಚಂದವಳ್ಳಿಯ ತೋಟ', 'ಗಂಧದ ಗುಡಿ' ಅರಣ್ಯ– ವನ್ಯಜೀವಿ ಸಂರಕ್ಷಣೆಯ ಅರಿವು ಮೂಡಿಸಿದ ಚಿತ್ರ. ಸಹಾಯ ಬೇಡಿ ಬಂದವರನ್ನು ಎಂದು ಬರಿಗೈಲಿ ಕಳಿಸಬಾರದೆಂಬ ಮಾನವೀಯ ಸಂದೇಶ ಸಾರಿದ 'ಕಸ್ತೂರಿ ನಿವಾಸ', ವಿದ್ಯಾವಂತ ಮಗನಿಂದ ತಿರಸ್ಕಾರಕ್ಕೊಳಗಾದರೂ, ತನ್ನ ಶಹನಾಯಿ ವಿದ್ಯೆ ಮರೆಯದ 'ಸನಾದಿ ಅಪ್ಪಣ್ಣ',

ಊರ ಗೌಡನ ಅಟ್ಟಹಾಸ, ಧಿಮಾಕಿಗೆ ಕಡಿವಾಣ ಹಾಕುವ ಕೆಚ್ಚೆದೆಯ ಯುವಕನ 'ಸಂಪತ್ತಿಗೆ ಸವಾಲ್ ', ಕುಟುಂಬ ಪೋಷಣೆಗೆ ಹಣ ಉಳಿತಾಯದ ಜತೆಗೆ ಮಕ್ಕಳನ್ನು ಕಟ್ಟುನಿಟ್ಟಾಗಿ ಸಾಕುತ್ತಾ, ಕೊನೆಗೆ ಹೆಂಡತಿಗಾಗಿ ಸೋಲುವ 'ಭಾಗ್ಯವಂತರು', ಮದ್ಯಪಾನದ ದುಷ್ಪರಿಣಾಮಗಳ ಬಗ್ಗೆ ತಿಳಿಸಿಕೊಟ್ಟ 'ಜೀವನ ಚೈತ್ರ' ಒಂದೇ ಎರಡೇ? ರಾಜ್‌ಕುಮಾರ್ ನಟಿಸಿದ 200 ಚಿತ್ರಗಳು ಒಂದೊಂದು ಮುತ್ತುಗಳು. ಜನಮಾನಸದಿಂದ ಎಂದೆಂದಿಗೂ ಅಳಿಸಿಹೋಗದಂಥ ಪಾತ್ರಗಳು.

ತನ್ನ ಚಿತ್ರ ಜೀವನದ ಉದ್ದಕ್ಕೂ ಸಾಮಾಜಿಕ ಜವಾಬ್ದಾರಿ, ನೈತಿಕತೆ ಮೆರೆದವರು ಡಾ.ರಾಜ್. ಹಾಗೆಯೇ ಬದುಕಿ ತೋರಿಸಿದರೂ ಕೂಡ.

ಗೋಕಾಕ್ ಚಳವಳಿಯೆಂದೇ ಪ್ರಸಿದ್ಧವಾದ ಕನ್ನಡಪರ ಹೋರಾಟದಲ್ಲಿ ಸಕ್ರಿಯವಾಗಿ ಪಾಲ್ಗೊಂಡು, ಕನ್ನಡ ಪರ ಜಾಗೃತಿಗೆ ಟೊಂಕ ಕಟ್ಟಿ ನಿಂತವರು.

ಕನ್ನಡ, ಕರ್ನಾಟಕದ ವಿಷಯದಲ್ಲಿ ಗಟ್ಟಿ ಹೋರಾಟಕ್ಕೆ ಅಡಿಪಾಯ ಹಾಕಿಕೊಟ್ಟವರೇ ರಾಜ್. ಅವರಂದು ಗೋಕಾಕ್ ಚಳವಳಿಯಲ್ಲಿ ಭಾಗವಹಿಸದೇ ಹೋಗಿರದಿದ್ದರೆ, ಇಂದು ಕನ್ನಡದ ಸ್ಥಿತಿ ಅಧೋಗತಿಗಿಳಿಯುತ್ತಿತ್ತು ಉತ್ಪ್ರೇಕ್ಷೆಯ ಮಾತಲ್ಲ. ಇಂದಿಗೂ ಕನ್ನಡದ ದೈತ್ಯಶಕ್ತಿಯೇ ಡಾ.ರಾಜ್.

ಜನಪ್ರಿಯತೆ, ಕೀರ್ತಿಯ ಜತೆಗೆ ರಾಜ್ ಕುಮಾರ್ ಹಣ ಸಂಪಾದಿಸಿರಬಹುದು. ಆದರೆ, ಆ ಕಾಲಕ್ಕೆ ಅದೆಷ್ಟು ಲಕ್ಷಗಳನ್ನು ಸಂಭಾವನೆಯಾಗಿ ಪಡೆದಿರಬಹುದು

ರಾಜಕುಮಾರ್ ಜನರ ಪ್ರೀತಿ ಸಂಪಾದಿಸಿದಷ್ಟು, ಹಣ ಸಂಪಾದಿಸಲಿಲ್ಲ. ತಾವು ಅಭಿನಯಿಸಿದ ಅನೇಕ ಚಿತ್ರಗಳಿಗೆ ಪೂರ್ಣ ಸಂಭಾವನೆಯನ್ನೂ ಪಡೆಯಲಿಲ್ಲವಂತೆ. ಮದ್ರಾಸ್‌ನಲ್ಲೇ ವಾಸ್ತವ್ಯ ಹೂಡಿದ್ದ ರಾಜ್‌ಕುಮಾರ್ ಅವರಿಗೆ ಹಲವು ನಿರ್ಮಾಪಕರು, ತಮ್ಮ ಚಿತ್ರಗಳು ಯಶಸ್ವಿಯಾಗಿಲ್ಲ ಎಂದು ಸುಳ್ಳು ಹೇಳುತ್ತಿದ್ದರಂತೆ. ನಿರ್ಮಾಪಕರ ಮಾತು ನಂಬುತ್ತಿದ್ದ ರಾಜ್‌ಕುಮಾರ್, ನಷ್ಟ ಭರಿಸಲು ಆ ಪ್ರೊಡ್ಯೂಸರ್‌ಗೆ ಮತ್ತೊಂದು ಕಾಲ್ ಶೀಟ್ ಕೊಡುತ್ತಿದ್ದರಂತೆ. ಇನ್ನೂ ಹಲವು ಉದಾಹರಣೆಗಳಿವೆ. ಅಷ್ಟಕ್ಕೂ ಡಾ.ರಾಜ್ ಕುಮಾರ್ , ಸಮಾಜಕ್ಕೆ ಕೊಟ್ಟಿದ್ದೇನು ಎಂದು ಪ್ರಶ್ನಿಸುತ್ತಿದ್ದವರಿಗೆ ಪುನೀತ್ ರಾಜ್‌ಕುಮಾರ್ ಉತ್ತರ. ಅಪ್ಪು ಬದುಕಿರುವವರೆಗೂ ಅವರ ದಾನದ ಗುಣ ಯಾರ ಅರಿವಿಗೂ ಬಂದಿರಲಿಲ್ಲ. ಅದು ಅಪ್ಪನಿಂದ ಬಂದ ಗುಣವಲ್ಲವೇ ವಿನಯ ಸಂಪನ್ನತೆಯಿಂದಲೇ ನಟಿಸಿ, ಬದುಕಿದ ರಾಜ್, ಒಂದಿಡೀ ಜನರೇಷನ್‌ಗೆ ಮಾದರಿಯಾಗಿದ್ದವರು. ಪಾತ್ರಗಳ ಮೂಲಕವೇ ಯುವ ಸಮುದಾಯಕ್ಕೆ ಸರಿ–ತಪ್ಪುಗಳ ಬಗ್ಗೆ ಅರಿವು ಮೂಡಿಸಿದವರು.

ಅವರ ಒಂದು ಸಿನಿಮಾದಲ್ಲಾದರೂ ಅನಗತ್ಯ ಹೊಡಿಬಡಿ ದೃಶ್ಯಗಳಿದ್ದವೇ ರಕ್ತ ಚೆಲ್ಲಾಡುತ್ತಿತ್ತೆ ರುಂಡ ಚೆಂಡಾಡುತ್ತಿದ್ದರೇ ಸಿಗರೇಟ್, ಬೀಡಿ ಹಚ್ಚಿ ಹೊಗೆ ಬಿಟ್ಟರೇ

ಹೀರೋಯಿಸಂ ತೋರಿಸುವಂಥ ಡೈಲಾಗ್‌ಗಳಿಲ್ಲ, ಬೇರೊಬ್ಬ ಹೀರೋಗೆ ಟಾಂಗ್ ಕೊಡುವಂಥ ಮಾತುಗಳಿಲ್ಲ, ನಾನಿರೋದೇ ಹೀಗೇ ಏನೀಗ ನಾನ್ ಕಚಡ, ನಾನ್ ಪಕ್ಕಾ ಲೋಕಲ್, ನನ್ ಕೆಣಕಬೇಡಿ.. ಇಂಥ ಡೈಲಾಗ್‌ಗಳು ಕನಸಿನಲ್ಲೂ ಕೇಳಸಿಗದು.

ಅಪ್ಪಟ್ಟ ಶುದ್ಧ ಕನ್ನಡ, ಮುತ್ತಿನಂಥ ಮಾತು, ಮಾಣಿಕ್ಯ ಎನಿಸುವಂಥ ಡೈಲಾಗ್ ಗಳು, ಜೇನಿನಲ್ಲಿ ಅದ್ದಿ ತೆಗೆದಂಥ, ಮತ್ತೆ, ಮತ್ತೆ ಕೇಳಬೇಕೆನಿಸುವ ಸುಶ್ರಾವ್ಯ ಕಂಠ. ಹೀರೋಯಿನ್ ಜತೆ ನವಿರಾದ ಪ್ರೇಮ, ರೊಮ್ಯಾನ್ಸ್. ರಾಜ್ ಅಭಿನಯಿಸಿದ ಪ್ರತಿ ಚಿತ್ರವೂ 22 ಕ್ಯಾರೆಟ್ ಬಂಗಾರ.

ಈಗ ಅಂಥ ಚಿತ್ರಗಳೂ ಇಲ್ಲ, ಕಥೆಯೂ ಇಲ್ಲ. ಯುವ ಜನಾಂಗವನ್ನು ಎಚ್ಚರಿಸುವಂಥ ಹೀರೋಗಳಂತು ಇಲ್ಲವೇ ಇಲ್ಲ. ಇರುವ ನಾಲ್ಕೈದು ಹೀರೋಗಳದ್ದು ಒಂದೊಂದು ರೀತಿಯ ಧಿಮಾಕು.

ಕೊಲೆ ಮಾಡಿದ್ದರಲ್ಲಿ ತಪ್ಪೇನು ಎನ್ನುವ, ತೆರೆ ಮೇಲೆ ನೈತಿಕತೆ ಪಾಠ, ತೆರೆ ಹಿಂದೆ ಅನೈತಿಕತೆವಾಗಿ ಬದುಕು, ತೆರೆ ಮೇಲೆ ಹೆಣ್ಣಿನ ರಕ್ಷಣೆಯ ಪಾಠ, ತೆರೆ ಹಿಂದೆ ಹೆಂಡ್ತಿಯನ್ನೇ ಜಲಗಾರನ ಬಳಿ ಕಳಿಸುವ ದುಷ್ಟತನ, ತೆರೆ ಮೇಲೆ ದೇವರು,


ಧರ್ಮದ ಬಗ್ಗೆ ಉದ್ದುದ್ದು ಡೈಲಾಗ್, ತೆರೆ ಹಿಂದೆ ದೇವತೆಯನ್ನೇ ಬೆತ್ತಲು ಮಾಡಬೇಕೆಂಬ ಮಾತು, ಏನ್ ಮಾಡಿದ್ರೆ ಜೈಜೈ , ಅನ್ನೋ ಫ್ಯಾನ್ಸ್. ಇದನ್ನೆಲ್ಲ ನೋಡಿದ ಮೇಲೂ ಡಾ.ರಾಜ್ ಕುಮಾರ್ ಸಮಾಜಕ್ಕೆ ಕೊಟ್ಟ ಕೊಡುಗೆ ಏನು, ಸಮಾಜ ಸೇವೆ ಏನು ಎಂಬುದರ ಅರಿವಾಗಿರಬೇಕಲ್ಲ

ತೆರೆ ಮೇಲಷ್ಟೇ ಅಲ್ಲ ನಿಜಜೀವನದಲ್ಲೂ ಸಾಮಾಜಿಕ ಪ್ರಜ್ಞೆ, ಸಾಮಾಜಿಕ ಜವಾಬ್ದಾರಿಯನ್ನು ಮರೆಯದ ಬದ್ಧತೆ, ಅಬ್ಬರ, ಆಡಂಬರವಿಲ್ಲದೆ ಬದುಕಿದ ಡಾ.ರಾಜಕುಮಾರ್ ಅವರ ನೈತಿಕತೆಗೆ ಸಾವಿಲ್ಲ..

**–ಶೋಭಾಮಳವಳ್ಳಿ**

## 'ಮಂಗಳಾಪುರಂ' ಚಿತ್ರದ ಫಸ್ಟ್‌ಲುಕ್ ಬಿಡುಗಡೆ; ತೆರೆ ಹಂಚಿಕೊಳ್ಳಲಿದ್ದಾರೆ ರಿಷಿ, ಅಭಿಮನ್ಯು ಕಾಶಿನಾಥ್

ವಿಭಿನ್ನ ಚಿತ್ರಕಥೆಗಳನ್ನು ಆರಿಸಿಕೊಳ್ಳುವ ಮೂಲಕ ತನ್ನದೇ ಆದ ಛಾಪು ಮೂಡಿಸಿರುವ ನಟ ರಿಷಿ ಇದೀಗ ಮತ್ತೊಂದು ಕುತೂಹಲಕಾರಿ ಯೋಜನೆಯೊಂದಿಗೆ ಬರಲು ಸಿದ್ಧರಾಗಿದ್ದಾರೆ. ಈ ಬಾರಿ, ಅವರು ಮಂಗಳೂರು ಮೂಲದ ತಂಡದೊಂದಿಗೆ 'ಮಂಗಳಾಪುರಂ' ಎಂಬ ಚಿತ್ರಕ್ಕಾಗಿ ಕೈಜೋಡಿಸುತ್ತಿದ್ದಾರೆ. ಚಿತ್ರವು ಸಸ್ಪೆನ್ಸ್, ನಿಗೂಢತೆ ಮತ್ತು ನಂಬಿಕೆಯ ಅಂಶಗಳನ್ನು ಒಳಗೊಂಡಿರಲಿದೆ. ಉಮಿಲ್ ಮತ್ತು ಡೊಂಬರಾಟದಂತಹ ತುಳು ಚಿತ್ರಗಳಿಗೆ



ಹೆಸರುವಾಸಿಯಾದ ರಂಜಿತ್ ರಾಜ್ ನಿರ್ದೇಶಿಸಲಿದ್ದಾರೆ. ದಿವಂಗತ ನಟ–ಸುವರ್ಣ ಮಂಗಳಾಪುರಂ ಚಿತ್ರ ನಿರ್ಮಾಪಕ ಕಾಶಿನಾಥ್ ಅವರ ಪುತ್ರ ಅಭಿಮನ್ಯು ಕಾಶಿನಾಥ್ ಅವರೊಂದಿಗೆ ರಿಷಿ ಮೊದಲ ಬಾರಿಗೆ ತೆರೆ ಹಂಚಿಕೊಳ್ಳಲಿದ್ದಾರೆ.

ಚಿತ್ರದ ಫಸ್ಟ್‌ಲುಕ್ ಪೋಸ್ಟರ್ ಇತ್ತೀಚೆಗೆ ಬಿಡುಗಡೆಯಾಗಿದ್ದು, ಸಣ್ಣ ಪಟ್ಟಣದಲ್ಲಿನ ಕೊಲೆ ರಹಸ್ಯದ ಝಲಕ್ ಅನ್ನು ನೀಡುತ್ತದೆ. ಕಾಲ್ಪನಿಕ ಪಟ್ಟಣವಾದ ಮಂಗಳಾಪುರಂನಲ್ಲಿ ನಂಬಿಕೆ, ಮೂಢನಂಬಿಕೆ ಮತ್ತು ಪವಾಡಗಳ ವಿಚಾರಗಳ ಕುರಿತು ಹೇಳುತ್ತದೆ.

ರಿಷಿ ಕೊನೆಯ ಬಾರಿಗೆ ರುದ್ರ ಗರುಡ ಪುರಾಣದಲ್ಲಿ ಕಾಣಿಸಿಕೊಂಡಿದ್ದರು. ಅಭಿಮನ್ಯು ಸೂರಿ ಲವ್ಸ್ ಸಂಧ್ಯಾ ಚಿತ್ರದಲ್ಲಿ ಕೊನೆಯ ಬಾರಿಗೆ ನಟಿಸಿದ್ದರು. ಇದೀಗ ಇಬ್ಬರು ಮಂಗಳಾಪುರಂ ಚಿತ್ರದ ಮೂಲಕ ಸಸ್ಪೆನ್ಸ್ ಥ್ರಿಲ್ಲರ್ ಕಥೆ ಹೇಳಲು ಮುಂದಾಗಿದ್ದಾರೆ.

ಚಿತ್ರವನ್ನು ವಿದ್ವಾನ್ ಪ್ರಸನ್ನ ತಂತ್ರಿ ಮೂಡುಬಿದಿರೆ ಮತ್ತು ರಾಮ್ ಪ್ರಸಾದ್ ನಿರ್ಮಿಸಿದ್ದಾರೆ. ಈ ಮೂಲಕ ಕನ್ನಡ ಚಿತ್ರರಂಗಕ್ಕೆ ಕಾಲಿಡುತ್ತಿದ್ದಾರೆ. ಚಿತ್ರಕ್ಕೆ ಅನೂಪ್ ಸೀಳಿನ್ ಅವರ ಸಂಗೀತ ಸಂಯೋಜನೆ ಮತ್ತು ಅಭಿಷೇಕ್ ಕಾಸರಗೋಡು ಅವರ ಛಾಯಾಗ್ರಹಣವಿದೆ.

# ಚಿಕ್ಕಮಗಳೂರು| ಹದ ಮಳೆ : ರೈತರ ಮೊಗದಲ್ಲಿ ಕಳೆ; ಕೃಷಿ ಚಟುವಟಿಕೆ ಚುರುಕು

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ನಿರಂತರವಾಗಿ ಮಳೆ ಸುರಿಯುತ್ತಿದ್ದು, ಕೃಷಿ ಚಟುವಟಿಕೆ ಚುರುಕುಗೊಂಡಿದೆ. ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದು, ರೈತರಲ್ಲಿ ಹೊಸ ಹುರುಪು ಉಂಟಾಗಿದೆ.

ಮಳೆ ಧಾರಾಕಾರವಾಗಿ ಸುರಿದು ಆಗಾಗ ಬಿಡುವು ನೀಡುತ್ತಿರುವುದು ರೈತರಲ್ಲಿ ಇನ್ನಿಲ್ಲದ ಸಮಾಧಾನ ತಂದಿದೆ. ಬಯಲು ಸೀಮೆಯಲ್ಲಿ ಬಿತ್ತನೆ ಕಾರ್ಯ-ಕ್ಕೆ ಸಿದ್ಧತೆಯನ್ನು ಬಹುತೇಕ ರೈತರು ಪೂರ್ಣಗೊಳಿಸಿದ್ದಾರೆ.

ಹೊಲಗಳನ್ನು ಹಸನುಗೊಳಿಸಿ ಬಿತ್ತನೆ ಕಾರ್ಯ ಆರಂಭಿಸಿದ್ದಾರೆ. ಕಡೂರು, ತರೀಕೆರೆ ಮತ್ತು ಅಜ್ಜಂಪುರ ಭಾಗದಲ್ಲಿ ಮೊದಲ ಹಂತದಲ್ಲಿ ಎಳ್ಳು ಬಿತ್ತನೆಗೆ ತಯಾರಿ ನಡೆದಿದೆ. ನಂತರ ಮುಸುಕಿನ ಜೋಳ ಮತ್ತು ಇತರ ಬೆಳೆಗಳು ಬಿತ್ತನೆಯಾಗಲಿವೆ.

ಹೆಸರು, ಉದ್ದು, ಹತ್ತಿ, ಅಲಸಂದೆ, ಎಳ್ಳು, ನೆಲಗಡಲೆ ಬಿತ್ತನೆ ಹೆಚ್ಚಾಗಲಿದೆ ಎಂದು ಕೃಷಿ ಇಲಾಖೆ ಅಂದಾಜಿಸಿದೆ. 9,155 ಹೆಕ್ಟೇರ್‌ನಲ್ಲಿ ಈ ಬೆಳೆಗಳು ಮುಂಗಾರು ಪೂರ್ವದಲ್ಲಿ ಬಿತ್ತನೆಯಾಗುವ ಅಂದಾಜಿದೆ. ಭತ್ತ, ಸೂರ್ಯಕಾಂತಿ, ರಾಗಿ, ಮುಸುಕಿನ ಜೋಳ ಸೇರಿ ಇತರ ಬೆಳೆಗಳು ಮುಂಗಾರು ಹಂಗಾಮಿನಲ್ಲಿ 80,935 ಮುಂಗಾರು ಹಂಗಾಮಿನಲ್ಲಿ ಬಿತ್ತನೆಯಾಗುವ ಅಂದಾಜನ್ನು ಕೃಷಿ ಇಲಾಖೆ ಹೊಂದಿದೆ.

ಬಿತ್ತನೆ ಬೀಜವನ್ನು ವಿವಿಧ ಏಜೆನ್ಸಿಗಳ ಮೂಲಕ ಕೃಷಿ ಇಲಾಖೆ ಈಗಾಗಲೇ ದಾಸ್ತಾನು ಮಾಡಿದೆ. 5,507 ಕ್ವಿಂಟಲ್ ಬಿತ್ತನೆ ಬೀಜದ ಬೇಡಿಕೆ ಇದ್ದು, ಅಷ್ಟೂ ಪ್ರಮಾಣದಲ್ಲಿ ಬಿತ್ತನೆ ಬೀಜದ ದಾಸ್ತಾನಿದೆ.



ಕೃಷಿ ಸಂಪರ್ಕ ಕೇಂದ್ರಗಳಿಗೆ 90 ಕ್ವಿಂಟಲ್‌ನಷ್ಟು ಬಿತ್ತನೆ ಬೀಜ ಸರಬರಾಜಾಗಿದ್ದು, ವಿತರಣೆ ಕೂಡ ಮಾಡಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಮಲೆನಾಡಿನಲ್ಲಿ ಕಾಫಿ, ಏಲಕ್ಕಿ, ಮೆಣಸು ಬೆಳೆಗೆ ಮುಂಗಾರು ಪೂರ್ವ ಮಳೆ ಹೆಚ್ಚು ಅನುಕೂಲ ಮಾಡಿದೆ.

### ಬಿತ್ತನೆಗೆ ಉತ್ತಮ ವಾತಾವರಣ

**ತರೀಕೆರೆ:** ತಾಲ್ಲೂಕು ವ್ಯಾಪ್ತಿಯಲ್ಲಿ ಪೂರ್ವ ಮುಂಗಾರು ಮಳೆ ಉತ್ತಮವಾಗಿದ್ದು ಹೆಸರು ಉದ್ದು ಎಳ್ಳು ಬಿತ್ತಲು ಉತ್ತಮ ವಾತಾವರಣವಿದೆ. ತಾಲ್ಲೂಕಿನಲ್ಲಿ ಹೆಚ್ಚಿನ ಭಾಗದಲ್ಲಿ ತೋಟಗಾರಿಕಾ ಬೆಳೆ ಅಡಿಕೆ ಇದ್ದು ಪೂರ್ವ ಮುಂಗಾರು ಬೆಳೆ ಬೆಳೆಯಲು ಹೆಚ್ಚಿನ ರೈತರು ಆಸಕ್ತಿ ತೋರುತ್ತಿಲ್ಲ. ಬಿತ್ತನೆಗೆ ಆಸಕ್ತಿ ತೋರುವ ರೈತರು ಕೃಷಿ ಇಲಾಖೆಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ರೈತರಿಗೆ ಅಗತ್ಯವಿರುವಷ್ಟು ಬಿತ್ತನೆ ಬೀಜಗಳನ್ನು ಸರಬರಾಜು ಮಾಡಲಾಗುವುದು. ಮತ್ತು ರೈತರಿಗೆ ಅಗತ್ಯಕ್ಕಿಂತ ಶೇ 15ರಷ್ಟು ಹೆಚ್ಚಿಗೆ ರಸಗೊಬ್ಬರ ದಾಸ್ತಾನಿದೆ ಎಂದು ಕೃಷಿ ಇಲಾಖಾ ಸಹಾಯಕ ನಿರ್ದೇಶಕ ಲೋಕೇಶ್ ಮಾಹಿತಿ ನೀಡಿದ್ದಾರೆ.

### ಶುಂಠಿ ಬೆಳೆ ಚಟುವಟಿಕೆ ಚುರುಕು

ಮೂಡಿಗೆರೆ: ಪೂರ್ವ ಮುಂಗಾರು ಬಿರುಸುಗೊಂಡ ಬೆನ್ನಲ್ಲೇ ಮಲೆನಾಡಿನಲ್ಲಿ ಶುಂಠಿ ತರಕಾರಿ ಬೆಳೆ ಚಟುವಟಿಕೆ ಚುರಿಕುಗೊಂಡಿವೆ. ತಾಲೂಕಿನಲ್ಲಿ ಮುಂಗಾರಿನಲ್ಲಿ ಚಿತ್ರದ ಬೆಳೆಯುವುದು ಸಂಪ್ರದಾಯಿಕವಾದರೂ ಭತ್ತದ ಬೆಳೆಯೊಳಗೆ ತರಕಾರಿ ಹಸಿ ಮೆಣಸು ಬೆಳೆಯುವುದು ವಾಡಿಕೆ. ಈಗಾಗಲೇ ಹಸಿ ಮೆಣಸು ತರಕಾರಿ ಬೆಳೆಗಳ ನಾಟಿ ಕಾರ್ಯ ಪೂರ್ಣಗೊಂಡಿದ್ದು ಕೆಲವೆಡೆ ಮೊದಲ ಫಸಲನ್ನು ಸಹ ತೆಗೆಯಲಾಗುತ್ತಿದೆ.

ಭತ್ತದ ಬದಲು ಶುಂಠಿ ಬೆಳೆಯುವ ರೈತರು ಮಳೆ ಬಿದ್ದ ಬೆನ್ನಲ್ಲೇ ಗದ್ದೆಗಳನ್ನು ಉಳುಮೆ ಮಾಡಿ ಹದಗೊಳಿಸಲಾಗಿದ್ದು ಬೀಜದ ಶುಂಠಿ ಖರೀದಿಯೂ ಬಹುತೇಕ ಮುಕ್ತಾಯ ಕಂಡಿದೆ. ಕೆಲವೆಡೆ ನಾಟಿ ಕಾರ್ಯವೂ ಪ್ರಾರಂಭವಾಗಿದ್ದು ಹದ ಮಳೆ ಆಗುತ್ತಿರುವುದರಿಂದ ರೈತರ ಮುಖದಲ್ಲಿ ಹರ್ಷ ಮೂಡಿದೆ. ಸಂಪ್ರದಾಯಿಕ ಬೆಳೆಯಾದ ಭತ್ತದ ಚಟುವಟಿಕೆಗಳು ಮೇ ಅಂತ್ಯದಿಂದ ಪ್ರಾರಂಭಗೊಳ್ಳಲಿದೆ.

### ಕೃಷಿಗೆ ಪೂರಕ

**ಕೊಪ್ಪ:** ತಾಲ್ಲೂಕಿನಲ್ಲಿ ಮಾರ್ಚ್‌ನಿಂದಲೇ ಮಳೆ ಆರಂಭಗೊಂಡಿದ್ದು ವಾರಕ್ಕೆರಡು ದಿನದಂತೆ ಸಾಧಾರಣ ಮಳೆಯಾಗಿದೆ. ಈ ಭಾಗದಲ್ಲಿ ಅಧಿಕವಾಗಿ ಬೆಳೆಯುವ ಅಡಿಕೆ ಕಾಫಿ ಏಲಕ್ಕಿ ಕಾಳು ಮೆಣಸು ಕೃಷಿಗೆ ಪೂರಕ ವಾತಾವರಣ ನಿರ್ಮಿಸಿದೆ. ಮೇಗುಂದ ಹೋಬಳಿ ವ್ಯಾಪ್ತಿಯ ಜಯಪುರ ಭಾಗದಲ್ಲಿ ಸಾಕಷ್ಟು ಮಳೆಯಾಗಿದೆ.

### ಗರಿಗೆದರಿಕೆ ಕೃಷಿ ಕಾರ್ಯ

**ಕಡೂರು:** ಮುಂಗಾರು ಪೂರ್ವ ಮಳೆ ತಾಲ್ಲೂಕಿನ ಕೆಲ ಭಾಗದಲ್ಲಿ ಸುರಿದಿರುವುದು ಕೃಷಿ ಚಟುವಟಿಕೆಗಳು ಗರಿಗೆದ ಕಾರಣವಾಗಿದೆ. ಸಾಮಾನ್ಯವಾಗಿ ಏಪ್ರಿಲ್ ತಿಂಗಳಿನಲ್ಲಿ ಮಳೆಯಾದರೆ ಹತ್ತಿ ಮತ್ತು ಈರುಳ್ಳಿ ಬೆಳೆಯಲು ಭೂಮಿ ಸಿದ್ಧತೆ ಅನುಕೂಲ. ಇದೀಗ ಕಡೂರು ಹೋಬಳಿ ರೈತರು ಭೂಮಿ ಸಿದ್ಧತೆಯಲ್ಲಿ ತೊಡಗಿದ್ದಾರೆ. ಹತ್ತಿಯನ್ನು ವಾಡಿಕೆಯಂತೆ(ಭರಣಿ ಮಳೆ) ಏಪ್ರಿಲ್ ಕಡೆಯ ವಾರದಿಂದ ಮೇ ಕಡೆಯವರೆಗೆ ಬಿತ್ತನೆ ಮಾಡಲಾಗುತ್ತದೆ.

ಜೂನ್ ಮಧ್ಯಭಾಗದಿಂದ ಈರುಳ್ಳಿ ಬಿತ್ತನೆ ಮಾಡಲಾಗುತ್ತದೆ. ಇವೆರಡೂ ಬೆಳೆ ಹಾಕಲು ಐದಾರು ಬಾರಿ ಉಳುಮ ಮಾಡಿ ಭೂಮಿಯನ್ನು ಸನ್ನದ್ಧ ಸ್ಥಿತಿಯಲ್ಲಿಡಲಾಗುತ್ತದೆ. ಈಗ ಬಂದಿರುವ ಮಳೆ ಈ ಕಾರ್ಯಗಳಿಗೆ ಅನುಕೂಲಕರವಾಗಿದೆ ಪಂಚನಹಳ್ಳಿ ಹೋಬಳಿಯಲ್ಲಿ ಹೆಚ್ಚು ಮಳೆಯಾಗಿಲ್ಲ. ಆದರೂ ಅಲ್ಲಿನ ರೈತರು ಹೆಸರುಉದ್ದು ಅಲಸಂದೆ ಬೆಳೆಯಲು ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ.

ಇನ್ನು ಹಿರೇನಲ್ಲೂರು ಹೋಬಳಿಯಲ್ಲಿ ಸೂರ್ಯಕಾಂತಿ ಚೌಳಹಿರಿಯೂರು ಭಾಗದಲ್ಲಿ ಶೇಂಗಾ ಬೆಳೆಯಲು ರೈತರು ಸಿದ್ಧತೆಯಲ್ಲಿದ್ದಾರೆ. ಮುಂಗಾರು ಪೂರ್ವ ಬಿತ್ತನೆಗೆ ಅನುಕೂಲವಾಗುವಂತೆ ಕೃಷಿ ಇಲಾಖೆ ಉದ್ದು ಅಲಸಂದೆ ಹೆಸರು ಸೂರ್ಯಕಾಂತಿ ಶೇಂಗಾ ಬಿತ್ತನೆ ಬೀಜಗಳನ್ನು ದಾಸ್ತಾನು ಮಾಡಿದೆ. ಗೊಬ್ಬರದ ಅಂಗಡಿಗಳಲ್ಲಿ ರಸಗೊಬ್ಬರಗಳೂ ಸಹ ಅಗತ್ಯಕ್ಕೆ ತಕ್ಕಷ್ಟು ಇವೆ ಎಂದು ಸಹಾಯಕ ಕೃಷಿ ನಿರ್ದೇಶಕ ಅಶೋಕ್ ತಿಳಿಸಿದರು.

# ಕೇಂದ್ರ ಸರ್ಕಾರ ಒಪ್ಪಿಗೆ ಕೊಟ್ಟರೆ ನಾಳೆಯೇ ಮಹದಾಯಿ ಯೋಜನೆ ಜಾರಿ: ಸಿಎಂ ಸಿದ್ದರಾಮಯ್ಯ ಘೋಷಣೆ

**ಬೆಳಗಾವಿ:** ಮಹಾದಾಯಿ, ಮೇಕೆದಾಟು ಯೋಜನೆಗಳಿಗೆ ಕೇಂದ್ರ ಸರಕಾರ ಒಪ್ಪಿಗೆಯನ್ನೆ ಕೊಡುತ್ತಿಲ್ಲ. ಒಪ್ಪಿಗೆ ಕೊಟ್ಟಿದ್ದೇ ಆದರೆ, ಯೋಜನೆಗಳನ್ನು ಆರಂಭಿಸಲು ನಮ್ಮ ಸರ್ಕಾರ ಸಿದ್ಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಿಸಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಕೃಷಿ ಇಲಾಖೆ ಸಹಾಯಧನದ ಅಡಿಯಲ್ಲಿ ಸುಮಾರು ರೂ.400 ಕೋಟಿ ವೆಚ್ಚದ ಕೃಷಿ ಯಂತ್ರಗಳು ಮತ್ತು ಸಲಕರಣೆಗಳನ್ನು ರೈತರಿಗೆ ವಿತರಿಸಿ, ಮಾತನಾಡಿದರು.

ಅರಣ್ಯ ಇಲಾಖೆ ಅನುಮತಿ ದೊರಕದಿರುವುದರಿಂದ ಮಹದಾಯಿ ಯೋಜನೆ ವಿಳಂಬವಾಗುತ್ತಿದೆ. ಕೇಂದ್ರ ಸರಕಾರ ಅನುಮತಿ ನೀಡಿದರೆ ನಾಳೆಯೇ ಕಾಮಗಾರಿ ಆರಂಭ ಮಾಡುತ್ತೇವೆ ಎಂದು ಹೇಳಿದರು.

ಮಹದಾಯಿ, ಮೇಕೆದಾಟು, ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಆಲಮಟ್ಟಿ ಜಲಾಶಯ ಎತ್ತರ ಹೆಚ್ಚಳ ಸೇರಿದಂತೆ ರಾಜ್ಯದಲ್ಲಿ ನನೆಗುದಿಗೆ ಬಿದ್ದಿರುವ ಎಲ್ಲ ನೀರಾವರಿ ಯೋಜನೆಗಳನ್ನು ತಕ್ಷಣ ಆರಂಭಿಸಲು ರಾಜ್ಯ ಸರಕಾರ ಸಿದ್ಧವಿದೆ. ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಸರಕಾರ ಮಧ್ಯಸ್ಥಿಕೆ ವಹಿಸುವ ಮೂಲಕ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ತಿಳಿಸಿದರು.

ಮಹದಾಯಿ ಯೋಜನೆ ವಿಳಂಬವಾಗಲು ಕೇಂದ್ರ ಸರಕಾರವೇ ಕಾರಣ. ಈ ಹಿಂದೆ ಬಿ.ಎಸ್.ಯಡಿಯೂರಪ್ಪ ಬಿಜೆಪಿ ಅಧಿಕಾರಕ್ಕೆ ಬಂದರೆ ಮರುದಿನವೇ ಮಹದಾಯಿ ಯೋಜನೆ ಆರಂಭಿಸುತ್ತೇವೆ ಎಂದಿದ್ದರು. ಆದರೆ, ಏನೂ ಮಾಡಲಿಲ್ಲ. ಕೇಂದ್ರದಲ್ಲಿ ನಮ್ಮ ಸಂಸದರು ಮಾತನಾಡುವುದಿಲ್ಲ. ಇಲ್ಲಿ ಬಂದು ರಾಜ್ಯ ಸರಕಾರದ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಾರೆಂದು ಕಿಡಿಕಾರಿದರು.



ಬಳಿಕ ರೈತರಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳ ಕುರಿತು ಮಾತನಾಡಿದ ಅವರು, ಒಣ ಬೇಸಾಯಗಾರರಿಗೆ ಅನುಕೂಲ ಕಲ್ಪಿಸಲು ಕೃಷಿ ಭಾಗ್ಯ ಜಾರಿಗೆ ತರಲಾಗಿದ್ದು, 200 ಕೋಟಿ ರೂಪಾಯಿ ಮೀಸಲಿಡಲಾಗಿದೆ. ರಾಜ್ಯದಲ್ಲಿ ಕಳೆದ ವರ್ಷ 25,000 ಕ್ಕೂ ಹೆಚ್ಚು ಕೃಷಿ ಹೊಂಡಗಳನ್ನು ನಿರ್ಮಿಸಲಾಗಿದೆ. ಸರ್ಕಾರದಿಂದ ನೀರಾವರಿಗೆ ಆದ್ಯತೆ ನೀಡಲಾಗಿದ್ದು, ಬೃಹತ್ ಮತ್ತು ಸಣ್ಣ ನೀರಾವರಿಗೆ 25 ಸಾವಿರ ಕೋಟಿಗೂ ಅಧಿಕ ಹಣವನ್ನು ಖರ್ಚು ಮಾಡಲಾಗುತ್ತಿದೆ. ರಾಜ್ಯದ ಎಲ್ಲ ನೀರಾವರಿ ಯೋಜನೆ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಬೆಳಗಾವಿ ವಿಭಾಗದ ವ್ಯಾಪ್ತಿಯ ರೈತರಿಗೆ ಕಳೆದ ವರ್ಷ ಕೂಡ ರೈತರಿಗೆ ಕೃಷಿ ಯಂತ್ರೋಪಕರಣಗಳನ್ನು ನೀಡಲಾಗಿದೆ. ಅದೇ ರೀತಿ ಈ ಬಾರಿ ಕೂಡ ಕೃಷಿ ಇಲಾಖೆಯ ಸಹಾಯಧನದಡಿಯಲ್ಲಿ ವಿವಿಧ ಬಗೆಯ ಸವಲತ್ತುಗಳನ್ನು ನೀಡಲಾಗಿದೆ. ಕೃಷಿ ಪ್ರಧಾನವಾಗಿರುವ ದೇಶದಲ್ಲಿ ರೈತರಿಗೆ ಸಹಾಯ ಮಾಡಬೇಕಾಗಿರುವುದು ಸರಕಾರದ ಜವಾಬ್ದಾರಿಯಾಗಿದೆ. ಆದ್ದರಿಂದ ಸರಕಾರ ರೈತರ ಹಿತರಕ್ಷಣೆಗೆ ಬದ್ಧವಾಗಿ ಕಾರ್ಯನಿರ್ವಹಿಸುತ್ತಿದೆ.

ನೀರಾವರಿಗೆ ಒತ್ತು ನೀಡಲಾಗುತ್ತಿದ್ದು, ಬೆಳಗಾವಿ ವಿಭಾಗದಲ್ಲಿ ಕಬ್ಬು ಬೆಳೆಗಾರರ ಸಂಖ್ಯೆ ಹೆಚ್ಚಾಗಿರುವುದರಿಂದ ಸಾಮಾನ್ಯ ವರ್ಗದ ರೈತರಿಗೆ ಶೇ.40 ಮತ್ತು ಪರಿಶಿಷ್ಟ ವರ್ಗದ ರೈತರಿಗೆ ಶೇ.50 ಸಹಾಯಧನದಲ್ಲಿ ಅತ್ಯಾಧುನಿಕ ಕಬ್ಬು ಕಟಾವು ಯಂತ್ರ ನೀಡಲಾಗುತ್ತಿದೆ ಎಂದರು.

ಕೃಷಿ ಕಾರ್ಮಿಕರ ಸಂಖ್ಯೆ ಕಡಿಮೆಯಾಗಿರುವುದರಿಂದ ಬೇಸಾಯ ಕಷ್ಟಕರವಾಗಿದೆ. ಆದ್ದರಿಂದ ಕೃಷಿ ಯಂತ್ರೋಪಕರಣಗಳನ್ನು ಸರಕಾರದ ವತಿಯಿಂದ ವಿತರಿಸಲಾಗುತ್ತಿದೆ. ಈ ಬಾರಿ ಉತ್ತಮ ಮಳೆಯ ಮುನ್ಸೂಚನೆ ಇದೆ. ಮುಂಬರುವ ದಿನಗಳಲ್ಲಿ ಆಹಾರ ಉತ್ಪಾದನೆ ಇನ್ನೂ ಹೆಚ್ಚಾಗಲಿ. ಸರಕಾರ ಅಗತ್ಯ ನೆರವು ನೀಡಲಿದೆ ಎಂದು ಭರವಸೆ ನೀಡಿದರು.

ಕೃಷಿ ಪ್ರಧಾನವಾಗಿರುವ ದೇಶದಲ್ಲಿ ರೈತರಿಗೆ ಸಹಾಯ ಮಾಡಬೇಕಾಗಿರುವುದು ಸರಕಾರದ ಜವಾಬ್ದಾರಿಯಾಗಿದೆ. ಆದ್ದರಿಂದ ಸರಕಾರ ರೈತರಹಿತರಕ್ಷಣೆಗೆಬದ್ಧವಾಗಿಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

# ಮುತ್ತಪ್ಪ ರೈ ಪುತ್ರ ರಿಕ್ಕಿ ರೈ ಹತ್ಯೆಗೆ ಯತ್ನ: ಶೂಟೌಟ್ ಹಿಂದೆ ಮಲತಾಯಿ ಸಹಚರರ ಕೈವಾಡ..!

**ಬೆಂಗಳೂರು:** ಮುತ್ತಪ್ಪ ರೈ ಪುತ್ರನ ಮೇಲಿನ ಗುಂಡಿನ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ರಿಕ್ಕಿ ರೈ ಅವರ ಹೇಳಿಕೆಗಳನ್ನು ದಾಖಲಿಸಿಕೊಂಡಿದ್ದು, ಹೇಳಿಕೆ ವೇಳೆ ಮಹತ್ವದ ಮಾಹಿತಿ ನೀಡಿ-ದ್ದಾರೆಂದು ತಿಳಿದುಬಂದಿದೆ.



ಬಿಡದಿ ಫಾರ್ಮ್ ಹೌಸ್ ಬಳಿ ಮೂವರು ದುಷ್ಕರ್ಮಿಗಳು ರಿಕ್ಕಿ ರೈ ಮೇಲೆ ಗುಂಡಿನ ದಾಳಿ ನಡೆಸಿ ಎಸ್ಕೇಪ್ ಆಗಿದ್ದರು. ಪರಿಣಾಮ ರಿಕ್ಕಿ ರೈ ಅವರ ಮೂಗು ಹಾಗೂ ಬಲ ಬುಜಕ್ಕೆ ಗುಂಡು ತಗುಲಿತ್ತು. ಆ ಕೂಡಲೇ ಅವರನ್ನು ಮಣಿಪಾಲ್ ಆಸ್ಪತ್ರೆಗೆ ದಾಖಲಿಸಲಾಗಿತ್ತು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಡದಿ ಪೊಲೀಸರು ತನಿಖೆಯನ್ನು ಚುರುಕುಗೊಳಿಸಿದ್ದು, ರಿಕ್ಕಿ ರೈ ಅವರ ಹೇಳಿಕೆಯನ್ನು ದಾಖಲಿಸಿಕೊಂಡಿದ್ದಾರೆ.

ಮಣಿಪಾಲ್ ಆಸ್ಪತ್ರೆಯಲ್ಲಿ ದಾಖಲಾಗಿರುವ ರಿಕ್ಕಿ ರೈ ಅವರು ಪೊಲೀಸರ ಮುಂದೆ ಘಟನೆ ಬಗ್ಗೆ ವಿವರವಾಗಿ ಹೇಳಿಕೆ ನೀಡಿದ್ದಾರೆ.

ಎಫ್‌ಐಆರ್‌ನಲ್ಲಿ ಉಲ್ಲೇಖಿಸಿರುವ ಆರೋಪಿಗಳಾದ ರಾಕೇಶ್ ಮಲ್ಲಿ, ಅನುರಾಧ, ನಿತೇಶ್ ಶೆಟ್ಟಿ, ವೈದ್ಯನಾಥನ್ ಇವರೇ ನನ್ನ ಮೇಲೆ ಅಟ್ಯಾಕ್ ಮಾಡಿಸಿದ್ದಾರೆ ಎಂದು ಹೇಳಿಕೆ ನೀಡಿದ್ದಾರೆಂದು ತಿಳಿದುಬಂದಿದೆ. ಆಸ್ತಿ ವಿಚಾರವೇ ಗುಂಡಿನ ದಾಳಿಗೆ ಕಾರಣ ಎಂದು ಹೇಳಿದ್ದಾರೆಂದು ಮೂಲಗಳು ತಿಳಿಸಿವೆ.

ನಾನು ರಷ್ಯಾದಲ್ಲಿದ್ದೆ, ಜಾಮೀನು ವಿವಾದ ಸಂಬಂಧ ಕೋರ್ಟ್ ನಲ್ಲಿ ಕೇಸ್ ಇತ್ತು. ಹೀಗಾಗಿ, ಬೆಂಗಳೂರಿಗೆ ಬಂದಿದ್ದೆ. ನಾನು ಬೆಂಗಳೂರಿನ ಸದಾಶಿವನಗರ ಹಾಗೂ ಬಿಡದಿ ವಾಸವಿರುತ್ತಿದ್ದೆ. 12 ಗಂಟೆಗೆ ಎರಡು ಕಾಲ್ ಬಂದಿತ್ತು. ಹಾಗಾಗಿ ಹೊರಟಿದ್ದೆ. ಸದಾಶಿವನಗರ ಮನೆಗೆ ಹೋಗುವಾಗ ಮನೆಯಿಂದ ಹೊರಗಿನ ರಸ್ತೆಗೆ ಬಂದಾಗ ದಾಳಿ ನಡೆಸಲಾಯಿತು. ನನ್ನ ಕೈ ಹಾಗೂ ಮುಗಿಗೆ ಗುಂಡು ತಗಲಿದೆ. ನನ್ನ ಸ್ನೇಹಿತರು ಹಾಗೂ ಡ್ರೈವರ್ ಆಸ್ಪತ್ರೆಗೆ ಸೇರಿಸಿದರು. ರಾಕೇಶ್ ಮಲ್ಲಿ ಹಾಗೂ ಅನುರಾಧರೇ ಅಟ್ಯಾಕ್ ಮಾಡಿಸಿದ್ದಾರೆ ಎಂದು ಹೇಳಿದ್ದಾರೆಂದು ತಿಳಿದುಬಂದಿದೆ.

# ಹವಾಮಾನ ವೈಪರೀತ್ಯ, ಉತ್ಪಾದನೆಯಲ್ಲಿ ಕುಸಿತ: ಕಾಳು ಮೆಣಸಿನ ಬೆಲೆ ಕೆಜಿಗೆ 1000 ರೂ.ಗೆ ಏರಿಕೆ ?

**ಬೆಂಗಳೂರು:** ಕಳೆದ ಎರಡು ವರ್ಷಗಳಿಂದ ಶೇಕಡ 40 ರಷ್ಟು ದರ ಏರಿಕೆ ಕಂಡಿರುವ ಕರಿಮೆಣಸು ಪೂರೈಕೆ ಕೊರತೆ ಮತ್ತು ಬೇಡಿಕೆ ಹೆಚ್ಚಳದ ಪರಿಣಾಮ ಮತ್ತಷ್ಟು ದುಬಾರಿಯಾಗುವ ಸಾಧ್ಯತೆ ಇದೆ.

ಕಾಳು ಮೆಣಸು ದರ ಕೆಜಿಗೆ 900 ರಿಂದ 1,100 ರೂಪಾಯಿವರೆಗೆ ಏರಿಕೆಯಾಗುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ. ಕರ್ನಾಟಕದಲ್ಲಿ ಹವಾಮಾನ ಬದಲಾವಣೆ, ಅಕಾಲಿಕ ಮಳೆ, ಬೆಳೆಗೆ ರೋಗಬಾಧೆ ಇತ್ಯಾದಿ ಕಾರಣಗಳಿಂದ ಬೆಳೆ ಕುಸಿತವಾಗಿದೆ.

ಎರಡು ವರ್ಷಗಳ ಹಿಂದೆ ಕೆಜಿಗೆ ರೂ. 400-450 ರ ಆಸುಪಾಸಿನಲ್ಲಿದ್ದ ಮೆಣಸಿನ ಬೆಲೆ ಈಗ ರೂ. 700 ಕ್ಕೆ ಏರಿದೆ. ವಿಯೆಟ್ನಾಂ ಮತ್ತು ಬ್ರೆಜಿಲ್‌ನಂತಹ ದೇಶಗಳಲ್ಲಿ ಕೊಯ್ಲು ಕಡಿಮೆಯಾಗುವುದರಿಂದ ಜಾಗತಿಕ ಪೂ-ರೈಕೆ ಬಿಕ್ಕಟ್ಟು ಉಂಟಾಗಿದ್ದು, ಬೆಲೆಗಳ ಮೇಲೆ ಒತ್ತಡ ಹೆಚ್ಚಿದೆ ಎಂದು ಕರ್ನಾಟಕ ಸಾಂಬಾರು ಸಂಘ ಮತ್ತು ಚಿಕ್ಕಮಗಳೂರು ಪ್ಲಾಂಟರ್ಸ್ ಅಸೋಸಿಯೇಷನ್‌ನ ಪ್ಲಾಂಟರ್ಸ್ ಅಸೋಸಿಯೇಷನ್‌ನ ಪ್ಲಾಂಟರ್ಸ್ ಹೇಳಿದ್ದಾರೆ.

ಬರಗಾಲದಿಂದಾಗಿ ಹೂಬಿಡುವಿಕೆ ವಿಳಂಬವಾಯಿತು ಮತ್ತು ನಂತರ ಹಠಾತ್ ಮಳೆಯಿಂದಾಗಿ ಬೆಳೆಯ ಮೇಲೆ ಪರಿಣಾಮ ಬೀರಿತು. ಇದು ಒಟ್ಟಾರೆ ಉತ್ಪಾದನೆ ಮೇಲೆ ಮೇಲೆ ಪರಿಣಾಮ ಬೀರಿತ್ತು. ಇದರಿಂದಾಗಿ ಪ್ರಸಕ್ತ ಋತುವಿನಲ್ಲಿ ಉತ್ಪಾದನೆಯು ಶೇ 40 ರಷ್ಟು ಕುಸಿತ ಕಂಡಿದೆ ಎಂದು ಕರ್ನಾಟಕ ಸ್ಪೈಸ್ ಅಸೋಸಿಯೇಷನ್?ನ ಚಂದ್ರಶೇಖರ ರೆಡ್ಡಿ ತಿಳಿಸಿದ್ದಾರೆ. ಕಾಳು ಮೆಣಸು ಬೆಳೆಗೆ



ತೇವಾಂಶವುಳ್ಳ ಗಾಳಿ, ನೆರಳು ಪ್ರದೇಶ ಮತ್ತು ಚೆನ್ನಾಗಿ ನೀರಿನ ಅಂಶವಿರುವ ಮಣ್ಣು ಬೇಕಾಗುತ್ತದೆ. ಪಶ್ಚಿಮ ಘಟ್ಟಗಳು ಮತ್ತು ಸುತ್ತಲಿನ ಪ್ರದೇಶಗಳಲ್ಲಿ ಕರಿಮೆಣಸು ಉತ್ಪಾದನೆಗೆ ಪೂರಕ ವಾತಾವರಣ ಇವೆ.

ಆದರೂ, ಕರ್ನಾಟಕದ ಅತಿಹೆಚ್ಚು ಕರಿಮೆಣಸು ಬೆಳೆಯುವ ಪ್ರದೇಶಗಳಾದ ಕೊಡಗು, ಚಿಕ್ಕಮಗಳೂರುಗಳಲ್ಲಿ ಹವಾಮಾನ ಬದಲಾವಣೆಯ ಹೊಡೆತ ಬಿದ್ದಿದೆ. ಇದ-ರಿಂದಾಗಿ ಬೆಳೆಯಲ್ಲಿ ಸ್ಥಿರತೆ ಕಾಯ್ದುಕೊಳ್ಳುವುದು ಕಷ್ಟಕರವಾಗಿ ಪರಿಣಮಿಸಿದೆ ಎಂದು ಕೃಷಿಕರು ತಿಳಿಸಿದ್ದಾರೆ. ಮಣ್ಣಿನಲ್ಲಿ ತೇವಾಂಶದ ಮಟ್ಟದ ಏರುಪೇರಿನಿಂದಾಗಿ ಶಿಲೀಂಧ್ರ ಸೋಂಕುಗಳೂ ಹೆಚ್ಚಾಗಿವೆ. ಇದು ಬೆಳೆ ಕುಸಿತಕ್ಕೆ ಕಾರಣವಾಗಿದೆ ಎಂದೂ ಅವರು ತಿಳಿಸಿದ್ದಾರೆ.

ಒಂದು ಬಳ್ಳಿ ಸೋಂಕಿಗೆ ಒಳಗಾದ ನಂತರ, ವಿಶೇಷವಾಗಿ ಬೇರು ಕೊಳೆತದಿಂದ, ಸಂಪೂರ್ಣವಾಗಿ ಹಾಳಾಗುತ್ತದೆ. ಮರು ನಾಟಿ ಮಾಡಲು ವರ್ಷಗಳೇ ಬೇಕಾಗುತ್ತದೆ. ಹವಾಮಾನ ಅಸ್ಥಿರತೆಯೊಂದಿಗೆ, ಇದು ಇಳುವರಿಯಲ್ಲಿ ತೀವ್ರ ಕುಸಿತಕ್ಕೆ ಕಾರಣವಾಗಿದೆ" ಎಂದು ರೆಡ್ಡಿ ಹೇಳಿದರು.

ಮುಂದಿನ ಎರಡು ತಿಂಗಳವರೆಗೆ ಹೊಸ ಬೆಳೆ ಮಾರುಕಟ್ಟೆ ಪ್ರವೇಶಿಸುವ ಸಾಧ್ಯತೆ ಇಲ್ಲ. ಈ ಪೂರೈಕೆ ಬಿಕ್ಕಟ್ಟು ಮುಂಬರುವ ತಿಂಗಳುಗಳಲ್ಲಿ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಚಿಕ್ಕಮಗಳೂರು ಪ್ಲಾಂಟರ್ಸ್ ಅಸೋಸಿಯೇಷನ್‌ನ ಜಗದೀಶ ಎಂಕೆ ಅಭಿಪ್ರಾಯಪಟ್ಟಿದ್ದಾರೆ.

# 3 ವರ್ಷದ ಮಗುವಿದೆ ಎಂದು ಅಂಗಲಾಚಿದರೂ ಗುಂಡು ಹೊಡೆದೇ ಬಿಟ್ಟರು...!

**ಬೆಂಗಳೂರು:** 3 ವರ್ಷದ ಮಗುವಿದೆ ನಮ್ಮನ್ನು ಬಿಟ್ಟುಬಿಡಿ ಎಂದು ಅಂಗಲಾಚಿದರೂ ಕಿವಿಗೊಡದ ಉಗ್ರರು, ನಾವಿಲ್ಲಿ ಕಷ್ಟದಲ್ಲಿದ್ದೇವೆ. ನೀವು ಹೇಗೆ ಸಂಭ್ರಸಲು ಬಿಡುತ್ತೇವೆಂದು ಪತಿಗೆ ಗುಂಡು ಹೊಡೆದೇ ಬಿಟ್ಟರು ಎಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕರ ದಾಳಿಯಲ್ಲಿ ಪ್ರಾಣ ಕಳೆದುಕೊಂಡ ಭರತ್ ಅವರ ಪತ್ನಿ ಡಾ. ಸುಜಾತಾ ಅವರು ಕಣ್ಣೀರಿಟ್ಟಿದ್ದಾರೆ.

ಏಪ್ರಿಲ್ 18 ರಂದು ಕುಟುಂಬವು ಬೆಂಗಳೂರಿನಿಂದ ಕಾಶ್ಮೀರಕ್ಕೆ ಪ್ರವಾಸಕ್ಕೆ ಹೋಗಿತ್ತು. ಭಯೋತ್ಪಾದಕ ದಾಳಿಯ ದಿನವನ್ನು ಸುಜಾತಾ ಅವರು ಸ್ಮರಿಸಿದ್ದು, ಪತಿಯ ನೆನೆದು ಕಣ್ಣೀರಿಟ್ಟಿದ್ದಾರೆ.

ನಾವು ಮಂಗಳವಾರ ಬೆಳಿಗ್ಗೆ ಪಹಲ್ಗಾಮ್‌ಗೆ ಹೋಗಿದ್ದೆವು. ಅಲ್ಲಿಂದ ನಾವು ಪೈನ್ ಮರಗಳಿಂದ ಆವೃತವಾದ ಬೈಸರನ್ ಎಂಬ ದೊಡ್ಡ ಹುಲ್ಲುಗಾವಲು ತಲುಪಿದೆವು. ಅದು ಮಿನಿ ಸ್ವಿಟ್ಜರ್‌ಲ್ಯಾಂಡ್‌ನಂತೆ ಕಾಣುತ್ತಿತ್ತು. ಪ್ರವಾಸಿಗರು ಸಾಂಪ್ರದಾಯಿಕ ಕಾಶ್ಮೀರಿ ಉಡುಪನ್ನು ಧರಿಸಿ ಫೋಟೋಗಳನ್ನು ತೆಗೆದುಕೊಳ್ಳಲು ಹಲವಾರು ಟೆಂಟ್ ಗಳಿದ್ದವು. ಮಧ್ಯಾಹ್ನ 1.30 ಆಗಿದ್ದರಿಂದ ಹಸಿವಾಗಿತ್ತು. ಹೀಗಾಗಿ ಹಿಂತಿರುಗಲು ನಿರ್ಧರಿಸಿದ್ದೆವು. ಈ ವೇಳೆ ಇದ್ದಕ್ಕಿದ್ದಂತೆ ಗುಂಡಿನ ಮೊರೆತದ ಶಬ್ಧ ಕೇಳಿಸಲು ಆರಂಬವಾಯಿತು. ಮೊದಲಿಗೆ ಪಟಾಕಿ ಶಬ್ಧವಿರಬೇಕು, ಕಾಡು ಪ್ರಾಣಿಗಳ ಹೆದರಿಸಲು ಸಿಡಿಸುತ್ತಿರಬಹುದು ಎಂದೇ ಎಲ್ಲರೂ ಭಾವಿಸಿದ್ದೆವು. ಆದರೆ, ಶಬ್ಧ ತೀವ್ರಗೊಳ್ಳುತ್ತಿದ್ದಂತೆ ಸ್ಥಳದಲ್ಲಿ ಆತಂಕದ ವಾತಾವರಣ ನಿರ್ಮಾಣವಾಯಿತು. ಬಳಿಕ ದಾಳಿ ನಡೆಸಲಾಗಿದೆ ಎಂಬುದು ನಮಗೆ ತಿಳಿಯಿತು. ಅಡಗಿಕೊಳ್ಳಲು ಟೆಂಟ್ ಕಡೆಗೆ ಓಡಿದೆವು.

ನಮ್ಮಿಂದ ಸುಮಾರು 500 ಮೀಟರ್ ದೂರದಲ್ಲಿ ಮತ್ತೊಂದು ಜೋಡಿಯಿತ್ತು. ಅಲ್ಲಿ ಒಬ್ಬ ವ್ಯಕ್ತಿಗೆ ಗುಂಡು ಹಾರಿಸಿ ಹತ್ಯೆ ಮಾಡಿದರು. ಕೆಲವು ಕ್ಷಣಗಳ ನಂತರ ಓರ್ವ



ಭಯೋತ್ಪಾದಕ ನನ್ನ ಗಂಡನ ಹಿಂದೆ ನಿಂತನು. ಭರತ್ ನನಗೆ 'ಚಿಂತಿಸಬೇಡಿ. ಶಾಂತವಾಗಿರಿ ಎಂದು ಹೇಳುತ್ತಲೇ ಇದ್ದರು. ಅವರು ನಮ್ಮನ್ನು ರಕ್ಷಿಸಲು ಪ್ರಯತ್ನಿಸುತ್ತಿದ್ದರು.

ನನಗೆ ಮಗುವಿದೆ, ದಯವಿಟ್ಟು ಗುಂಡು ಹಾರಿಸಬೇಡಿ' ಎಂದು ಹೇಳಿದರು. ನಮ್ಮ ಮಗನನ್ನು ಸಹ ತೋರಿಸಿದನರು. ಆದ-ರೆ, ಭಯೋತ್ಪಾದಕ ಭರತ್ ತಲೆಗೆ ಎರಡು ಬಾರಿ ಗುಂಡು ಹಾರಿಸಿದ. ನನ್ನ ಪತಿ ನಮ್ಮ ಕಣ್ಣ ಮುಂದೆಯೇ ನೆಲಕ್ಕುರುಳಿದರು. ನಾವಿಲ್ಲಿ ಕಷ್ಟದಲ್ಲಿರುವಾಗ ನೀವು ಹೇಗೆ ಸಂಭ್ರಮಿಸುತ್ತೀರಿ? ನೀವು ಇಲ್ಲಿಗೆ ಆನಂದಿಸಲು ಬಂದಿದ್ದೀರಿ ಎಂದು ಭಯೋತ್ಪಾದಕ ಹೇಳಿದ್ದು ನನಗೆ ಕೇಳಿಸಿತು ಎಂದು ಸುಜಾತಾ ಅವರು ಹೇಳಿದ್ದಾರೆ.

ನಾವು ಎಲ್ಲಿಂದ ಬಂದವರು ಅಥವಾ ಯಾವ ಧರ್ಮಕ್ಕೆ ಸೇರಿದವರು ಎಂದು ಭಯೋತ್ಪಾದಕ ಕೇಳಲಿಲ್ಲ. ಅವನು ನನ್ನ ಗಂಡನಿಗೆ ಗುಂಡು ಹಾರಿಸಿದನು. ಪತಿ ನೆಲಕ್ಕುರುಳುತ್ತಿದ್ದಂತೆಯೇ ಮಗನನ್ನು ಉಳಿಸಿಕೊಳ್ಳಲು ಪತಿಯ ಜೇಬಿನಲ್ಲಿದ್ದ ದಾಖಲೆಗಳು ಮತ್ತು ಮೊಬೈಲ್ ಫೋನ್ ತೆಗೆದುಕೊಂಡು ಓಡಿಹೋದೆ. ನಮ್ಮ ಸುತ್ತಲೂ ಗುಂಡಿನ ಮೊರೆತದ ಶಬ್ಧ ಕೇಳಿಸುತ್ತಲೇ ಇತ್ತು. ಎಲ್ಲಿ ನೋಡಿದರೂ ಶವಗಳು ಬಿದ್ದಿರುವುದು ಕಂಡು ಬರುತ್ತಿತ್ತು. ನಾವು ಮೂವರು ಭಯೋತ್ಪಾದಕರನ್ನು ನೋಡಿದ್ದೇನೆ. ಪಹಲ್ಗಾಮ್ ಪಟ್ಟಣದಲ್ಲಿ ಭಾರೀ ಭದ್ರತೆ ಇತ್ತು, ಆದರೆ ಬೆಟ್ಟದ ತುದಿಯಲ್ಲಿರುವ ಬೈಸರನ್‌ನಲ್ಲಿ ಯಾವುದೇ ಭದ್ರತೆ ಇರಲಿಲ್ಲ ಎಂದು ತಿಳಿಸಿದ್ದಾರೆ.

# ಏ.30ರಂದು ಶ್ರೀ ಬಸವೇಶ್ವರ ಜಯಂತಿ

**ಚಿತ್ರದುರ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಚಿತ್ರದುರ್ಗ ಇವರ ಸಂಯುಕ್ತಾಶ್ರಯದಲ್ಲಿ "ಕರ್ನಾಟಕದ ಸಾಂಸ್ಕೃತಿಕ ನಾಯಕ" ಶ್ರೀ ಬಸವೇಶ್ವರ ಜಯಂತಿ ಇದೇ ಏಪ್ರಿಲ್ 30ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ. ಕಾರಜೋಳ, ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಬಿ.ಜಿ. ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ. ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ. ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ. ಎಂ. ಚಂದ್ರಪ್ಪ, ವಿಧಾನಪರಿಷತ್ ಸದಸ್ಯರುಗಳಾದ ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಡಿ.ಟಿ. ಶ್ರೀನಿವಾಸ್ ಭಾಗವಹಿಸುವರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ. ಬಿ. ಯೋಗೇಶ್ ಬಾಬು, ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ರಾಘವೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ವೀರಶೈವ ಸಮಾಜದ ಅಧ್ಯಕ್ಷ ಹೆಚ್.ಎನ್.ತಿಪ್ಪೇಸ್ವಾಮಿ, ಕಾರ್ಯದರ್ಶಿ ಪಿ.ವೀರೇಂದ್ರ ಕುಮಾರ್, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಶಿವಮೂರ್ತಿ ಮಹಡಿ, ಪ್ರಧಾನ ಕಾರ್ಯದರ್ಶಿ ಎಂ.ಶಶಿಧರ ಬಾಬು, ವೀರಶೈವ ಲಿಂಗಾಯತ ಮಹಾಸಭಾ ಖಜಾಂಚಿ ಜಾಲಿಕಟ್ಟೆ ರುದ್ರಪ್ಪ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ಚುನಾಯಿತ ನಗರಸಭಾ ಸದಸ್ಯರು ಹಾಗೂ ಜಿಲ್ಲೆಯ ವೀರಶೈವ ಸಮಾಜದ ಮುಖಂಡರು, ಗಣ್ಯರು ಪಾಲ್ಗೊಳ್ಳುವರು. ಚಿತ್ರದುರ್ಗ ಜ್ಞಾನಭಾರತಿ ವಿದ್ಯಾಸಂಸ್ಥೆ ಪ್ರಾಂಶುಪಾಲ ಡಾ.ಬಿ.ಎಂ.ಪ್ರಜ್ವಲ್ ಉಪನ್ಯಾಸ ನೀಡುವರು. ಚಿತ್ರದುರ್ಗದ ಶ್ರೀ ಗಾನಯೋಗಿ ಸಂಗೀತ ಬಳಗದಿಂದ ಗೀತಗಾಯನ ನಡೆಯಲಿದೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**